# ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1994

## ಪ್ರಕರಣಗಳ ಪಟ್ಟಿ

ಉದ್ದೇಶ ಮತ್ತು ಕಾರಣಗಳ ಹೇಳಿಕೆ

ಪ್ರಕರಣಗಳು:

### ಅಧ್ಯಾಯ I

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.
2. ಪರಿಭಾಷೆಗಳು.

### ಅಧ್ಯಾಯ II

3. ಪ್ರಾಧಿಕಾರದ ರಚನೆ.
4. ಪದಾವಧಿ ಮತ್ತು ಸೇವಾ ಷರತ್ತುಗಳು.
5. ಹುದ್ದೆಯ ಸದಸ್ಯತ್ವಕ್ಕೆ ಅನರ್ಹತೆ.
6. ಸದಸ್ಯನನ್ನು ತೆಗೆದುಹಾಕುವುದು.
7. ಕಾರ್ಯದರ್ಶಿ.
8. ಪ್ರಾಧಿಕಾರದ ಅಧಿಕಾರಿಗಳು ಮತ್ತು ಸೇವಾ ಷರತ್ತುಗಳು.
9. ಪ್ರಾಧಿಕಾರದ ಸಭೆಗಳು.
10. ಸೂಕ್ತವಾದುದೆಂದು ಮತ್ತು ಮಾನ್ಯವಾದುದೆಂದು ಭಾವಿಸಲಾಗುವ ವ್ಯವಹರಣೆಗಳು.
11. ಉಪ ಸಮಿತಿ.
12. ಉಪ ಸಮಿತಿಯ ಅಧಿಕಾರಗಳು ಮತ್ತು ಕರ್ತವ್ಯಗಳು.
13. ತಜ್ಞರ ಸೇವೆಗಳನ್ನು ಪಡೆದುಕೊಳ್ಳುವುದು.

### ಅಧ್ಯಾಯ III

14. ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.
15. ಪ್ರಾಧಿಕಾರದ ಪ್ರಕಾರ್ಯಗಳು.
16. ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸಲು ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡುವುದು.
17. ಮಾಹಿತಿ ಪಡೆದುಕೊಳ್ಳುವುದು.
18. ಪ್ರಾಧಿಕಾರದ ಸಲಹೆಗಳು.
19. ಕರ್ತವ್ಯ ಲೋಪವನ್ನು ದಾಖಲಿಸುವ ಮತ್ತು ನೇಮಕಾತಿ ಪ್ರಾಧಿಕಾರಕ್ಕೆ ತಿಳಿಸುವ ಅಧಿಕಾರ.

### ಅಧ್ಯಾಯ IV

20. ಪ್ರಾಧಿಕಾರದ ನಿಧಿ.
21. ಯೋಜನೆ ಮತ್ತು ಕಾರ್ಯಕ್ರಮಗಳಿಗಾಗಿ ಹಂಚಿಕೆ.

22. ರಾಜ್ಯ ಸರ್ಕಾರದಿಂದ ಅನುದಾನ.

23. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.

## ಅಧ್ಯಾಯ V

### ಸಂಕೀರ್ಣ

24. ವರದಿ.

25. ಪ್ರಾಧಿಕಾರದ ಆಯವ್ಯಯ.

26. ನಿಯಮಗಳ ರಚನಾಧಿಕಾರ.

27. ವಿನಿಯಮಗಳನ್ನು ರಚಿಸಲು ಪ್ರಾಧಿಕಾರದ ಅಧಿಕಾರ.

* * * *

### ಉದ್ದೇಶ ಮತ್ತು ಕಾರಣಗಳ ಹೇಳಿಕೆ

### I

**1994ರ ಅಧಿನಿಯಮ ಸಂಖ್ಯೆ 28.-** ಕನ್ನಡ ಅಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳು ಮತ್ತು ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನದ ಸಲುವಾಗಿ ಮತ್ತು ಕನ್ನಡವನ್ನು ಆಡಳಿತ ಭಾಷೆಯಾಗಿ ಅನುಷ್ಠಾನಕ್ಕೆ ತರುವ ಬಗ್ಗೆ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನೆ ಸಲುವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಶಾಸನಬದ್ಧ ಸ್ಥಾನಮಾನಕ್ಕೆ ಉಪಬಂಧ ಕಲ್ಪಿಸುವುದು ಅಗತ್ಯವೆಂದು ಪರಿಗಣಿಸಲಾಯಿತು.

ಆದ್ದರಿಂದ ವಿಧೇಯಕ.

(1994ರ ವಿಧಾನ ಸಭಾ ವಿಧೇಯಕ ಸಂಖ್ಯೆ 3ರಲ್ಲಿದ್ದಂತೆ.)

### II

**1997ರ ತಿದ್ದುಪಡಿ ಅಧಿನಿಯಮ ಸಂಖ್ಯೆ 26.-** ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಯು ಕಾನೂನು ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಎಂದು ಎರಡು ಇಲಾಖೆಗಳಾಗಿ ವಿಭಜನೆಗೊಂಡಿರುವುದರಿಂದ, ಕಾನೂನು ಇಲಾಖೆಯ ಕಾರ್ಯ ದರ್ಶಿಗಳನ್ನು ಪ್ರಾಧಿಕಾರದ ಸದಸ್ಯರನ್ನಾಗಿ ಮಾಡಲು ಹಾಗೂ ಭಾಷಾಂತರ ಇಲಾಖೆಯ ನಿರ್ದೇಶಕರನ್ನು ಸದರಿ ಪ್ರಾಧಿಕಾರದ ಸದಸ್ಯರನ್ನಾಗಿ ಮಾಡಲು ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಕನ್ನಡಕ್ಕೆ ಆದ್ಯತೆ ಮತ್ತು ಪ್ರೋತ್ಸಾಹ ಸಿಗುವಂತೆ ಕ್ರಮಗಳನ್ನು ಕೈಗೊಳ್ಳಲು ಪ್ರಾಧಿಕಾರಕ್ಕೆ ಅಧಿಕಾರವನ್ನು ನೀಡಲು ಉದ್ದೇಶಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(1996ರ ವಿಧಾನ ಸಭಾ ವಿಧೇಯಕ ಸಂಖ್ಯೆ 21ರಲ್ಲಿದ್ದಂತೆ.)

* * * *

## 1994ರ ಕರ್ನಾಟಕ ಅಧಿನಿಯಮ ಸಂಖ್ಯೆ 28

(1994ರ ಅಕ್ಟೋಬರ್ 3ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1994.

(1994ರ ಸೆಪ್ಟೆಂಬರ್ 29ನೇ ದಿನಾಂಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)

(1997ರ ಅಧಿನಿಯಮ ಸಂಖ್ಯೆ 26ರಲ್ಲಿ ತಿದ್ದುಪಡಿಯಾದಂತೆ)

**ಕನ್ನಡ ಅಭಿವೃದ್ಧಿಗಾಗಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರವೊಂದರ ಸ್ಥಾಪನೆಗೆ ಮತ್ತು ಕನ್ನಡ ಅಭಿವೃದ್ಧಿಗೆ ಸಂಬಂಧಪಟ್ಟ ಯೋಜನೆಗಳು ಮತ್ತು ಕಾರ್ಯಕ್ರಮಗಳ ಅನುಷ್ಠಾನದ ಉಸ್ತುವಾರಿಗೆ ಮತ್ತು ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಅನುಷ್ಠಾನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕೆ ಉಪಬಂಧ ಕಲ್ಪಿಸುವ ಒಂದು ಅಧಿನಿಯಮ.**

ಕನ್ನಡ ಅಭಿವೃದ್ಧಿಗಾಗಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರವೊಂದರ ಸ್ಥಾಪನೆಗೆ ಮತ್ತು ಕನ್ನಡ ಅಭಿವೃದ್ಧಿಗೆ ಸಂಬಂಧಪಟ್ಟ ಯೋಜನೆಗಳು ಮತ್ತು ಕಾರ್ಯಕ್ರಮಗಳ ಅನುಷ್ಠಾನದ ಉಸ್ತುವಾರಿಗೆ ಮತ್ತು ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಅನುಷ್ಠಾನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕೆ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಭಾರತ ಗಣರಾಜ್ಯದ ನಲವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:-

### ಅಧ್ಯಾಯ I

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1994 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆ ಮೂಲಕ ಗೊತ್ತುಪಡಿಸಬಹುದಾದ ಅಂಥ [1][ದಿನಾಂಕದಂದು][1] ಜಾರಿಗೆ ಬರತಕ್ಕದ್ದು.

1. ಈ ಅಧಿನಿಯಮವು ಅಧಿಸೂಚನೆ ಮೂಲಕ ದಿ: 01.11.1995ರಿಂದ ಜಾರಿಗೊಂಡಿದೆ.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಪ್ರಾಧಿಕಾರ" ಎಂದರೆ, 3ನೇ ಪ್ರಕರಣದ ಮೇರೆಗೆ ರಚಿಸಲಾದ ಕನ್ನಡ ಅಭಿವೃದ್ಧಿ ಪ್ರಾಧಿಕಾರ;

(ಬಿ) "ಅಧ್ಯಕ್ಷ" ಎಂದರೆ, ಪ್ರಾಧಿಕಾರದ ಅಧ್ಯಕ್ಷ;

(ಸಿ) "ಇಲಾಖೆ" ಎಂದರೆ, ಯಾವುದೇ ಕಾನೂನಿನ ಮೂಲಕ ಅಥವಾ ಅದರಡಿಯಲ್ಲಿ ರಾಜ್ಯ ಸರ್ಕಾರದಿಂದ ಸ್ಥಾಪಿತವಾದ ಯಾವುದೇ ನಿಕಾಯ ಅಥವಾ ನಿಗಮ ಅಥವಾ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವು ಪಡೆಯುತ್ತಿರುವ ಯಾವುದೇ ಸಂಸ್ಥೆ ಅಥವಾ ನಿಕಾಯವೂ ಸೇರಿದಂತೆ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು;

(ಡಿ) "ಸದಸ್ಯ" ಎಂದರೆ, ಪ್ರಾಧಿಕಾರದ ಸದಸ್ಯ;

(ಇ) "ಯೋಜನೆಗಳು ಮತ್ತು ಕಾರ್ಯಕ್ರಮಗಳು" ಎಂದರೆ, ವಿವಿಧ ಇಲಾಖೆಗಳಲ್ಲಿ ಕನ್ನಡ ಅಭಿವೃದ್ಧಿಗಾಗಿ ಪ್ರಾಧಿಕಾರದಿಂದ ಸಿದ್ಧಪಡಿಸಿದ ವಾರ್ಷಿಕ ಯೋಜನೆಗಳು ಮತ್ತು ಕಾರ್ಯಕ್ರಮಗಳು;

(ಎಫ್) "ಕಾರ್ಯದರ್ಶಿ" ಎಂದರೆ, ಪ್ರಾಧಿಕಾರದ ಕಾರ್ಯದರ್ಶಿ;

(ಜಿ) "ವಿನಿಯಮಗಳು" ಎಂದರೆ, ಈ ಅಧಿನಿಯಮದ ಮೇರೆಗೆ ಮಾಡಿದ ವಿನಿಯಮಗಳು. ೯

## ಅಧ್ಯಾಯ II

**3. ಪ್ರಾಧಿಕಾರದ ರಚನೆ.-** (1) ಈ ಅಧಿನಿಯಮವು ಪ್ರಾರಂಭವಾದ ತರುವಾಯ ಸಾಧ್ಯವಾದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಪ್ರಾಧಿಕಾರವನ್ನು ರಚಿಸತಕ್ಕದ್ದು ಮತ್ತು ಅದರ ಕೇಂದ್ರ ಸ್ಥಳವು ಬೆಂಗಳೂರಿನಲ್ಲಿ ಇರತಕ್ಕದ್ದು.

(2) ಪ್ರಾಧಿಕಾರವು ಕರಾರು ಮಾಡಿಕೊಳ್ಳಲು ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿ ಇರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೊಳಗಾಗತಕ್ಕದ್ದು.

(3) ಪ್ರಾಧಿಕಾರವು ಈ ಮುಂದಿನ ಸದಸ್ಯರುಗಳನ್ನು ಹೊಂದಿರತಕ್ಕದ್ದು:-

(ಎ) ಕನ್ನಡಭಾಷೆಯ ಅಭಿವೃದ್ಧಿಗಾಗಿ ಕೆಲಸ ಮಾಡಿರುವ, ಸರ್ಕಾರದಿಂದ ನಾಮನಿರ್ದೇಶಿತನಾದ ಒಬ್ಬ ವ್ಯಕ್ತಿಯು ಪ್ರಾಧಿಕಾರದ ಅಧ್ಯಕ್ಷನಾಗಿರತಕ್ಕದ್ದು.

(ಬಿ) ಸಾಹಿತ್ಯ, ಆಡಳಿತ, ಶಿಕ್ಷಣ ಮತ್ತು ಕಾನೂನು ಕ್ಷೇತ್ರಗಳಲ್ಲಿ ಕನ್ನಡದಲ್ಲಿ ವಿಶೇಷಜ್ಞಾನ ಅಥವಾ ಪ್ರಾಯೋಗಿಕ ಅನುಭವ ಹೊಂದಿರುವ ರಾಜ್ಯ ಸರ್ಕಾರದಿಂದ ನಾಮ ನಿರ್ದೇಶಿತರಾದ ಏಳು ಜನ .. ಸದಸ್ಯರು

(ಸಿ) ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ .. ಸದಸ್ಯರು

(ಡಿ) ಸರ್ಕಾರದ ಕಾರ್ಯದರ್ಶಿ, ಕಾನೂನು [1][XXX][1] ಇಲಾಖೆ. .. ಸದಸ್ಯರು

1. 1997ರ ಅಧಿನಿಯಮ ಸಂಖ್ಯೆ 26ರ ಮೂಲಕ ದಿ: 30.9.1997ರಿಂದ ಬಿಟ್ಟು ಬಿಡಲಾಗಿದೆ.

(ಇ) ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ .. ಸದಸ್ಯರು

(ಎಫ್) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ .. ಸದಸ್ಯರು

[1][(ಎಫ್‌ಎ) ನಿರ್ದೇಶಕರು, ಭಾಷಾಂತರ ಇಲಾಖೆ. .. ಸದಸ್ಯರು][1]

1. 1997ರ ಅಧಿನಿಯಮ ಸಂಖ್ಯೆ 26ರ ಮೂಲಕ ದಿ: 30.9.1997ರಿಂದ ಸೇರಿಸಲಾಗಿದೆ.

(ಜಿ) ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು .. ಪದನಿಮಿತ್ತ ಸದಸ್ಯರು

(ಹೆಚ್) ಅಧ್ಯಕ್ಷರು, ಕರ್ನಾಟಕ ಕನ್ನಡ ಸಾಹಿತ್ಯ ಅಕಾಡಮಿ .. ಪದನಿಮಿತ್ತ ಸದಸ್ಯರು

(ಐ) ಪ್ರಾಧಿಕಾರದ ಕಾರ್ಯದರ್ಶಿ .. ಸದಸ್ಯ ಕಾರ್ಯದರ್ಶಿ

**4. ಪದಾವಧಿ ಮತ್ತು ಸೇವಾ ಷರತ್ತುಗಳು.-** (1) ರಾಜ್ಯ ಸರ್ಕಾರದ ಇಚ್ಛೆಗೆ ಒಳಪಟ್ಟು ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಅಧ್ಯಕ್ಷ ಮತ್ತು ಇತರೆ ಸದಸ್ಯರುಗಳು ಮೂರು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು. ಸರ್ಕಾರದ ಅಧಿಕಾರಿ ಸದಸ್ಯರಿಗೆ ಸಂಬಂಧಿಸಿದಂತೆ ಇದು ಅನ್ವಯವಾಗತಕ್ಕದ್ದಲ್ಲ.

(2) ಅಧ್ಯಕ್ಷರು ಅಥವಾ ಪದನಿಮಿತ್ತ ಸದಸ್ಯರ ಹೊರತಾಗಿ ಯಾವೊಬ್ಬ ಸದಸ್ಯ ತನ್ನ ಸಹಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ತನ್ನ ಸದಸ್ಯತ್ವಕ್ಕೆ ರಾಜೀನಾಮೆ ನೀಡಬಹುದು. ಆದರೆ ಅವರ ರಾಜೀನಾಮೆಯು ಅಂಗೀಕಾರವಾಗುವವರೆಗೆ ಹುದ್ದೆಯಲ್ಲಿ ಮುಂದುವರೆಯತಕ್ಕದ್ದು.

(3) ಅಧ್ಯಕ್ಷ ಅಥವಾ ಯಾವೊಬ್ಬ ಸದಸ್ಯನ ಹುದ್ದೆಗಳಲ್ಲಿ ಉಂಟಾಗುವ ಆಕಸ್ಮಿಕ ರಿಕ್ತತೆಯನ್ನು ರಾಜ್ಯ ಸರ್ಕಾರವು ಒಬ್ಬ ವ್ಯಕ್ತಿಯನ್ನು ಸಂದರ್ಭಾನುಸಾರ ಅಧ್ಯಕ್ಷ ಅಥವಾ ಸದಸ್ಯನಾಗಿ ನಾಮನಿರ್ದೇಶನ ಮಾಡುವ ಮೂಲಕ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ನಾಮನಿರ್ದೇಶಿತರಾದ ಅಧ್ಯಕ್ಷ ಅಥವಾ ಸದಸ್ಯನು ತನ್ನ ಉತ್ತರಾಧಿಕಾರಿಯ ಪದಾವಧಿಯು ಪೂರ್ಣವಾಗದೆ ಉಳಿದ ಭಾಗದ ಅವಧಿಗೆ ಅಧಿಕಾರವನ್ನು ಹೊಂದಿರತಕ್ಕದ್ದು.

(4) ಅಧ್ಯಕ್ಷರು ಮತ್ತು ಇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯೆಗಳನ್ನು ಪಡೆಯತಕ್ಕದ್ದು.

(5) ಅಧ್ಯಕ್ಷರು ಮತ್ತು ಇತರ ಸದಸ್ಯರುಗಳಿಗೆ ಸಂದಾಯ ಮಾಡಬೇಕಾದ ಭತ್ಯೆಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

(6) ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ವ್ಯವಹರಣೆಯು ಪ್ರಾಧಿಕಾರದಲ್ಲಿ ಯಾವುದೇ ರಿಕ್ತಸ್ಥಾನವಿರುವುದರಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣ ಮಾತ್ರದಿಂದಲೇ ಅಮಾನ್ಯವಾಗತಕ್ಕದ್ದಲ್ಲ.

**5. ಹುದ್ದೆಯ ಸದಸ್ಯತ್ವಕ್ಕೆ ಅನರ್ಹತೆ.–** (1) ಒಬ್ಬ ವ್ಯಕ್ತಿಯು, ಅವನು,–

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ದೋಷಸಿದ್ಧಿಯಾಗಿದ್ದು, ಕಾರಾವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥಚಿತ್ತದವನಾಗಿದ್ದು, ಹಾಗೆಂದು ಒಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನ ಅಥವಾ ನಿಯಂತ್ರಣದಲ್ಲಿರುವ ಒಂದು ನಿಕಾಯ ಅಥವಾ ನಿಗಮದ ಸೇವೆಯಿಂದ ತೆಗೆದುಹಾಕಲಾದವನಾಗಿದ್ದರೆ ಅಥವಾ ವಜಾ ಆದವನಾಗಿದ್ದರೆ; ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾರ್ಯದಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಮೇರೆಗೆ ಅಥವಾ ಅದರ ಮೂಲಕ ಅಥವಾ ಅದರ ಪರವಾಗಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವತಃ ಅವನು ಅಥವಾ ಅವನ ಪಾಲುದಾರನು ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ;

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

–ಸದಸ್ಯನಾಗಿ ನೇಮಿತನಾಗುವುದಕ್ಕೆ ಮತ್ತು ಸದಸ್ಯನಾಗುವುದಕ್ಕೆ ಅನರ್ಹನಾಗಿರತಕ್ಕದ್ದು.

(2) ಒಬ್ಬ ವ್ಯಕ್ತಿಯು ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ಯಾವುದೇ ಜಾಹೀರಾತನ್ನು ಸೇರಿಸುವ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ

(1)ನೇ ಉಪಪ್ರಕರಣದ (ಇ) ಖಂಡದ ಮೇರೆಗೆ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

**6. ಸದಸ್ಯನನ್ನು ತೆಗೆದುಹಾಕುವುದು.–** (1) ರಾಜ್ಯ ಸರ್ಕಾರವು ಅಧ್ಯಕ್ಷ ಅಥವಾ ಇತರ ಸದಸ್ಯನನ್ನು ಅವನು,–

(ಎ) 5ನೇ ಪ್ರಕರಣದಲ್ಲಿ ಹೇಳಲಾದ ಯಾವುವೇ ಅನರ್ಹತೆಗಳಿಗೆ ಒಳಪಟ್ಟರೆ:

ಪರಂತು, ಅಧ್ಯಕ್ಷ ಅಥವಾ ಸದಸ್ಯನನ್ನು ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ಅವನು (1)ನೇ ಉಪ-ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ ತೆಗೆದುಹಾಕತಕ್ಕದ್ದಲ್ಲ; ಅಥವಾ

(ಬಿ) ಅವನು ಕಾರ್ಯವನ್ನು ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಸಿ) ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ; ಅಥವಾ

(ಡಿ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ತನ್ನ ಸ್ಥಾನವನ್ನು ಅವನು ದುರುಪಯೋಗಪಡಿಸಿಕೊಂಡಿದ್ದು, ಅವನನ್ನು ಆ ಪದದಲ್ಲಿ ಮುಂದುವರಿಸಿದರೆ ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವುದೆಂದು ಕಂಡುಬಂದರೆ,

-ಸದಸ್ಯತ್ವದಿಂದ ಅವನನ್ನು ತೆಗೆದುಹಾಕತಕ್ಕದ್ದು:

ಪರಂತು, ಯಾವೊಬ್ಬ ಸದಸ್ಯನನ್ನು ಅವನಿಗೆ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಒಂದು ಅವಕಾಶವನ್ನು ಕೊಟ್ಟ ಹೊರತು, ಈ ಖಂಡದ ಮೇರೆಗೆ ತೆಗೆದುಹಾಕತಕ್ಕದ್ದಲ್ಲ.

**7. ಕಾರ್ಯದರ್ಶಿ.–** (1) ರಾಜ್ಯ ಸರ್ಕಾರವು, ಜಿಲ್ಲಾಧಿಕಾರಿ ದರ್ಜೆಗೆ ಕಡಿಮೆಯಿಲ್ಲದ ಅಧಿಕಾರಿಯನ್ನು ಪ್ರಾಧಿಕಾರದ ಕಾರ್ಯದರ್ಶಿಯಾಗಿ ನೇಮಕ ಮಾಡತಕ್ಕದ್ದು. ಕಾರ್ಯದರ್ಶಿಯು ರಾಜ್ಯ ಸರ್ಕಾರವು ಆಗಿಂದಾಗ್ಗೆ ನಿರ್ಧರಿಸಬಹುದಾದ ಅಂಥ ವೇತನ ಮತ್ತು ಇತರ ಭತ್ಯಗಳನ್ನು ಪಡೆಯತಕ್ಕದ್ದು.

(2) ರಾಜ್ಯ ಸರ್ಕಾರವು, ಆಗಿಂದಾಗ್ಗೆ, ಕಾರ್ಯದರ್ಶಿಯವರಿಗೆ ಗೈರುಹಾಜರಿ ರಜೆಗೆ ಅನುಮತಿನೀಡಬಹುದು.

(3) ಕಾರ್ಯದರ್ಶಿಯು ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕನಾಗಿರತಕ್ಕದ್ದು, ಮತ್ತು ,–

(ಎ)ಪ್ರಾಧಿಕಾರದಿಂದ ಅನುಮೋದಿತವಾದ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರನಾಗಿರತಕ್ಕದ್ದು;

(ಬಿ) ಪ್ರಾಧಿಕಾರದ ನಿಧಿಯನ್ನು ನಿರ್ವಹಿಸತಕಕ್ಕದ್ದು;

(ಸಿ) ಪ್ರಾಧಿಕಾರದ ಲೆಕ್ಕಪತ್ರಗಳನ್ನು ಇಡುವಂತೆ ಮಾಡತಕ್ಕದ್ದು;

(ಡಿ) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರ ಮೇರೆಗೆ ಅವನಿಗೆ ಪ್ರದಾನ ಮಾಡಲಾಗಿರುವ ಇತರ ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು; ಮತ್ತು

(ಇ)ಅಧ್ಯಕ್ಷರ ತಪಾಸಣೆಯ ಸಮಯದಲ್ಲಿ, ಕಚೇರಿಯ ದಾಖಲೆಗಳನ್ನು ಹಾಜರುಪಡಿಸಲು ಜವಾಬ್ದಾರನಾಗಿರತಕ್ಕದ್ದು.

**8. ಪ್ರಾಧಿಕಾರದ ಅಧಿಕಾರಿಗಳು ಮತ್ತು ಸೇವಾ ಷರತ್ತುಗಳು.-** (1) ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು ಪ್ರಾಧಿಕಾರವು ಅದರ ಪ್ರಕಾರ್ಯಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಅವಶ್ಯವೆಂದು ಭಾವಿಸಬಹುದಾದಂಥ ಇತರ ಅಧಿಕಾರಿಗಳನ್ನು ಮತ್ತು ನೌಕರರನ್ನು ರಾಜ್ಯ ಸರ್ಕಾರವು ಅಥವಾ ರಾಜ್ಯ ಸರ್ಕಾರವು ಪ್ರಾಧಿಕೃತಗೊಳಿಸಬಹುದಾದಂಥ ಇತರ ಅಧಿಕಾರಿಯು ನೇಮಕ ಮಾಡಬಹುದು ಅಥವಾ ಪ್ರತಿನಿಯೋಜಿಸಬಹುದು.

(2) ಮೇಲೆ ನಿರ್ದಿಷ್ಟಪಡಿಸಲಾದ ಅಧಿಕಾರಿಗಳ ಮತ್ತು ನೌಕರರ ನೇಮಕಾತಿ ಮತ್ತು ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ನಿಯಮಿಸಬಹುದಾದಂಥವುಗಳಾಗಿರತಕ್ಕದ್ದು.

**9. ಪ್ರಾಧಿಕಾರದ ಸಭೆಗಳು.-** (1) ಪ್ರಾಧಿಕಾರದ ಸಭೆಗಳನ್ನು ಅಧ್ಯಕ್ಷರು ಅಥವಾ ಅಧ್ಯಕ್ಷರ ಪೂರ್ವಾನುಮತಿ ಪಡೆದು ಕಾರ್ಯದರ್ಶಿಯು ಕರೆಯತಕ್ಕದ್ದು ಮತ್ತು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಯಾವುದೇ ಸ್ಥಳದಲ್ಲಿ ನಡೆಸತಕ್ಕದ್ದು.

(2) ಪ್ರಾಧಿಕಾರವು ಕಡೇ ಪಕ್ಷ ಎರಡು ತಿಂಗಳಿಗೊಮ್ಮೆಯಾದರೂ ಸಭೆ ಸೇರತಕ್ಕದ್ದು.

(3) ಅಧ್ಯಕ್ಷರು ಅಥವಾ ಅಧ್ಯಕ್ಷರ ಪೂರ್ವಾನುಮತಿ ಪಡೆದು ಕಾರ್ಯದರ್ಶಿಯು ವಿಶೇಷ ಸಭೆಯನ್ನು ಕರೆಯುವುದು ಅವಶ್ಯವೆಂದು ಭಾವಿಸಿದರೆ, ಹಾಗೆ ಮಾಡಬಹುದು.

(4) ಪ್ರಾಧಿಕಾರವು ತನ್ನ ಸಭೆಗಳಲ್ಲಿ ಕಾರ್ಯನಿರ್ವಹಣೆಯ ಸಂಬಂಧದಲ್ಲಿ ವಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬಹುದಾದಂಥ ಕಾರ್ಯವಿಧಾನದ ನಿಯಮಗಳನ್ನು ಅನುಸರಿಸತಕ್ಕದ್ದು.

(5) ಅಧ್ಯಕ್ಷರು ಪ್ರತಿಯೊಂದು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದ ಅಧ್ಯಕ್ಷರಿಗೆ ಯಾವುದೇ ಸಭೆಯಲ್ಲಿ ಭಾಗವಹಿಸಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿದ್ದ ಸದಸ್ಯರ ಪೈಕಿ ಆರಿಸಲ್ಪಟ್ಟ ಯಾವನೇ ಇತರ ಸದಸ್ಯನು ಸಭೆಯಲ್ಲಿ ಅಧ್ಯಕ್ಷತೆ ವಹಿಸತಕ್ಕದ್ದು.

(6) ಗಣಪೂರ್ತಿ ಆಗಲು ಎಂಟು ಸದಸ್ಯರಿರತಕ್ಕದ್ದು.

**10. ಸೂಕ್ತವಾದುದೆಂದು ಮತ್ತು ಮಾನ್ಯವಾದುದೆಂದು ಭಾವಿಸಲಾಗುವ ವ್ಯವಹರಣೆಗಳು.-** ಅಧ್ಯಕ್ಷ ಅಥವಾ ಸದಸ್ಯನಾಗಿ ಕಾರ್ಯನಿರ್ವಹಿಸುತ್ತಿರುವ ಯಾವನೇ ವ್ಯಕ್ತಿಯ ನೇಮಕಾತಿಯಲ್ಲಿನ ಯಾವುದೇ ಅನರ್ಹತೆ ಅಥವಾ ದೋಷವು, ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ವ್ಯವಹರಣೆಯು ಈ ಅಧಿನಿಯಮದ ನಿಬಂಧನೆಗಳಿಗನುಸಾರವಾಗಿಲ್ಲದ ಹೊರತು, ಅಂಥ ಕೃತ್ಯ ಅಥವಾ ವ್ಯವಹರಣೆಯನ್ನು ದೋಷಯುಕ್ತವೆಂದು ಭಾವಿಸತಕ್ಕದ್ದಲ್ಲ.

**11. ಉಪ ಸಮಿತಿ.-** ಪ್ರಾಧಿಕಾರವು ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ ಅದರ ಸದಸ್ಯರ ಪೈಕಿ ಐದು ಸಂಖ್ಯೆಗೆ ಮೀರದ ಅಂಥ ಸದಸ್ಯರಿರುವ ಒಂದು ಉಪ ಸಮಿತಿಯನ್ನು ರಚಿಸಬಹುದು. ಪ್ರಾಧಿಕಾರದ ಅಧ್ಯಕ್ಷರು ಉಪ ಸಮಿತಿಯ ಅಧ್ಯಕ್ಷರು ಕೂಡ ಆಗಿರತಕ್ಕದ್ದು.

**12. ಉಪ ಸಮಿತಿಯ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಉಪ ಸಮಿತಿಯು ಪ್ರಾಧಿಕಾರವು ಅದಕ್ಕೆ ಪ್ರತ್ಯಾಯೋಜಿಸಲಾದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(2) ಉಪ ಸಮಿತಿಯು ಕಡೇಪಕ್ಷ ತಿಂಗಳಿಗೊಂದು ಸಲವಾದರೂ ಸಭೆ ಸೇರತಕ್ಕದ್ದು.

(3) ಉಪ ಸಮಿತಿಯು ತುರ್ತು ಸ್ವರೂಪದ ವಿಷಯಗಳ ಬಗ್ಗೆ ನಿರ್ಧಾರ ಕೈಗೊಳ್ಳತಕ್ಕದ್ದು. ಪ್ರಾಧಿಕಾರವು ನಿರ್ಧಾರವನ್ನು ಸೂಕ್ತವಾಗಿ ಕಾರ್ಯಗತಗೊಳಿಸುತ್ತಿದೆಯೇ ಎಂಬ ಬಗ್ಗೆ ಪುನರ್ ಪರಿಶೀಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ತುರ್ತು ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಸಲಹೆ ನೀಡತಕ್ಕದ್ದು.

(4) ಉಪ ಸಮಿತಿಯು, ತನ್ನ ಸಭೆಗಳಲ್ಲಿ ಕಾರ್ಯನಿರ್ವಹಣೆಯ ಸಂಬಂಧದಲ್ಲಿ, ವಿನಿಯಮಗಳ ಮೂಲಕ ಉಪಬಂಧಿಸಬಹುದಾದಂಥ ಕಾರ್ಯವಿಧಾನದ ನಿಯಮಗಳನ್ನು ಅನುಸರಿಸತಕ್ಕದ್ದು.

**13. ತಜ್ಞರ ಸೇವೆಗಳನ್ನು ಪಡೆದುಕೊಳ್ಳುವುದು.–** (1) ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ, ಪ್ರಾಧಿಕಾರವು ಅವಶ್ಯವಾದರೆ, ತಾನು ಸೂಕ್ತವೆಂದು ಭಾವಿಸಬಹುದಾದಂಥ ವಿಧಾನದಲ್ಲಿ ತಜ್ಞರ ಸೇವೆಗಳನ್ನು ಅಥವಾ ನೆರವನ್ನು ಪಡೆದುಕೊಳ್ಳಬಹುದು.

(2) ಅಂಥ ತಜ್ಞರು ಸಲ್ಲಿಸಿದ ಸೇವೆ ಅಥವಾ ನೆರವಿನ ಬಗ್ಗೆ ಸಂದಾಯಮಾಡತಕ್ಕ ಗೌರವಧನ ಮತ್ತು ಭತ್ಯೆಗಳು, ಗೊತ್ತುಪಡಿಸಬಹುದಾದಂಥ ಮೊಬಲಗಾಗಿರತಕ್ಕದ್ದು.

## ಅಧ್ಯಾಯ III

**14. ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.–** (1) ಪ್ರಾಧಿಕಾರವು, ಪ್ರತಿವರ್ಷವೂ, ಕನ್ನಡ ಅಭಿವೃದ್ಧಿಗಾಗಿ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ರಾಜ್ಯ ಸರ್ಕಾರಕ್ಕೆ ಅನುಮೋದನೆಗಾಗಿ ಕಳುಹಿಸತಕ್ಕದ್ದು. ರಾಜ್ಯ ಸರ್ಕಾರವು ಯೋಜನೆಗಳಲ್ಲಿ ಮತ್ತು ಕಾರ್ಯಕ್ರಮಗಳಲ್ಲಿ ಮಾರ್ಪಾಟನ್ನು ಮಾಡಿ ಅಥವಾ ಮಾರ್ಪಾಟಿಲ್ಲದೆ ಅನುಮೋದಿಸಬಹುದು.

**15. ಪ್ರಾಧಿಕಾರದ ಪ್ರಕಾರ್ಯಗಳು.–** ಪ್ರಾಧಿಕಾರವು,–

(ಎ) ರಾಜ್ಯ ಸರ್ಕಾರದ ಆಡಳಿತ ಭಾಷಾ ನೀತಿಯ ಅನುಷ್ಠಾನದಲ್ಲಿ ಬೇರೆಬೇರೆ ಇಲಾಖೆಗಳು, ಸಾರ್ವಜನಿಕ ಉದ್ದಿಮೆಗಳು, ಎಲ್ಲ ಸಂಸ್ಥೆಗಳು ಮತ್ತು ಸ್ಥಳೀಯ ನಿಕಾಯಗಳು ಮತ್ತು ರಾಜ್ಯ ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಸಂಸ್ಥೆಗಳು ಕೈಗೊಂಡಿರುವ ಕ್ರಮಗಳನ್ನು ಪರಿಶೀಲಿಸತಕ್ಕದ್ದು;

(ಬಿ) ರಾಜ್ಯ ಸರ್ಕಾರವು ಅಂಗೀಕರಿಸಿರುವ ಡಾ. ಸರೋಜಿನಿ ಮಹಿಷಿ ವರದಿಯ ಶಿಫಾರಸುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವ ಕ್ರಮಗಳ ಬಗ್ಗೆ ರಾಜ್ಯ ಸರ್ಕಾರಕ್ಕೆ ಸಲಹೆ ನೀಡುವುದು;

(ಸಿ) ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಜಾರಿಗೆ ತರುವಲ್ಲಿ ಅಡಚಣೆಗಳನ್ನು ಗುರುತಿಸಿ ಅವುಗಳ ನಿವಾರಣೆಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳತಕ್ಕದ್ದು;

[1][(ಸಿಎ) ಶಿಕ್ಷಣ ಕ್ಷೇತ್ರ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಕನ್ನಡಕ್ಕೆ ಆದ್ಯತೆ ಮತ್ತು ಪ್ರೋತ್ಸಾಹ ಸಿಗುವಂತೆ ಕ್ರಮಗಳನ್ನು ಕೈಗೊಳ್ಳತಕ್ಕದ್ದು;][1]

1. 1997ರ ಅಧಿನಿಯಮ ಸಂಖ್ಯೆ 26ರ ಮೂಲಕ ದಿ: 30.9.1997ರಿಂದ ಸೇರಿಸಲಾಗಿದೆ.

(ಡಿ) ಕನ್ನಡ ಪರೀಕ್ಷೆಗಳ (ಸೇವಾ ಪರೀಕ್ಷೆ) ಪದ್ಧತಿಯನ್ನು, ಕನ್ನಡ ಜ್ಞಾನವನ್ನು ತಿಳಿಯಲು ನಡೆಸಲಾಗುವ ಪರೀಕ್ಷೆಗಳನ್ನು ಈಗಿರುವ ಅಥವಾ ಮುಂದೆ ರೂಪಿಸಬಹುದಾದ ಸಂಬಂಧಪಟ್ಟ ಪಠ್ಯಕ್ರಮಗಳ ಸಹಿತವಾಗಿ ಕಾಲಕಾಲಕ್ಕೆ ಪರಿಶೀಲಿಸತಕ್ಕದ್ದು ಮತ್ತು ಅಗತ್ಯವೆನಿಸಿದರೆ ಇದನ್ನು ಪರಿಷ್ಕರಿಸಲು, ಮಾರ್ಪಡಿಸಲು ಅಥವಾ ನವೀಕರಿಸಲು ರಾಜ್ಯ ಸರ್ಕಾರಕ್ಕೆ ಸೂಚನೆ ನೀಡತಕ್ಕದ್ದು. ಕನ್ನಡ ಬೆರಳಚ್ಚು ಯಂತ್ರಗಳ ತಯಾರಿಕೆ, ಖರೀದಿ ಮತ್ತು ವಿತರಣೆ ಬಗ್ಗೆ, ಕಛೇರಿ ಆಧುನೀಕರಣದಲ್ಲಿ ಬಳಸಲಾಗುವ ಕಂಪ್ಯೂಟರ್ಸ್, ಟೆಲಿಪ್ರಿಂಟರ್ಸ್, ಟೆಲೆಕ್ಸ್ ಇತ್ಯಾದಿ ಆಧುನಿಕ

ಉಪಕರಣಗಳಲ್ಲಿ ಕನ್ನಡವನ್ನು ಬಳಸುವ ಬಗ್ಗೆ ಅಧ್ಯಯನ ಹಾಗೂ ಸಮಾಲೋಚನೆ ನಡೆಸತಕ್ಕದ್ದು, ಮತ್ತು ಈ ಸಂಬಂಧದಲ್ಲಿ ಕನ್ನಡವನ್ನೇ ಸಂಪೂರ್ಣವಾಗಿ ಬಳಸುವುದಕ್ಕೆ ಪ್ರೇರಕವಾಗಬಹುದಾದ ನಿರ್ಣಯಗಳನ್ನು ಕೈಗೊಂಡು, ಅದನ್ನು ಕಾರ್ಯಗತಗೊಳಿಸಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳತಕ್ಕದ್ದು;

(ಇ) ಅಧಿಕಾರಿಗಳಿಗೆ ಮತ್ತು ನೌಕರರಿಗೆ ಕನ್ನಡ ಬಳಕೆಗೆ ಅನುಕೂಲವಾದ ತರಬೇತಿ ಕಾರ್ಯಕ್ರಮಗಳನ್ನು, ಶಿಬಿರಗಳನ್ನು, ಪ್ರದರ್ಶನಗಳನ್ನು ಮತ್ತು ವಿಚಾರ ಸಂಕಿರಣಗಳನ್ನು ಏರ್ಪಡಿಸತಕ್ಕದ್ದು ಮತ್ತು ಕನ್ನಡೇತರರಿಗೆ ಕನ್ನಡ ಕಲಿಕೆ ಕಾರ್ಯಕ್ರಮಗಳನ್ನು ಮತ್ತು ಆ ಸಂಬಂಧ ಪಠ್ಯಕ್ರಮ, ಸಾಹಿತ್ಯ ಸಿದ್ಧಪಡಿಸತಕ್ಕದ್ದು;

(ಎಫ್) ಕನ್ನಡ ಅಭಿವೃದ್ಧಿಗೆ ಸಂಬಂಧಿಸಿದ ಉಪಯುಕ್ತ ಪ್ರಕಟಣೆಗಳನ್ನು ಪ್ರಕಟಿಸತಕ್ಕದ್ದು, ಖರೀದಿಸತಕ್ಕದ್ದು ಮತ್ತು ವಿತರಿಸತಕ್ಕದ್ದು;

(ಜಿ) ಕಛೇರಿಗಳಲ್ಲಿ ಬಳಸಲಾಗುವ ಎಲ್ಲ ನಮೂನೆಗಳು ಕನ್ನಡದಲ್ಲಿ ಮುದ್ರಣವಾಗುವಂತೆ ನೋಡಿಕೊಳ್ಳತಕ್ಕದ್ದು ಹಾಗೂ ಕನ್ನಡೇತರ ಭಾಷೆಗಳಲ್ಲಿ ಇರಲೇಬೇಕಾದ ನಮೂನೆ, ಪ್ರಕಟಣೆ ಮತ್ತು ರಿಜಿಸ್ಟರುಗಳನ್ನು ಪರಿಶೀಲಿಸಿ, ಮುದ್ರಣಕ್ಕೆ ಅನುಮತಿ ನೀಡತಕ್ಕದ್ದು;

(ಹೆಚ್) ರಾಜ್ಯದಲ್ಲಿ ಹೆಚ್ಚು ಜನ ಸಂಪರ್ಕ ಹೊಂದಿರುವ ಕೇಂದ್ರ ಸರ್ಕಾರದ ಕಛೇರಿಗಳು, ಬ್ಯಾಂಕುಗಳು, ಅಂಚೆ ಕಛೇರಿಗಳು ಮತ್ತು ಮತ್ತಿತರ ಕಛೇರಿಗಳು ಮತ್ತು ಉದ್ದಿಮೆಗಳಲ್ಲಿ ದೈನಂದಿನ ಬಳಕೆಯಲ್ಲಿರುವ ನಮೂನೆ, ನೋಟೀಸು, ನಾಮಫಲಕಗಳಲ್ಲಿ ಕೇಂದ್ರ ಸರ್ಕಾರದ ಭಾಷಾ ನೀತಿಗೆ ಅನುಗುಣವಾಗಿ ಪ್ರಾದೇಶಿಕ ಭಾಷೆಯನ್ನು ಬಳಸಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸತಕ್ಕದ್ದು ಮತ್ತು ಈ ಸಂಬಂಧವಾಗಿ ಅಂಥ ಕಛೇರಿಗಳೊಂದಿಗೆ ಪತ್ರವ್ಯವಹಾರ ಕೈಗೊಳ್ಳತಕ್ಕದ್ದು;

(ಐ) ಆಡಳಿತ ಪೂರಕ ಸಾಹಿತ್ಯದ ರಚನೆ, ಪರಿಷ್ಕರಣೆ, ಮುದ್ರಣ ಮತ್ತು ವಿತರಣೆ ವಿಷಯಗಳಲ್ಲಿ ತೀರ್ಮಾನ ಕೈಗೊಳ್ಳತಕ್ಕದ್ದು ಮತ್ತು ಈ ಕ್ಷೇತ್ರದಲ್ಲಿನ ಪ್ರಗತಿಯನ್ನು ಆಗಿಂದಾಗ್ಗೆ ಸಮೀಕ್ಷಿಸಿ ಸೂಕ್ತ ಕ್ರಮ ಸೂಚಿಸತಕ್ಕದ್ದು;

(ಜೆ) ಕನ್ನಡ ಪಠ್ಯ ಪುಸ್ತಕಗಳ ಗುಣಮಟ್ಟ ಪರೀಕ್ಷಿಸಿ ಲೋಪದೋಷಗಳೇನಾದರೂ ಇದ್ದರೆ ಅದನ್ನು ಸರಿಪಡಿಸಿಕೊಳ್ಳಲು ಸೂಚನೆ ನೀಡತಕ್ಕದ್ದು.

**16. ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸಲು ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡುವುದು.–** (1) ರಾಜ್ಯ ಮಟ್ಟದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಭಾಗ ಮಟ್ಟದಲ್ಲಿ ವಿಭಾಗಾಧಿಕಾರಿಗಳು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ, ಉಪ ವಿಭಾಗ ಮಟ್ಟದಲ್ಲಿ ಉಪ ವಿಭಾಗಾಧಿಕಾರಿ ಮತ್ತು ತಾಲ್ಲೂಕು ಮಟ್ಟದಲ್ಲಿ ತಹಸೀಲ್ದಾರ್ ಇವರನ್ನು ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸಲು ಜವಾಬ್ದಾರರನ್ನಾಗಿ ಮಾಡತಕ್ಕದ್ದು.

(2) ರಾಜ್ಯ ಸರ್ಕಾರವು ಪ್ರಾಧಿಕಾರದ ಬೇರೆ ಬೇರೆ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರಲು ಜವಾಬ್ದಾರರನ್ನಾಗಿ ಮಾಡಲಾದ ಅಧಿಕಾರಿಗಳನ್ನು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸತಕ್ಕದ್ದು ಮತ್ತು ಬೇರೆ ಬೇರೆ ಇಲಾಖೆಗಳಿಗಾಗಿ ಬೇರೆ ಬೇರೆ ವರ್ಗಗಳ ಅಧಿಕಾರಿಗಳನ್ನು ನಿರ್ದಿಷ್ಟಪಡಿಸಬಹುದು.

**17. ಮಾಹಿತಿ ಪಡೆದುಕೊಳ್ಳುವುದು.–** ಪ್ರಾಧಿಕಾರವು ಈ ಅಧಿನಿಯಮದ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರದ ಯಾವ ಅಧಿಕಾರಿಯಿಂದಲಾದರೂ ಡಾ. ಸರೋಜಿನಿ ಮಹಿಷಿ ವರದಿಯನ್ನು ಅನುಷ್ಠಾನಕ್ಕೆ ತರುವುದಕ್ಕೆ ಮತ್ತು ಕನ್ನಡ ಅಭಿವೃದ್ಧಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಕೋರಬಹುದು ಮತ್ತು ಪಡೆದುಕೊಳ್ಳಬಹುದು ಮತ್ತು ಅಂಥ ಅಧಿಕಾರಿಯು ಪ್ರಾಧಿಕಾರವು ಕೋರಬಹುದಾದ ಮಾಹಿತಿಯನ್ನು ಒದಗಿಸಲು ಬದ್ಧನಾಗಿರತಕ್ಕದ್ದು.

**18. ಪ್ರಾಧಿಕಾರದ ಸಲಹೆಗಳು.-** ಪ್ರಾಧಿಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ತನ್ನ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಬಗ್ಗೆ ರಾಜ್ಯ ಸರ್ಕಾರಕ್ಕೆ ಸಲಹೆಗಳನ್ನು ನೀಡಬಹುದು.

**19. ಕರ್ತವ್ಯ ಲೋಪವನ್ನು ದಾಖಲಿಸುವ ಮತ್ತು ನೇಮಕಾತಿ ಪ್ರಾಧಿಕಾರಕ್ಕೆ ತಿಳಿಸುವ ಅಧಿಕಾರ.-** ಪ್ರಾಧಿಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ, ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಅಥವಾ ಈಗಾಗಲೇ ಜಾರಿಯಲ್ಲಿರುವ ಯಾವುದೇ ಆದೇಶವನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ, ಅಂಥ ಉಲ್ಲಂಘನೆಯನ್ನು ಕರ್ತವ್ಯ ಲೋಪವೆಂದು ದಾಖಲಿಸತಕ್ಕದ್ದು ಮತ್ತು ಅಂಥ ವ್ಯಕ್ತಿಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆಗಳನ್ನು ನೀಡತಕ್ಕದ್ದು.

## ಅಧ್ಯಾಯ IV

**20. ಪ್ರಾಧಿಕಾರದ ನಿಧಿ.-** (1) ಪ್ರಾಧಿಕಾರವು, ಪ್ರಾಧಿಕಾರದ ನಿಧಿಯೆಂದು ಕರೆಯಲಾಗುವ ಒಂದು ನಿಧಿಯನ್ನು ಹೊಂದಿರತಕ್ಕದ್ದು.

(2) ಈ ಮುಂದಿನವುಗಳು ಪ್ರಾಧಿಕಾರದ ನಿಧಿಯ ಒಂದು ಭಾಗವಾಗಿರತಕ್ಕದ್ದು ಅಥವಾ ಪ್ರಾಧಿಕಾರದ ನಿಧಿಗೆ ಸಂದಾಯವಾಗತಕ್ಕದ್ದು, ಎಂದರೆ:-

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ, ನಿಗಮಿತವಾಗಿರುವ ಅಥವಾ ನಿಗಮಿತವಾಗಿರದ ಯಾವುದೇ ನಿಕಾಯ ಅಥವಾ ಯಾರೇ ವ್ಯಕ್ತಿಗಳು ಮಾಡುವ ಎಲ್ಲ ಅನುದಾನಗಳು, ಧನಸಹಾಯಗಳು, ದಾನಗಳು ಮತ್ತು ಕೊಡುಗೆಗಳು; ಮತ್ತು

(ii) ಯಾವುದೇ ರೀತಿಯ ಯಾವುದೇ ಮೂಲದಿಂದ ಪ್ರಾಧಿಕಾರದಿಂದ ಅಥವಾ ಅದರ ಪರವಾಗಿ ಸ್ವೀಕರಿಸಲಾದ ಎಲ್ಲ ಇತರ ಮೊತ್ತಗಳು.

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮೆ ಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಹೂಡತಕ್ಕದ್ದು.

(4) ಪ್ರಾಧಿಕಾರದ ಕಾರ್ಯದರ್ಶಿ ಮತ್ತು ಅದರ ಅಧಿಕಾರಿಗಳು ಮತ್ತು ನೌಕರರಿಗೆ ಸಂದಾಯವಾಗತಕ್ಕ ವೇತನಗಳು, ಭತ್ಯೆಗಳು ಮತ್ತು ನಿವೃತ್ತಿ ವೇತನಗಳೂ ಸೇರಿದಂತೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

**21. ಯೋಜನೆ ಮತ್ತು ಕಾರ್ಯಕ್ರಮಗಳಿಗಾಗಿ ಹಂಚಿಕೆ.-** ರಾಜ್ಯ ಸರ್ಕಾರವು, ಪ್ರಾಧಿಕಾರದ ಯೋಜನೆ ಮತ್ತು ಕಾರ್ಯಕ್ರಮಗಳನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ವಾರ್ಷಿಕ ಬಜೆಟ್ಟಿನಲ್ಲಿ ಪ್ರಾಧಿಕಾರಕ್ಕೆ ಹಣಕಾಸಿನ ಹಂಚಿಕೆಗಳನ್ನು ಮಾಡಬಹುದು.

**22. ರಾಜ್ಯ ಸರ್ಕಾರದಿಂದ ಅನುದಾನ.-** ರಾಜ್ಯ ಸರ್ಕಾರವು ಪ್ರತಿ ವರ್ಷ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊಬಲಗನ್ನು ಪ್ರಾಧಿಕಾರಕ್ಕೆ ಅನುದಾನವಾಗಿ ನೀಡಬಹುದು.

**23. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ಪ್ರಾಧಿಕಾರದ ನಿಧಿಯ ವರಮಾನ ಮತ್ತು ವೆಚ್ಚದ ಲೆಕ್ಕಪತ್ರಗಳನ್ನು ಗೊತ್ತುಪಡಿಸಬಹುದಾದಂಥ ನಿಯಮಗಳ ಅನುಸಾರವಾಗಿ ಇಡತಕ್ಕದ್ದು.

(2) ಪ್ರಾಧಿಕಾರವು, ಗೊತ್ತುಪಡಿಸಬಹುದಾದಂಥ ಪ್ರಪತ್ರದಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ತಯಾರಿಸತಕ್ಕದ್ದು.

(3) ರಾಜ್ಯ ಸರ್ಕಾರವು ನೇಮಕ ಮಾಡಬಹುದಾದಂಥ ಲೆಕ್ಕ ಪರಿಶೋಧಕರಿಂದ ಪ್ರಾಧಿಕಾರದ ಲೆಕ್ಕಪತ್ರಗಳ ವಾರ್ಷಿಕ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(4) ಲೆಕ್ಕಪರಿಶೋಧಕರು ಲೆಕ್ಕ ಪರಿಶೋಧನೆಯ ಉದ್ದೇಶಗಳಿಗಾಗಿ ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅಧಿಕಾರ ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕಪರಿಶೋಧನೆಗಾಗಿ ಗೊತ್ತುಪಡಿಸಬಹುದಾದಂಥ ವೆಚ್ಚಗಳನ್ನು ತನ್ನ ನಿಧಿಯಿಂದ ಸಂದಾಯ ಮಾಡತಕ್ಕದ್ದು.

(6) ಲೆಕ್ಕಪರಿಶೋಧಕರ ವರದಿಯನ್ನು ಸ್ವೀಕರಿಸಿದ ತರುವಾಯ ಸಾಧ್ಯವಾದಷ್ಟು ಬೇಗ, ಪ್ರಾಧಿಕಾರವು ಲೆಕ್ಕಪರಿಶೋಧಕರ ವರದಿಯ ಒಂದು ಪ್ರತಿಯೊಂದಿಗೆ ಲೆಕ್ಕಪತ್ರಗಳ ವಾರ್ಷಿಕ ವಿವರಣಾಪಟ್ಟಿಯ ಪ್ರತಿಯೊಂದನ್ನು ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಗೊತ್ತುಪಡಿಸಬಹುದಾದಂಥ ರೀತಿಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ಪ್ರಕಟಿಸುವಂತೆ ಮಾಡತಕ್ಕದ್ದು.

(7) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕರ ವರದಿಯನ್ನು ಪರಿಶೀಲಿಸಿದ ತರುವಾಯ ತಾನು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

## ಅಧ್ಯಾಯ V

### ಸಂಕೀರ್ಣ

**24. ವರದಿ.–** ಪ್ರಾಧಿಕಾರವು, ಗೊತ್ತುಪಡಿಸಬಹುದಾದಂಥ ದಿನಾಂಕಕ್ಕೆ ಮೊದಲು, ಗೊತ್ತುಪಡಿಸಬಹುದಾದಂಥ ರೀತಿಯಲ್ಲಿ ಮತ್ತು ಗೊತ್ತುಪಡಿಸಬಹುದಾದಂಥ ಅಂತರದೊಳಗೆ ಗೊತ್ತುಪಡಿಸಲಾದ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**25. ಪ್ರಾಧಿಕಾರದ ಆಯವ್ಯಯ.–** ಪ್ರಾಧಿಕಾರವು ಪ್ರತಿವರ್ಷ, ಮುಂದಿನ ಏಪ್ರಿಲ್ ಮೊದಲನೇ ದಿನಾಂಕದಿಂದ ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಅಂದಾಜನ್ನು ಗೊತ್ತುಪಡಿಸಬಹುದಾದಂಥ ದಿನಾಂಕದಂದು ಮತ್ತು ಅಂಥ ಪ್ರಪತ್ರದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

**26. ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು ಪೂರ್ವ ಪ್ರಕಟಣೆಯ ತರುವಾಯ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಮೇರೆಗೆ ರಚಿಸಲಾದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನಮಂಡಲವು ಅಧಿವೇಶನದಲ್ಲಿದ್ದರೆ, ಅದರ ಪ್ರತಿಯೊಂದು ಸದನದ ಮುಂದೆ ಒಂದು ಅಥವಾ ಎರಡು ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯೊಳಗೆ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಿದ ಅಧಿವೇಶನ ಅಥವಾ ಅದರ ನಿಕಟ ತರುವಾಯದ ಅಧಿವೇಶನ ಮುಕ್ತಾಯವಾಗುವ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಒಪ್ಪಿದರೆ ಅಥವಾ ಯಾವುದೇ ನಿಯಮ ರಚಿಸಬಾರದೆಂದು ನಿರ್ಧರಿಸದರೆ

ಆ ತರುವಾಯ ಸಂದರ್ಭಾನುಸಾರ, ನಿಯಮವು ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಯಾವುದೇ ಪರಿಣಾಮ ಹೊಂದಿರತಕ್ಕದ್ದಲ್ಲ. ಆದರೆ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯು ಆ ನಿಯಮದ ಮೇರೆಗೆ ಮೊದಲು ಮಾಡಿದ ಯಾವುದೇ ಕೃತ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**27. ವಿನಿಯಮಗಳನ್ನು ರಚಿಸಲು ಪ್ರಾಧಿಕಾರದ ಅಧಿಕಾರ.–** ಪ್ರಾಧಿಕಾರವು ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 26ನೇ ಪ್ರಕರಣದ ಮೇರೆಗೆ ಮಾಡಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

* * * *

**ಅಧಿಸೂಚನೆ**

**ಬೆಂಗಳೂರು, ದಿನಾಂಕ 30ನೇ ಅಕ್ಟೋಬರ್, 1995 [ಸಂಖ್ಯೆ 177 ಕಒಎಲ್ 94]**

ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 1994ರ (1994ರ ಕರ್ನಾಟಕ ಅಧಿನಿಯಮ ಸಂಖ್ಯೆ 28) 1ನೇ ಪ್ರಕರಣದ (2)ನೇ ಉಪ ಪ್ರಕರಣದಿಂದ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು 1995ರ ನವೆಂಬರ್ 1ನೆ ದಿನಾಂಕವನ್ನು 1994ರ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮದ ಉಪಬಂಧಗಳು ಜಾರಿಗೆ ಬರತಕ್ಕ ದಿನಾಂಕವೆಂಬುದಾಗಿ ಈ ಮೂಲಕ ಗೊತ್ತುಪಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಹುಲಿಯಪ್ಪ)

ಸರ್ಕಾರದ ಅಧೀನ ಕಾರ್ಯದರ್ಶಿ,

ಕನ್ನಡ ಮತ್ತು ಸಂಸ್ಕೃತಿ ಇಲಾಖೆ,

(ಆಡಳಿತ ಕನ್ನಡ ಶಾಖೆ)

* * * *

सत्यमेव जयते

## THE KANNADA DEVELOPMENT AUTHORITY ACT, 1994
## ARRANGEMENT OF SECTIONS


Statement of Objects and Reasons:

Sections:

### CHAPTER I

1. Short title and commencement.
2. Definitions.

### CHAPTER II

3. Constitution of the Authority.
4. Term of office and conditions of service.
5. Disqualification for office of membership.
6. Removal of member.
7. Secretary.
8. Officers of the Authority and conditions of service.
9. Meetings of the Authority.
10. Proceedings presumed to be good and valid.
11. Sub-committee.
12. Powers and duties of sub-committee.
13. Obtaining the services of experts.

### CHAPTER III

14. Preparation of project and programmes.
15. Functions of the Authority.
16. Officers made responsible to carry out the objectives of the Authority.
17. Obtaining information.
18. Advise by the Authority..
19. Power to record dereliction of duty and to inform the appointing authority.

### CHAPTER IV

20. Fund of the Authority.
21. Allocation for project and programme.
22. Grant by State Government.
23. Accounts and audit.

## CHAPTER V

## MISCELLANEOUS

24. Report.

25. Budget of the Authority.

26. Power to make rules.

27. Power of Authority to make regulations.

* * * *

## STATEMENT OF OBJECTS AND REASONS

### I

**Act 28 of 1994.-** It is considered necessary to provide statutory status to the Kannada Development Authority for the effective implementation of projects and programmes relating to development of Kannada and monitor and evaluate the implementation of Kannada as Official language.

Hence the Bill.

(Obtained from L.A. Bill No. 3 of 1994)

### II

**Amending Act 26 of 1997.-** Consequent to the bifurcation of the Department of Law and Parliamentary Affairs into Department of Law and Department of Parliamentary Affairs and Legislation, it is proposed to have the Secretary of the Department of law as the member of the authority and the director of translations also as a member of the said authority and further to empower the authority to take action to secure priority for, and promotion of Kannada in the field of Education and Cultural activities.

Hence the Bill.

(Obtained from L.A. Bill No. 21 of 1996)

* * * *

## KARNATAKA ACT No. 28 OF 1994

*(First published in the Karnataka Gazette Extraordinary dated third day of October 1994)*

## THE KANNADA DEVELOPMENT AUTHORITY ACT, 1994

*(Received the assent of the Governor on the Twenty-ninth day of September, 1994)*

*(As Amended by Act 26 of 1997)*

**An Act to provide for establishment of a Kannada Development Authority for development of Kannada, and to supervise the implementation of projects and programmes relating to development of Kannada and to monitor and evaluate the implementation of Kannada official language and its projects and programmes.**

WHEREAS it is expedient to provide for the establishment of a Kannada Development Authority for development of Kannada and to supervise the implementation of projects and programmes relating to development of Kannada and to monitor and evaluate the implementation of Kannada official language;

BE it enacted by the Karnataka State Legislature in the Forty-fourth year of the Republic of India as follows:-

### CHAPTER I

**1. Short title and commencement.-** (1) This Act may be called the Kannada Development Authority Act, 1994.

(2) It shall come into force on such [1][date][1] as the State Government may, by notification, appoint.

1. The Act has come into force by notification w.e.f. 1.11.1995. The Text of the notification is at the end of the Act.

**2. Definitions.-** In this Act, unless the context otherwise requires,-

(a) "Authority" means, the Kannada Development Authority constituted under section 3;

(b) "Chairman" means, the Chairman of the Authority;

(c) "department" means, all departments of the State Government, including any body or corporation established by the State Government by or under any law or any institution or body of organisations receiving financial aid from the State Government;

(d) "Member" means, a member of the Authority;

(e) "Projects and programmes" means, the annual project, programmes prepared by the Authority for development of Kannada in various departments;

(f) "Secretary" means, Secretary of the Authority;

(g) "Regulation" means, regulations made under this Act.

## CHAPTER II

**3. Constitution of the Authority.-** (1) As soon as may be, after the commencement of this Act there shall be established for the purposes of this Act, an Authority for development of Kannada to be called the Kannada Development Authority with its head-quarters at Bangalore.

(2) The Authority shall be a body corporate by the name aforesaid having perpetual succession and a common seal to contract and shall by the said name sue and be sued.

(3) The Authority shall consist of the following members:-

| | | | |
|---|---|---|---|
| (a) | A person who has worked for development of Kannada language nominated by the State Government to be the Chairman of the Authority. | -- | Chairman. |
| (b) | Seven persons nominated by the State Government having special knowledge or practical experience in the field of Literature, Administration, Education and Law. | -- | Members |
| (c) | The Secretary to Government, Department of Kannada and Culture | -- | Member |
| (d) | The Secretary to Government, Department of Law [1][x x x][1] | -- | Member |
| | 1. Omitted by Act 26 of 97 w.e.f. 30.9.1997. | | |
| (e) | The Secretary to Government, Commerce & Industries Department. | -- | Member |
| (f) | The Director, Department of Kannada and Culture. | -- | Member |
| [1][(fa) | Director of Translation. | -- | Member][1] |
| | 1. Inserted by Act 26 of 97 w.e.f. 30.9.1997. | | |
| (g) | The President, the Kannada Sahitya Parishad. | -- | Ex-officio Member. |
| (h) | The President, the Karnataka Kannada Sahitya Academy. | -- | Ex-officio Member. |
| (i) | The Secretary of the Authority | -- | Member-Secretary |

**4. Term of office and conditions of service.-** (1) Subject to the pleasure of the State Government, the Chairman and other members nominated by the State

Government shall hold office for a period of three years. This shall not apply in case of official member.

(2) The Chairman or a member other than an ex-officio member may resign his office by writing under his hand addressed to the State Government but shall continue in office until his resignation is accepted.

(3) A causal vacancy in the office of a Chairman or a member shall be filled by the State Government by nominating another person as Chairman or member as the case may be and the person so nominated shall hold office for the unexpired portion of the term of the office of his predecessor.

(4) The Chairman and other members shall receive such allowances as may be prescribed.

(5) The allowances payable to the Chairman and other members shall be defrayed out of the Fund of the Authority.

(6) No act or proceedings of the Authority shall be invalid by reason only of the existence of any vacancy or defect in the constitution of the Authority.

**5. Disqualification for office of membership.-** (1) A person shall be disqualified for being appointed as and for being a member, if he,-

(a) has been convicted and sentenced to imprisonment for an offence which in the opinion of the State Government involves moral turpitude; or

(b) is of unsound mind and stands so declared by a competent court; or

(c) is an undischarged insolvent ; or

(d) has been removed or dismissed from service of the Central Government or a State Government or a body or corporation owned or controlled by the Central Government or a State Government; or

(e) has directly or indirectly by himself or his partner any share or interest in any work done by the order of the Authority or in any contract or employment with or under or by or on behalf of the Authority.

(f) is employed as a paid legal practitioner on behalf of the Authority or accepts employment of legal practitioner against the Authority;

(2) A person shall not be disqualified under clause (e) of sub-section (1) or be deemed to have any share or interest in any contract or employment within the meaning of the said clause by reason only of his having a share or interest in any newspaper in which any advertisements relating to the affairs of the Authority is inserted.

**6. Removal of member.-** (1) The State Government shall remove the Chairman or other member if,-

(a) he becomes subject to any of the disqualifications mentioned in section 5:

Provided that no Chairman or member shall be removed on the ground that he has become subject to the disqualification mentioned in clause (e) of sub-section (1) of that section, unless he has been given an opportunity of making his representation against the proposal ; or

(b) he refuses to act or becomes incapable of acting; or

(c) he without obtaining leave of absence from the Authority absents from three consecutive meetings of the Authority ; or

(d) in the opinion of the State Government he has so abused his position as to render his continuance in office detrimental to the public interest:

Provided that no member shall be removed under this clause unless he has been given an opportunity of making his representation against the proposal.

**7. Secretary.-** The State Government shall appoint an officer not below the rank of Deputy Commissioner to be the Secretary of the Authority. The Secretary shall receive such salary and other allowances as the State Government may determine from time to time.

(2) The State Government may grant from time to time leave of absence to the Secretary.

(3) The Secretary shall be the Chief Executive of the Authority and shall,-

(a) be responsible for implementing the projects and programmes approved by the Authority;

(b) operate the fund of the Authority;

(c) cause to be maintained accounts of the Authority;

(d) discharge such other functions which are conferred on him by or under this Act or any other law for the time being in force; and

(e) be responsible for presentation of records of the office during inspection of Chairman.

**8. Officers of the Authority and conditions of service.-** (1) Subject to such rules as may be prescribed, the State Government or such other officer as the State Government may authorise, may appoint or depute such officers and employees as it may deem necessary for the efficient discharge of its functions.

(2) The recruitment and terms and conditions of service of the officers and servants specified above shall be such as may be prescribed.

**9. Meetings of the Authority.-** (1) The meetings of the Authority shall be convened by the Chairman or by the Secretary with the prior approval of the Chairman and shall be held at any place within the jurisdiction of the Authority.

(2) The Authority shall meet at least once in every two months.

(3) The Chairman or the Secretary with the prior approval of the Chairman shall convene a special meeting if the Chairman feels it necessary.

(4) The Authority shall observe such rules of procedure in regard to the transaction of business at its meeting as may be provided by regulations.

(5) Every meeting shall be presided over by the Chairman and if for any reason, the Chairman is unable to attend any meeting any other member chosen by the members present at the meeting shall preside at the meeting.

(6) Eight members shall form the quorum.

**10. Proceedings presumed to be good and valid.-** No disqualification of or defect in the appointment of any person acting as Chairman or member shall be deemed to vitiate any act or proceeding of the Authority if such act or proceeding is otherwise in accordance with the provisions of this Act.

**11. Sub-Committee.-**The Authority may for any specific purpose constitute a Sub-Committee consisting of such members not exceeding five members from amongst its members, the Chairman of the Authority shall also be the Chairman of the Sub-Committee.

**12. Powers and duties of Sub-Committee.-** (1) The Sub-Committee shall exercise such of the powers and perform such duties of the Authority which are delegated to it by the Authority.

(2) The Sub-Committee shall meet at least once in a month.

(3) The Sub-Committee shall take decisions on urgent matters to review the prompt implementation of the decision of the Authority and suggest on urgent matter for action by the State Government.

(4) The Sub-Committee shall observe such rules of procedure in regard to the transaction of business at its meetings as may be provided by regulations.

**13. Obtaining the services of experts.-** (1) In order to carry out the purposes of the Act, the Authority if necessary, may obtain the services or assistance of the experts in such manner as it may deems fit.

(2) Honorarium and allowances payable to such experts for the services or assistance so rendered shall be of such an amount as may be prescribed;

## CHAPTER III

**14. Preparation of project and programmes.-** The Authority shall every year prepare projects and programmes for the development of Kannada and forward it to the State Government for approval. The State Government may approve the project and programmes with or without modification.

**15. Functions of the Authority.-** The Authority shall,-

(a) review the actions taken by the different departments; public undertakings, all institutions and local bodies and institutions and receiving grants by the State Government in the implementation of official language policy of the State Government;

(b) suggest measures to the State Government for the effective implementation of the recommendations of Dr. Sarojini Mahishi Report as approved by the State Government;

(c) identify the hurdles in the implementation of Kannada as the administrative language and to take suitable measures to solve them;

[1][(ca) take action to secure priority for, and promotion of Kannada in the field of education and cultural activities.][1]

1. Inserted by Act 26 of 97 w.e.f. 30.9.1997.

(d) review form time to time the system of Kannada Examinations (Service Examination), Examinations conducted for testing the knowledge of Kannada along with the relevant syllabus existing or that may be prepared and if necessary suggest the Government to revise, modify or renew the same, to conduct study and consultations regarding the manufacture, purchase and distribution of Kannada typewriters, the use of Kannada in modern equipments like computers, teleprinters, telex, which are used in the modernisation of offices and in this connection to take decisions that would promote extensive use of Kannada and to take necessary actions to get it implemented;

(e) arrange training programmes, workshops, exhibitions and seminars which would facilitate the use of Kannada for officers and officials and Kannada teaching courses for non kannadigas and to prepare the necessary syllabus and literature;

(f) publish, purchase and distribute useful publications relating to the development of Kannada;

(g) ensure all the forms used in the offices are printed in Kannada and to examine and grant permission for the printing of forms, publications and registers which are required to be in languages other than Kannada;

(h) examine whether the regional language as being used in the forms, notices and name plates that are in day to day use in accordance with the language policy of the Central Government in the offices of the Central Government, banks, post offices and in other offices and undertakings which have more public contacts in the State and to conduct correspondence with those offices in this connections;

(i) take decisions on the matters of preparation, revision, printing and

distribution of reference books on administration and to implement the same and to monitor the progress in this field and suggest necessary measures;

(j) examine the standards of Kannada text books and give instructions to rectify the mistakes, if any, in these books.

**16. Officers made responsible to carryout the objectives of the Authority.-** (1) The Chief Secretary at the State level, the Divisional Commissioner at Divisional level, the Deputy Commissioner at District level, the Assistant Commissioner at the Sub-divisional level and the Tahsildar at the Taluk level shall be responsible to carryout the objectives of the Authority.

(2) The State Government may by notification specify officer responsible for implementation of the different projects and programmes of the Authority and different class of officers may be specified for different departments.

**17. Obtaining information.-** The Authority may for the purpose of this Act seek and obtain information relating to implementation of Dr. Sarojini Mahishi Report and the Kannada Development from any officer of the State Government and such officer shall be bound to furnish the information sought by the Authority.

**18. Advise by the Authority.-** The Authority, in order to carryout the purposes of this Act, shall advise the State Government regarding implementation of its projects and programmes.

**19. Power to record dereliction of duty and to inform the appointing authority.-** The Authority in order to carryout the purposes of the Act, shall record, any violation by the officers and officials of the State Government and local bodies of any order, issued by the Government from time to time or of any order, which is already in force as dereliction of duty and shall advise to the appointing authority for necessary action.

## CHAPTER IV

**20. Fund of the Authority.-** (1) There shall be a fund called the Authority Fund.

(2) The following shall form part of, or be paid into the Authority Fund, namely:-

(i) all grants, subversions, donations and gifts made by the Central Government, State Government, any local authority, any body whether in-corporated or not or any persons; and

(ii) all other sums received by or on behalf of the Authority from any source whatsoever.

(3) Except as otherwise directed by the State Government all money credited to the Fund shall be invested in any Scheduled bank.

(4) The administrative expenses to the Authority including the salaries, allowances and pensions payable to the Secretary and other officers and employees of the Authority shall be defrayed out of the Fund of the Authority.

**21. Allocation for project and programme.-** The State Government may keeping in view the project and programmes of the Authority, make financial allocations to the Authority in the annual Budget of the State.

**22. Grant by State Government.-** The State Government may every year make a grant to the Authority of a sum equivalent to the administrative expenses of the Authority.

**23. Accounts and audit.-** (1) Accounts of the income and expenditure of the Authority Fund shall be kept in accordance with such rules as may be prescribed.

(2) The Authority shall prepare an annual statement of accounts in such form as may be prescribed.

(3) The accounts of the Authority shall be audited annually by such auditor as the State Government may appoint.

(4) The auditor shall for the purposes of the audit, have access to all the accounts and other records of the Authority.

(5) The Authority shall pay from its fund such charges for the audit as may be prescribed.

(6) As soon as may be after the receipt of the report of the auditor, the Authority shall send a copy of the annual statement of accounts, together with a copy of the report of the auditor to the State Government and shall cause to be published the annual statement of accounts in such manner as may be prescribed.

(7) The State Government may after perusal of the report of the auditor give such directions as it thinks fit to the Authority and the Authority shall comply with such directions.

## CHAPTER V

## MISCELLANEOUS

**24. Report.-** The Authority shall before such dates, in such form and at such interval as may be prescribed submit the prescribed report to the State Government.

**25. Budget of the Authority.-** The Authority shall prepare every year before such date and in such form as may be prescribed a budget estimate of its income and expenditure for the financial year to commence on the first day of April next following and shall forward it to the State Government.

**26. Power to make rules.-** (1) The State Government may, after previous publication by notification make rules to carryout the purposes of this Act.

(2) Every rule made under this Act shall be laid as soon as may be after it is made before each House of the State Legislature while it is in session for a total period of thirty days, which may be comprised in one session or in two or more successive sessions and if, before the expiry of the session in which it is so laid or the session immediately following both Houses agree in making any modification in the rule or decide that any rule should not be made, the rule shall thereafter have effect only in such modified form or be of no effect, as the case may be, so, however, that any such modification or annulment shall be without prejudice to the validity of anything previously done under that rule.

**27. Power of Authority to make regulations.-** The Authority may subject to the provisions of this Act and the rules made under section 26 and with the previous sanction of the State Government, by notification, make regulations to carry-out the purposes of this Act.

* * * *

(The above translation of the ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1994 (1994ರ ಕರ್ನಾಟಕ ಅಧಿನಿಯಮ ಸಂಖ್ಯೆ 28) was published in Part IV-2B of the Official Gazette (Extraordinary) dated 25-2-1995 as No. 286 under clause (3) of Article 348 of the Constitution of India.)

* * * *

## ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994

### ಪ್ರಕರಣಗಳ ಕ್ರಮ ಪಟ್ಟಿ

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಪ್ರಕರಣಗಳು:

ಅಧ್ಯಾಯ I

ಪ್ರಾರಂಭಿಕ

1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.
2. ಪರಿಭಾಷೆಗಳು.

ಅಧ್ಯಾಯ II

ಅಲ್ಪಸಂಖ್ಯಾತರಿಗಾಗಿ ರಾಜ್ಯ ಆಯೋಗ

3. ಆಯೋಗದ ರಚನೆ.
4. ಅಧ್ಯಕ್ಷ ಮತ್ತು ಸದಸ್ಯರ ಪದಾವಧಿ ಮತ್ತು ಸೇವಾ ಷರತ್ತುಗಳು.
5. ಸದಸ್ಯತ್ವದ ಸ್ಥಾನಕ್ಕೆ ಅನರ್ಹತೆಗಳು.
6. ಕಾರ್ಯದರ್ಶಿ.
7. ಆಯೋಗದ ಸಿಬ್ಬಂದಿ.
8. ಆಯೋಗದ ಸಭೆಗಳು.
9. ರಿಕ್ತತೆ ಇತ್ಯಾದಿಗಳು ಆಯೋಗದ ವ್ಯವಹರಣೆಗಳನ್ನು ಅನೂರ್ಜಿತಗೊಳಿಸತಕ್ಕದ್ದಲ್ಲ.

ಅಧ್ಯಾಯ III

ಆಯೋಗದ ಪ್ರಕಾರ್ಯಗಳು

10. ಆಯೋಗದ ಪ್ರಕಾರ್ಯಗಳು.
11. ಸದ್ಭಾವನೆಯಿಂದ ಕೈಗೊಳ್ಳಲಾದ ಕ್ರಮಕ್ಕೆ ರಕ್ಷಣೆ.

ಅಧ್ಯಾಯ IV

ಹಣಕಾಸು, ಲೆಕ್ಕಪತ್ರ ಮತ್ತು ಲೆಕ್ಕಪರಿಶೋಧನೆ

12. ಆಯೋಗದ ಅಯವ್ಯಯ ಪತ್ರ ಮತ್ತು ಸರ್ಕಾರದಿಂದ ಅನುದಾನಗಳು.
13. ಲೆಕ್ಕ ಪತ್ರ ಮತ್ತು ಲೆಕ್ಕಪರಿಶೋಧನೆ.
14. ವಾರ್ಷಿಕ ವರದಿ.
15. ವಾರ್ಷಿಕ ವರದಿಯನ್ನು ಮತ್ತು ಲೆಕ್ಕ ಪರಿಶೋಧನಾ ವರದಿಯನ್ನು ವಿಧಾನಮಂಡಲದಲ್ಲಿ ಮಂಡಿಸತಕ್ಕದ್ದು.

## ಅಧ್ಯಾಯ V

### ಸಂಕೀರ್ಣ

16. ಅಧ್ಯಕ್ಷರು, ಮುಂತಾದವರು ಲೋಕ ನೌಕರರಾಗಿರತಕ್ಕದ್ದು.

17. ನಿಯಮ ರಚನಾಧಿಕಾರ.

18. ತೊಂದರೆಗಳ ನಿವಾರಣೆಗೆ ಅಧಿಕಾರ.

* * * *

### ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**1994ರ ಅಧಿನಿಯಮ ಸಂಖ್ಯೆ 31.–** ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ 15 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೊಳಿಸುವಲ್ಲಿ ನಿರಂತರ ಗಮನ ಹರಿಸಿರುವುದಲ್ಲದೇ ಅಲ್ಪಸಂಖ್ಯಾತರ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಹಿತಾಸಕ್ತಿಗಳನ್ನು ಕಾಪಾಡುವ ಉದ್ದೇಶದಿಂದ ಸರ್ಕಾರವು ಇತ್ತೀಚೆಗೆ ಬಹಳಷ್ಟು ಕ್ರಮಗಳನ್ನು ಕೈಗೊಂಡಿದೆ. ರಾಜ್ಯ ಅಲ್ಪಸಂಖ್ಯಾತರ ಆಯೋಗವು ಅಲ್ಪಸಂಖ್ಯಾತರ ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಿದೆ. ಈ ರೀತಿಯ ಸಮೀಕ್ಷೆಯು ರಾಷ್ಟ್ರದಲ್ಲಿ ಇದೇ ಮೊದಲ ಬಾರಿಯದಾಗಿದೆ. ಅಲ್ಪಸಂಖ್ಯಾತರ ಸರ್ವತೋಮುಖ ಅಭಿವೃದ್ಧಿಯನ್ನು ಪರಿಶೀಲಿಸುವ ದೃಷ್ಟಿಯಿಂದ ಸರ್ಕಾರವು, ರಾಜ್ಯ ಅಲ್ಪಸಂಖ್ಯಾತರ ಆಯೋಗಕ್ಕೆ ಶಾಸನಬದ್ಧ ಅಧಿಕಾರ ನೀಡಲು ಉದ್ದೇಶಿಸಿದೆ.

(1994ರ ವಿಧಾನ ಸಭಾ ವಿಧೇಯಕ ಸಂಖ್ಯೆ 18 ರಲ್ಲಿದ್ದಂತೆ)

### II

**2011ರ ಅಧಿನಿಯಮ ಸಂಖ್ಯೆ 35.–** ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994ನ್ನು ಈ ಮುಂದಿನ ಉಪಬಂಧಗಳನ್ನು ಕಲ್ಪಿಸುವುದಕ್ಕಾಗಿ ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ,–

(1) ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಕನಿಷ್ಠ ಪದವಿಯನ್ನು ಪಡೆದಿರುವವರನ್ನು ಆಯೋಗದ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡುವುದು;

(2) ಇತರ ಎಂಟು ಸದಸ್ಯರ ಪೈಕಿ ಕ್ರಿಶ್ಚಿಯನ್, ಜೈನ್, ಬೌದ್ಧ ಮತ್ತು ಸಿಖ್ ಈ ಪ್ರತಿಯೊಂದು ಸಮುದಾಯದಿಂದ ಕನಿಷ್ಠ ಒಬ್ಬರಿಗೆ ಸದಸ್ಯತ್ವ ನೀಡುವುದು;

(3) ಸದಸ್ಯರಿಗೆ ಸಂಬಳ ಮತ್ತು ಭತ್ಯೆಗಳಿಗೆ ಬದಲಾಗಿ ಭತ್ಯೆಗಳನ್ನು ಸಂದಾಯ ಮಾಡುವುದು;

(4) ಆಯೋಗದ ಹೆಚ್ಚುವರಿ ಕರ್ತವ್ಯವಾಗಿ ಪ್ರಧಾನ ಮಂತ್ರಿಗಳ ಹೊಸ 15 ಅಂಶದ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಶಿಫಾರಸ್ಸುಗಳನ್ನು ಮಾಡುವುದು.

ಆದ್ದರಿಂದ ಈ ವಿಧೇಯಕ.

(2011ರ ವಿಧಾನಸಭೆಯ ವಿಧೇಯಕ ಸಂಖ್ಯೆ:28, ಕಡತ ಸಂಖ್ಯೆ:ಸಂವ್ಯಶಾಇ 44 ಶಾಸನ 2010)

(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 5ನೇ ನಮೂದನೆಯಡಿಯಲ್ಲಿ ಬರುತ್ತದೆ.)

* * * *

## 1994ರ ಕರ್ನಾಟಕ ಅಧಿನಿಯಮ ಸಂಖ್ಯೆ 31

(1994ರ ಅಕ್ಟೋಬರ್ ಮೂರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994

(1994ರ ಸೆಪ್ಟೆಂಬರ್ ಮೂವತ್ತನೆ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

(2011ನೇ ಅಧಿನಿಯಮ ಸಂಖ್ಯೆ 35ರಲ್ಲಿ ತಿದ್ದುಪಡಿಯಾದಂತೆ)

**ಅಲ್ಪಸಂಖ್ಯಾತರಿಗೆ ರಾಜ್ಯ ಆಯೋಗವನ್ನು ರಚಿಸಲು ಮತ್ತು ಅದಕ್ಕೆ ಸಂಬಂಧಪಟ್ಟ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.**

ಅಲ್ಪಸಂಖ್ಯಾತರಿಗೆ ರಾಜ್ಯ ಆಯೋಗವನ್ನು ರಚಿಸುವುದು ಮತ್ತು ಅದಕ್ಕೆ ಸಂಬಂಧಪಟ್ಟ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ನಲವತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು.-

### ಅಧ್ಯಾಯ I

### ಪ್ರಾರಂಭಿಕ

**1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994 ಎಂದು ಕರೆಯತಕ್ಕದ್ದು.

(2) ಇದು ಕರ್ನಾಟಕ ರಾಜ್ಯದಾದ್ಯಂತ ವ್ಯಾಪ್ತಿಯಲ್ಲಿರತಕ್ಕದ್ದು.

(3) ಇದು ಕೂಡಲೇ ಜಾರಿಯಲ್ಲಿ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,- (ಎ) "ಆಯೋಗ" ಎಂದರೆ ಅಧಿನಿಯಮದ 3ನೇ ಪ್ರಕರಣದ ಅಡಿಯಲ್ಲಿ ರಚಿತವಾದ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ;

(ಬಿ) "ಸರ್ಕಾರ" ಎಂದರೆ ಕರ್ನಾಟಕ ಸರ್ಕಾರ;

(ಸಿ) " ಸದಸ್ಯ" ಎಂದರೆ ಆಯೋಗದ ಒಬ್ಬ ಸದಸ್ಯ;

(ಡಿ) "ಅಲ್ಪಸಂಖ್ಯಾತರು" ಎಂದರೆ ಸರ್ಕಾರವು ಅಲ್ಪಸಂಖ್ಯಾತರೆಂದು ಮಾನ್ಯತೆ ನೀಡಿದ, ಕರ್ನಾಟಕ ರಾಜ್ಯದಲ್ಲಿ ವಾಸಿಸುತ್ತಿರುವ ಅಲ್ಪ ಸಂಖ್ಯಾತ ಸಮುದಾಯಗಳಿಗೆ ಸೇರಿದ ವ್ಯಕ್ತಿಗಳು.

### ಅಧ್ಯಾಯ II

### ಅಲ್ಪಸಂಖ್ಯಾತರಿಗಾಗಿ ರಾಜ್ಯ ಆಯೋಗ

**3. ಆಯೋಗದ ರಚನೆ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ ಸರ್ಕಾರವು, ಈ ಅಧಿನಿಯಮದ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ಮತ್ತು ವಹಿಸಲಾದ

ಪ್ರಕಾರ್ಯಗಳನ್ನು ನೆರವೇರಿಸಲು, ಬೆಂಗಳೂರಿನಲ್ಲಿ ಕೇಂದ್ರಕಾರ್ಯಸ್ಥಾನ ಹೊಂದಿರುವ ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ ಎಂದು ಕರೆಯಲಾಗುವ ಒಂದು ನಿಕಾಯವನ್ನು ರಚಿಸತಕ್ಕದ್ದು.

[1][(2) ಆಯೋಗವು ಈ ಕೆಳಗಿನವರನ್ನು ಹೊಂದಿರತಕ್ಕದ್ದು,-

(ಎ) ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ವ್ಯಕ್ತಿಯು ಅಧ್ಯಕ್ಷರಾಗಿರತಕ್ಕದ್ದು ಹಾಗೂ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿಯನ್ನು ಪಡೆದಿರುವ, ಅಲ್ಪಸಂಖ್ಯಾತ ಸಮುದಾಯದಿಂದ ಮತ್ತು ಕ್ರಿಶ್ಚಿಯನ್, ಜೈನ್, ಬೌದ್ಧ ಮತ್ತು ಸಿಖ್ ಈ ಪ್ರತಿಯೊಂದು ಸಮುದಾಯದಿಂದ ಒಬ್ಬರಿಗಿಂತ ಕಡಿಮೆ ಇಲ್ಲದಂತೆ ಇತರ ಎಂಟು ಸದಸ್ಯರನ್ನು ಹೊಂದಿರತಕ್ಕದ್ದು.

(ಬಿ) ಸರ್ಕಾರದ ಉಪ ಕಾರ್ಯದರ್ಶಿಯವರ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯಾಗಿರುವ ಸರ್ಕಾರದಿಂದ ನೇಮಿಸಲ್ಪಟ್ಟ ಆಯೋಗದ ಕಾರ್ಯದರ್ಶಿಯನ್ನು ಹೊಂದಿರತಕ್ಕದ್ದು.][1]

1. 2011ರ ಅಧಿನಿಯಮ ಸಂಖ್ಯೆ: 35ರ ಮೂಲಕ ದಿನಾಂಕ: 16.07.2011ರಿಂದ ಪ್ರತಿಯೋಜಿಸಲಾಗಿದೆ.

**4. ಅಧ್ಯಕ್ಷ ಮತ್ತು ಸದಸ್ಯರ ಪದಾವಧಿ ಮತ್ತು ಸೇವಾ ಷರತ್ತುಗಳು.-** (1) ಸರ್ಕಾರದ ಇಚ್ಛೆಗೊಳಪಟ್ಟು ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಅವರು ಪದವನ್ನು ಧಾರಣಮಾಡಿದ ದಿನಾಂಕದಿಂದ ಮೂರು ವರ್ಷಗಳ ಅವಧಿಯವರೆಗೆ ತಮ್ಮ ಪದವನ್ನು ಧಾರಣ ಮಾಡತಕ್ಕದ್ದು.

(2) ಆಯೋಗದ ಅಧ್ಯಕ್ಷ ಅಥವಾ ಯಾರೇ ಸದಸ್ಯ ಸರ್ಕಾರಕ್ಕೆ ತನ್ನ ಸಹಿಯೊಂದಿಗೆ ಪತ್ರ ಬರೆದು ತನ್ನ ಪದಕ್ಕೆ ರಾಜೀನಾಮೆ ನೀಡಬಹುದು. ಆದರೆ ಅವನ ರಾಜೀನಾಮೆಯು ಅಂಗೀಕಾರವಾಗುವವರೆಗೆ ಪದದಲ್ಲಿ ಮುಂದುವರೆಯತಕ್ಕದ್ದು.

[1][(3) ಅಧ್ಯಕ್ಷರು ನಿಯಮಿಸಬಹುದಾದಂಥ ವೇತನ ಮತ್ತು ಭತ್ಯೆಗಳನ್ನು ಹಾಗೂ ಇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯೆಗಳನ್ನು ಸ್ವೀಕರಿಸತಕ್ಕದ್ದು.][1]

(4) [1][ಅಧ್ಯಕ್ಷರಿಗೆ ಸಂದಾಯ ಮಾಡಬೇಕಾದ ವೇತನ ಮತ್ತು ಭತ್ಯೆಗಳನ್ನು ಹಾಗೂ ಇತರ ಸದಸ್ಯರಿಗೆ ಸಂದಾಯ ಮಾಡಬೇಕಾದ ಭತ್ಯೆಗಳನ್ನು][1] 12ನೇ ಪ್ರಕರಣದ (2)ನೇ ಉಪ-ಪ್ರಕರಣದಲ್ಲಿ ಉಲ್ಲೇಖಿಸಲಾದ ಅನುದಾನಗಳಿಂದ ಭರಿಸತಕ್ಕದ್ದು.

(5) ಸದಸ್ಯನ ಪದದಲ್ಲಿ ಉಂಟಾಗುವ ಆಕಸ್ಮಿಕ ರಿಕ್ತತೆಯನ್ನು ಸಂಬಂಧಪಟ್ಟ ಪ್ರಾಧಿಕಾರವು ಆದಷ್ಟು ಬೇಗನೆ ಭರ್ತಿಮಾಡತಕ್ಕದ್ದು ಮತ್ತು ಹಾಗೆ ನಾಮನಿರ್ದೇಶಿತನಾದ ಸದಸ್ಯನು ತನ್ನ ಪೂರ್ವಾಧಿಕಾರಿಯ ಪದಾವಧಿಯು ಮುಕ್ತಾಯವಾಗದ ಭಾಗದವರೆಗೆ ಪದಧಾರಣ ಮಾಡತಕ್ಕದ್ದು.

1. 2011ರ ಅಧಿನಿಯಮ ಸಂಖ್ಯೆ: 35ರ ಮೂಲಕ ದಿನಾಂಕ: 16.07.2011ರಿಂದ ಪ್ರತಿಯೋಜಿಸಲಾಗಿದೆ.

**5. ಸದಸ್ಯತ್ವದ ಸ್ಥಾನಕ್ಕೆ ಅನರ್ಹತೆಗಳು.-** (1) ಒಬ್ಬ ವ್ಯಕ್ತಿಯು,-

(ಎ) ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿಯೆಂದು ನಿರ್ಣೀತನಾಗಿದ್ದು ಕಾರಾವಾಸದ ಶಿಕ್ಷೆಗೆ ಒಳಗಾಗಿದ್ದರೆ; ಅಥವಾ

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರ ಅಥವಾ ಒಂದು ರಾಜ್ಯ ಸರ್ಕಾರದಿಂದ ಅಥವಾ ಕೇಂದ್ರ ಸರ್ಕಾರದ ಅಥವಾ ಒಂದು ರಾಜ್ಯ ಸರ್ಕಾರದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಒಂದು ನಿಕಾಯ ಅಥವಾ ನಿಗಮದ ಸೇವೆಯಿಂದ ತೆಗೆದು ಹಾಕಿದವನಾಗಿದ್ದರೆ ಅಥವಾ ವಜಾ ಮಾಡಿದವನಾಗಿದ್ದರೆ; ಅಥವಾ

(ಇ) ಅವನು ಕಾರ್ಯನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಎಫ್) ಅವನು ಆಯೋಗದಿಂದ ಗೈರು ಹಾಜರಾಗುವುದಕ್ಕೆ ಅನುಮತಿಯನ್ನು ಪಡೆದುಕೊಳ್ಳದೇ, ಆಯೋಗದ ನಿರಂತರ ಮೂರು ಸಭೆಗಳಿಗೆ ಗೈರು ಹಾಜರಾದರೆ; ಅಥವಾ

(ಜಿ) ಅವನು ಪದದಲ್ಲಿ ಮುಂದುವರಿಯುವುದರಿಂದ ಅಲ್ಪಸಂಖ್ಯಾತ ಸಮುದಾಯ ಅಥವಾ ಸಾರ್ವಜನಿಕರ ಹಿತಾಸಕ್ತಿಗೆ ಬಾಧಕವಾಗುವ ರೀತಿಯಲ್ಲಿ ಅಧ್ಯಕ್ಷ ಅಥವಾ ಸದಸ್ಯನ ಸ್ಥಾನವನ್ನು ದುರುಪಯೋಗಪಡಿಸಿಕೊಳ್ಳುವನೆಂದು ಸರ್ಕಾರವು ಅಭಿಪ್ರಾಯಪಟ್ಟಲ್ಲಿ;

-ಸಂದರ್ಭಾನುಸಾರ ಅಧ್ಯಕ್ಷನನ್ನಾಗಿ ಅಥವಾ ಸದಸ್ಯನನ್ನಾಗಿ ನೇಮಕ ಮಾಡಲು ಮತ್ತು ಮುಂದುವರೆಸಲು ಅವನು ಅನರ್ಹನಾಗಿರತಕ್ಕದ್ದು:

ಪರಂತು, (ಜಿ) ಖಂಡದಡಿ ಯಾವೊಬ್ಬ ವ್ಯಕ್ತಿಗೆ ಪ್ರಸ್ತಾವದ ವಿರುದ್ಧ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶ ಕೊಟ್ಟ ಹೊರತು ಅವನನ್ನು ತೆಗೆದುಹಾಕತಕ್ಕದ್ದಲ್ಲ.

(2) (1)ನೇ ಉಪ -ಪ್ರಕರಣದ ಮೇರೆಗೆ ಅನರ್ಹಗೊಳಿಸಲಾದ ಯಾವನೇ ವ್ಯಕ್ತಿಯನ್ನು ಸರ್ಕಾರವು ವಜಾ ಮಾಡತಕ್ಕದ್ದು.

**6. ಕಾರ್ಯದರ್ಶಿ.-** (1) ಕಾರ್ಯದರ್ಶಿಯು ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ಸಂಬಳ ಮತ್ತು ಇತರ ಭತ್ಯೆಗಳನ್ನು ಸ್ವೀಕರಿಸತಕ್ಕದ್ದು.

(2) ಸರ್ಕಾರವು ಕಾರ್ಯದರ್ಶಿಗೆ ಕಾಲಕಾಲಕ್ಕೆ ಗೈರುಹಾಜರಿ ರಜೆಯನ್ನು ಮಂಜೂರ್ಮಾಡಬಹುದು.

(3) ಕಾರ್ಯದರ್ಶಿಯು ಆಯೋಗದ ಮುಖ್ಯ ಕಾರ್ಯನಿರ್ವಾಹಕನಾಗಿರತಕ್ಕದ್ದು ಮತ್ತು, -

(ಎ) ಆಯೋಗದ ಅನುದಾನಗಳನ್ನು ನಿರ್ವಹಿಸತಕ್ಕದ್ದು;

(ಬಿ) ಆಯೋಗದ ಲೆಕ್ಕಗಳನ್ನು ನಿರ್ವಹಿಸುವಂತೆ ಮಾಡತಕ್ಕದ್ದು; ಮತ್ತು

(ಸಿ) ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅವರಿಗೆ ಪ್ರದತ್ತವಾದಂಥ ಇತರ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**7. ಆಯೋಗದ ಸಿಬ್ಬಂದಿ.-** (1) ಸರ್ಕಾರವು, ಆಯೋಗದ ಸೂಕ್ತ ಕಾರ್ಯನಿರ್ವಹಣೆಗಾಗಿ ಅಗತ್ಯವಾಗಬಹುದಾದಂಥ ಸಿಬ್ಬಂದಿಯನ್ನು ಆಯೋಗಕ್ಕೆ ಒದಗಿಸತಕ್ಕದ್ದು.

(2) ಕಾರ್ಯದರ್ಶಿ ಮತ್ತು ಇತರ ಅಧಿಕಾರಿಗಳು ಮತ್ತು ಸಿಬ್ಬಂದಿಯವರಿಗೆ ಸಂದಾಯವಾಗತಕ್ಕ ಸಂಬಳ, ಭತ್ಯೆ, ನಿವೃತ್ತಿ ವೇತನಗಳು ಸೇರಿದಂತೆ ಆಯೋಗದ ಆಡಳಿತ ವೆಚ್ಚಗಳನ್ನು 12ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಅನುದಾನಗಳಿಂದ ಭರಿಸತಕ್ಕದ್ದು.

**8. ಆಯೋಗದ ಸಭೆಗಳು.-**(1) ಆಯೋಗವು ಅವಶ್ಯವಾದಾಗಲೆಲ್ಲ ಬೆಂಗಳೂರಿನಲ್ಲಿ ಅಥವಾ ಅಧ್ಯಕ್ಷನು ಸೂಕ್ತವೆಂದು ಭಾವಿಸುವಂಥ ಇತರ ಯಾವುದೇ ಸ್ಥಳದಲ್ಲಿ ಸಭೆ ಸೇರತಕ್ಕದ್ದು:

ಪರಂತು, ಆಯೋಗವು ಕನಿಷ್ಠ ಮೂರು ತಿಂಗಳಿಗೊಮ್ಮೆ ಸಭೆ ಸೇರತಕ್ಕದ್ದು.

(2) ಆಯೋಗವು ತನ್ನದೇ ಆದ ಕಾರ್ಯವಿಧಾನವನ್ನು ವಿನಿಯಮಿಸತಕ್ಕದ್ದು.

(3) ಆಯೋಗದ ಎಲ್ಲ ಆದೇಶಗಳು ಮತ್ತು ತೀರ್ಮಾನಗಳನ್ನು ಕಾರ್ಯದರ್ಶಿಯು ಅಥವಾ ಈ ಸಂಬಂಧದಲ್ಲಿ ಕಾರ್ಯದರ್ಶಿಯು ಸೂಕ್ತವಾಗಿ ಪ್ರಾಧಿಕರಿಸಿದ ಆಯೋಗದ ಯಾವೊಬ್ಬ ಇತರ ಅಧಿಕಾರಿಯು, ಅಧಿಕೃತಗೊಳಿಸತಕ್ಕದ್ದು.

**9. ರಿಕ್ತತೆ ಇತ್ಯಾದಿಗಳು ಆಯೋಗದ ವ್ಯವಹರಣೆಗಳನ್ನು ಅನೂರ್ಜಿತಗೊಳಿಸತಕ್ಕದ್ದಲ್ಲ.-** ಆಯೋಗದ ಯಾವುದೇ ಕೃತ್ಯ ಅಥವಾ ವ್ಯವಹರಣೆಗಳನ್ನು ಆಯೋಗದ ರಚನೆಯಲ್ಲಿ ಯಾವುದೇ ರಿಕ್ತತೆ ಅಥವಾ ನ್ಯೂನತೆ ಇರುವ ಕಾರಣ ಮಾತ್ರದಿಂದಲೇ ಪ್ರಶ್ನಿಸತಕ್ಕದ್ದಲ್ಲ ಅಥವಾ ಅನೂರ್ಜಿತಗೊಳಿಸತಕ್ಕದ್ದಲ್ಲ.

## ಅಧ್ಯಾಯ III

## ಆಯೋಗದ ಪ್ರಕಾರ್ಯಗಳು

**10. ಆಯೋಗದ ಪ್ರಕಾರ್ಯಗಳು.-** (1) ಆಯೋಗದ ಪ್ರಕಾರ್ಯಗಳು ಈ ಮುಂದಿನಂತಿರತಕ್ಕದ್ದು:-

(ಎ) ಸಂವಿಧಾನದಲ್ಲಿ ಮತ್ತು ಅಲ್ಪಸಂಖ್ಯಾತ ವರ್ಗಗಳ ಸಂರಕ್ಷಣೆಗಾಗಿ ರಾಜ್ಯವಿಧಾನ ಮಂಡಲವು ಅಂಗೀಕರಿಸಿದ ಕಾನೂನುಗಳಲ್ಲಿ ಕಲ್ಪಿಸಲಾಗಿರುವ ವಿವಿಧ ರಕ್ಷಣಾ ಕ್ರಮಗಳ ಬಗ್ಗೆ ಕಾರ್ಯನಿರ್ವಹಣೆಯನ್ನು ಪರಿಶೀಲಿಸುವುದು;

(ಬಿ) ಎಲ್ಲಾ ರಕ್ಷಣಾ ಕ್ರಮಗಳ ಪರಿಣಾಮಕಾರಿಯಾದ ಅನುಷ್ಠಾನ ಮತ್ತು ಜಾರಿಗೊಳಿಸುವಿಕೆಯನ್ನು ಖಚಿತಪಡಿಸಿಕೊಳ್ಳುವ ದೃಷ್ಟಿಯಿಂದ ಶಿಫಾರಸು ಮಾಡುವುದು;

[1][(ಬಿಬಿ)ಪ್ರಧಾನ ಮಂತ್ರಿಗಳ ಹೊಸ 15 ಅಂಶದ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಶಿಫಾರಸ್ಸುಗಳನ್ನು ಮಾಡುವುದು.][1]

(ಸಿ) ಸಂವಿಧಾನದಲ್ಲಿ, ರಾಜ್ಯ ವಿಧಾನಮಂಡಲವು ಅಧಿನಿಯಮಿಸಿದ ಕಾನೂನುಗಳಲ್ಲಿ ಮತ್ತು ಅಲ್ಪ ಸಂಖ್ಯಾತ ವರ್ಗಗಳಿಗಾಗಿ ಸರ್ಕಾರದ ಕಾರ್ಯನೀತಿಗಳು ಮತ್ತು ಯೋಜನೆಗಳಲ್ಲಿ ಕಲ್ಪಿಸಲಾದ ರಕ್ಷಣಾ ಕ್ರಮಗಳ ಬಗೆಗಿನ ಕಾರ್ಯನಿರ್ವಹಣೆಯನ್ನು ಮೇಲ್ವಿಚಾರಣೆ ಮಾಡುವುದು;

(ಡಿ) ಅಲ್ಪಸಂಖ್ಯಾತ ವರ್ಗಗಳ ಬಗೆಗಿನ ತಾರತಮ್ಯವನ್ನು ತಪ್ಪಿಸುವ ಪ್ರಶ್ನೆಯ ಸಂಬಂಧದಲ್ಲಿ ಅಧ್ಯಯನ, ಸಂಶೋಧನೆ ಮತ್ತು ವಿಶ್ಲೇಷಣೆ ಮಾಡುವುದು;

(ಇ) ಸರ್ಕಾರದ ಉದ್ದಿಮೆಗಳ, ಸರ್ಕಾರದ ಮತ್ತು ಅರೆ ಸರ್ಕಾರಿ ನಿಕಾಯ ಮುಂತಾದವುಗಳ ಸೇವೆಯಲ್ಲಿ ಅಲ್ಪಸಂಖ್ಯಾತ ವರ್ಗಗಳ ಪ್ರಾತಿನಿಧ್ಯವನ್ನು ವಾಸ್ತವಿಕವಾಗಿ ನಿರ್ಧರಿಸುವುದು ಮತ್ತು ಪ್ರಾತಿನಿಧ್ಯವು ಸಾಕಷ್ಟಿಲ್ಲದಿದ್ದ ಸಂದರ್ಭದಲ್ಲಿ, ಅಪೇಕ್ಷಿತ ಮಟ್ಟವನ್ನು ಸಾಧಿಸುವುದಕ್ಕಾಗಿ ಮಾರ್ಗೋಪಾಯಗಳನ್ನು ಸೂಚಿಸುವುದು;

(ಎಫ್) ರಾಜ್ಯದಲ್ಲಿ ಕೋಮು ಸಾಮರಸ್ಯವನ್ನು ಖಚಿತಪಡಿಸಿಕೊಳ್ಳಲು, ನಿರ್ವಹಿಸಲು ಮತ್ತು ಉತ್ತೇಜಿಸಲು ಶಿಫಾರಸುಗಳನ್ನು ಮಾಡುವುದು;

(ಜಿ) ಗೊತ್ತುಪಡಿಸಿದ ಅವಧಿಯಲ್ಲಿ ಸರ್ಕಾರಕ್ಕೆ ನಿಯತಕಾಲಿಕ ವರದಿಗಳನ್ನು ಸಲ್ಲಿಸುವುದು;

(ಹೆಚ್) ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಮತ್ತು ಅಭಿವೃದ್ಧಿಯ ದೃಷ್ಟಿಯಿಂದ ಮುಖ್ಯವಾದುದೆಂದು ಆಯೋಗವು ಅಭಿಪ್ರಾಯಪಡುವ ಯಾವುದೇ ಇತರ ವಿಷಯದ ಬಗ್ಗೆ ಅಧ್ಯಯನ ನಡೆಸುವುದು ಮತ್ತು ಸೂಕ್ತ ಶಿಫಾರಸುಗಳನ್ನು ಮಾಡುವುದು;

(ಐ) ಅಲ್ಪಸಂಖ್ಯಾತ ವರ್ಗಗಳ ಕುಂದುಕೊರತೆಗಳನ್ನು ಪರಿಗಣಿಸುವುದು ಮತ್ತು ಕಾಲಕಾಲಕ್ಕೆ ಸೂಕ್ತ ಪರಿಹಾರವನ್ನು ಸೂಚಿಸುವುದು;

(ಜೆ) ಅಲ್ಪಸಂಖ್ಯಾತರ ಹಕ್ಕುಗಳ ಮತ್ತು ರಕ್ಷಣಾ ಕ್ರಮಗಳ ಬಗೆಗಿನ ವಂಚನೆಗೆ ಸಂಬಂಧಿಸಿದ ನಿರ್ದಿಷ್ಟ ದೂರುಗಳ ಬಗ್ಗೆ ಪರಿಶೀಲಿಸುವುದು ಮತ್ತು ಅಂಥ ವಿಷಯಗಳನ್ನು ಸೂಕ್ತ ಪ್ರಾಧಿಕಾರದ ಮುಂದೆ ತರುವುದು:

ಪರಂತು, (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ವಿಷಯವನ್ನು ಅಲ್ಪಸಂಖ್ಯಾತ ವರ್ಗಗಳಿಗಾಗಿ ರಾಷ್ಟ್ರೀಯ ಆಯೋಗ ಅಧಿನಿಯಮ, 1992ರ (1992ರ ಕೇಂದ್ರಾಧಿನಿಯಮ 19) 3ನೇ ಪ್ರಕರಣದ ಅಡಿಯಲ್ಲಿ ರಚಿತವಾದ ಅಲ್ಪಸಂಖ್ಯಾತ ವರ್ಗಗಳಿಗಾಗಿ ರಾಷ್ಟ್ರೀಯ ಆಯೋಗವು ವಹಿಸಿಕೊಂಡರೆ ರಾಜ್ಯ ಅಲ್ಪಸಂಖ್ಯಾತರ ಆಯೋಗವು ಅಂಥ ವಿಷಯಗಳ ಬಗ್ಗೆ ಅಧಿಕಾರ ವ್ಯಾಪ್ತಿ ಹೊಂದಿರುವುದು ನಿಂತು ಹೋಗತಕ್ಕದ್ದು.

(2) ಸರ್ಕಾರವು ಆಯೋಗದ ಶಿಫಾರಸುಗಳನ್ನು, ಶಿಫಾರಸುಗಳ ಮೇಲೆ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಲಾದ ಕ್ರಮದ ಬಗೆಗಿನ ವಿವರಣೆ ಮತ್ತು ಅಂಥ ಯಾವುವೇ ಕ್ರಮಗಳನ್ನು ಒಪ್ಪಿಕೊಳ್ಳದಿರುವ ಬಗೆಗಿನ ಕಾರಣಗಳ ಸಹಿತವಾಗಿ, ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸುವಂತೆ ಮಾಡತಕ್ಕದ್ದು.

1. 2011ರ ಅಧಿನಿಯಮ ಸಂಖ್ಯೆ: 35ರ ಮೂಲಕ ದಿನಾಂಕ: 16.07.2011ರಿಂದ ಸೇರಿಸಲಾಗಿದೆ.

**11. ಸದ್ಭಾವನೆಯಿಂದ ಕೈಗೊಳ್ಳಲಾದ ಕ್ರಮಕ್ಕೆ ರಕ್ಷಣೆ.-** ಆಯೋಗದ ಮೂಲಕ ಅಥವಾ ಅದರ ಅಧಿಕಾರದ ಅಡಿಯಲ್ಲಿ ಅಥವಾ ಯಾವುದೇ ವರದಿ, ದಸ್ತಾವೇಜು ಅಥವಾ ಆಯೋಗದ ನಡವಳಿಯ ಮೂಲಕ, ಈ ಅಧಿನಿಯಮಕ್ಕನುಸಾರವಾಗಿ ಸದ್ಭಾವನೆಯಲ್ಲಿ ಮಾಡಲಾದ ಅಥವಾ ಕೈಗೊಳ್ಳಲು ಉದ್ದೇಶಿಸಲಾದ ಯಾವುದರ ವಿಷಯದಲ್ಲಿಯೂ, ಆಯೋಗ ಅಥವಾ ಅಧ್ಯಕ್ಷ ಅಥವಾ ಅದರ ಯಾವೊಬ್ಬ ಸದಸ್ಯ ಅಥವಾ ಆಯೋಗದ ನಿರ್ದೇಶನದ ಮೇರೆಗೆ ಕಾರ್ಯ ನಿರ್ವಹಿಸುತ್ತಿರುವ ಯಾವನೇ ವ್ಯಕ್ತಿಯ ವಿರುದ್ಧವಾಗಿ ಯಾವುದೇ ದಾವೆ, ಪ್ರಾಸಿಕ್ಯೂಷನ್ನು ಅಥವಾ ಇತರ ಕಾನೂನು ವ್ಯವಹರಣೆ ಹೂಡತಕ್ಕದ್ದಲ್ಲ.

## ಅಧ್ಯಾಯ IV

### ಹಣಕಾಸು, ಲೆಕ್ಕಪತ್ರ ಮತ್ತು ಲೆಕ್ಕಪರಿಶೋಧನೆ

**12. ಆಯೋಗದ ಆಯವ್ಯಯ ಪತ್ರ ಮತ್ತು ಸರ್ಕಾರದಿಂದ ಅನುದಾನಗಳು.-** (1) ಆಯೋಗವು, ಮುಂಬರುವ ಏಪ್ರಿಲ್ ಮೊದಲನೇ ದಿನಾಂಕದಂದು ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಅಂದಾಜು ಆಯವ್ಯಯ ಪತ್ರವನ್ನು ಪ್ರತಿ ವರ್ಷ ನಿಯಮಿಸಬಹುದಾದ ಅಂಥ ದಿನಾಂಕದೊಳಗಾಗಿ ಮತ್ತು ಅಂಥ ಪ್ರಪತ್ರದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ಸರ್ಕಾರಕ್ಕೆ ಕಳುಹಿಸತಕ್ಕದ್ದು.

(2) ಸರ್ಕಾರವು, ಈ ಬಗ್ಗೆ ರಾಜ್ಯ ವಿಧಾನಮಂಡಲವು ಕಾನೂನಿನ ಮೂಲಕ ಸೂಕ್ತ ಧನವಿನಿಯೋಗ ಮಾಡಿದ ತರುವಾಯ, ಸರ್ಕಾರವು ಈ ಅಧಿನಿಯಮದ ಉದ್ದೇಶಗಳಿಗಾಗಿ ಬಳಸಿಕೊಳ್ಳುವುದಕ್ಕೆ ಸೂಕ್ತವೆಂದು ಭಾವಿಸಬಹುದಾದ ಅಂಥ ಮೊತ್ತದ ಹಣವನ್ನು ಅನುದಾನದ ಮೂಲಕ ಆಯೋಗಕ್ಕೆ ಸಂದಾಯ ಮಾಡತಕ್ಕದ್ದು.

(3) ಆಯೋಗವು ಈ ಅಧಿನಿಯಮದ ಅಡಿಯಲ್ಲಿನ ಪ್ರಕಾರ್ಯಗಳನ್ನು ನಿರ್ವಹಿಸಲು ತಾನು ಸೂಕ್ತವೆಂದು ಭಾವಿಸಬಹುದಾದ ಅಂಥ ಮೊತ್ತವನ್ನು ಅನುದಾನದಿಂದ ಬಳಸಬಹುದು ಮತ್ತು ಅಂಥ ಮೊತ್ತವನ್ನು (2)ನೇ ಉಪ ಪ್ರಕರಣದಲ್ಲಿ ಉಲ್ಲೇಖಿಸಲಾದ ಅನುದಾನಗಳಿಂದ ಸಂದಾಯವಾಗಬೇಕಾದ ವೆಚ್ಚವೆಂದು ಪರಿಗಣಿಸತಕ್ಕದ್ದು.

**13. ಲೆಕ್ಕ ಪತ್ರ ಮತ್ತು ಲೆಕ್ಕಪರಿಶೋಧನೆ.-** (1) ಆಯೋಗದ ಆದಾಯ ಮತ್ತು ವೆಚ್ಚದ ಲೆಕ್ಕ ಪತ್ರಗಳನ್ನು ನಿಯಮಿಸಬಹುದಾದ ಅಂಥ ನಿಯಮಗಳಿಗನುಸಾರವಾಗಿ ಇಡತಕ್ಕದ್ದು.

(2) ಆಯೋಗವು ನಿಯಮಿಸಬಹುದಾದ ಅಂಥ ನಮೂನೆಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣ ಪತ್ರವನ್ನು ಸಿದ್ಧಪಡಿಸತಕ್ಕದ್ದು.

(3) ಸರ್ಕಾರವು ನೇಮಿಸಬಹುದಾದ ಅಂಥ ಲೆಕ್ಕಪರಿಶೋಧಕನು ಆಯೋಗದ ಲೆಕ್ಕಪತ್ರಗಳ ಲೆಕ್ಕಪರಿಶೋಧನೆಯನ್ನು ಮಾಡತಕ್ಕದ್ದು.

(4) ಲೆಕ್ಕಪರಿಶೋಧಕನಿಗೆ ಲೆಕ್ಕಪರಿಶೋಧನೆಯ ಉದ್ದೇಶಕ್ಕಾಗಿ ಆಯೋಗದ ಎಲ್ಲ ಲೆಕ್ಕಪತ್ರಗಳು ಮತ್ತು ಇತರ ದಾಖಲೆಗಳನ್ನು ನೋಡುವ ಅಧಿಕಾರವಿರತಕ್ಕದ್ದು.

(5) ಆಯೋಗವು ಲೆಕ್ಕಪರಿಶೋಧನೆಗಾಗಿ ನಿಯಮಿಸಬಹುದಾದಂತೆ ತನ್ನ ಅನುದಾನದಿಂದ ಅಂಥ ಲೆಕ್ಕ ಪರಿಶೋಧನಾ ಶುಲ್ಕಗಳನ್ನು ಸಂದಾಯ ಮಾಡತಕ್ಕದ್ದು.

(6) ಆಯೋಗವು, ಲೆಕ್ಕಪರಿಶೋಧನೆ ವರದಿ ಬಂದ ಕೂಡಲೆ ಆದಷ್ಟು ಬೇಗನೆ ಲೆಕ್ಕಪತ್ರಗಳ ವಾರ್ಷಿಕ ವಿವರಣಪಟ್ಟಿಯ ಒಂದು ಪ್ರತಿಯನ್ನು ಲೆಕ್ಕ ಪರಿಶೋಧಕನ ವರದಿಯ ಒಂದು ಪ್ರತಿಯೊಂದಿಗೆ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಲೆಕ್ಕ ಪತ್ರಗಳ ವಾರ್ಷಿಕ ವಿವರಣಪತ್ರವು ನಿಯಮಿಸಬಹುದಾದ ಅಂಥ ರೀತಿಯಲ್ಲಿ ಪ್ರಕಟವಾಗುವಂತೆ ಮಾಡತಕ್ಕದ್ದು.

(7) ಸರ್ಕಾರವು ಲೆಕ್ಕ ಪರಿಶೋಧಕನ ವರದಿಯನ್ನು ಪರಿಶೀಲಿಸಿದ ತರುವಾಯ ತನಗೆ ಉಚಿತವೆನಿಸುವ ಅಂಥ ನಿರ್ದೇಶನಗಳನ್ನು ಆಯೋಗಕ್ಕೆ ಕೊಡಬಹುದು ಮತ್ತು ಆಯೋಗವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**14. ವಾರ್ಷಿಕ ವರದಿ.-** ಆಯೋಗವು, ಪ್ರತಿ ಹಣಕಾಸು ವರ್ಷಕ್ಕೆ ಹಿಂದಿನ ಹಣಕಾಸು ವರ್ಷದ ತನ್ನ ಚಟುವಟಿಕೆಗಳ ಪೂರ್ಣ ವಿವರಗಳೊಂದಿಗೆ ನಿಯಮಿಸಬಹುದಾದ ಅಂಥ ನಮೂನೆಯಲ್ಲಿ ಮತ್ತು ಅಂಥ ಸಮಯದಲ್ಲಿ ಅದರ ವಾರ್ಷಿಕ ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ಸರ್ಕಾರಕ್ಕೆ ಕಳುಹಿಸತಕ್ಕದ್ದು.

**15. ವಾರ್ಷಿಕ ವರದಿಯನ್ನು ಮತ್ತು ಲೆಕ್ಕ ಪರಿಶೋಧನಾ ವರದಿಯನ್ನು ವಿಧಾನ ಮಂಡಲದಲ್ಲಿ ಮಂಡಿಸತಕ್ಕದ್ದು.-** ಸರ್ಕಾರವು ವರದಿಗಳನ್ನು ಸ್ವೀಕರಿಸಿದ ತರುವಾಯ ಅದರಲ್ಲಿರುವ ಶಿಫಾರಸ್ಸುಗಳಲ್ಲಿ ಸರ್ಕಾರಕ್ಕೆ ಸಂಬಂಧಪಡುವಷ್ಟರಮಟ್ಟಿನ ಶಿಫಾರಸುಗಳ ಬಗ್ಗೆ ಕೈಗೊಂಡ ಕ್ರಮದ ಮತ್ತು ಅಂಥ ಯಾವುದೇ ಶಿಫಾರಸನ್ನು ಒಪ್ಪದಿದ್ದರೆ ಅದಕ್ಕೆ ಕಾರಣಗಳ ಬಗೆಗಿನ ಜ್ಞಾಪನದೊಂದಿಗೆ ವಾರ್ಷಿಕ ವರದಿಯನ್ನು ಆದಷ್ಟು ಬೇಗ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸುವಂತೆ ಮಾಡತಕ್ಕದ್ದು. ಆಯೋಗವು, ಸರ್ಕಾರದ ನಿರ್ದೇಶನಕ್ಕನುಸಾರವಾಗಿ ಕಾಲಕಾಲಕ್ಕೆ ಸಾರ್ವಜನಿಕ ಪ್ರಾಮುಖ್ಯತೆಯ ಯಾವುದೇ ವಿಷಯದ ಬಗೆಗಿನ ವಿಶೇಷ ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

## ಅಧ್ಯಾಯ V

## ಸಂಕೀರ್ಣ

**16. ಅಧ್ಯಕ್ಷರು, ಮುಂತಾದವರು ಲೋಕ ನೌಕರರಾಗಿರತಕ್ಕದ್ದು.-** ಆಯೋಗದ ಅಧ್ಯಕ್ಷ ಮತ್ತು ಪ್ರತಿಯೊಬ್ಬ ಸದಸ್ಯ ಮತ್ತು ಈ ಅಧಿನಿಯಮದ ಅಡಿಯಲ್ಲಿನ ಪ್ರಕಾರ್ಯಗಳನ್ನು ಚಲಾಯಿಸಲು ಆಯೋಗದಿಂದ ನೇಮಕಗೊಂಡ ಅಥವಾ ಪ್ರಾಧಿಕೃತನಾದ ಪ್ರತಿಯೊಬ್ಬ ಅಧಿಕಾರಿಯು ಭಾರತ ದಂಡ ಸಂಹಿತೆಯ (1860ರ ಕೇಂದ್ರಾಧಿನಿಯಮ 45) 21ನೇ ಪ್ರಕರಣದ ಅರ್ಥ ವ್ಯಾಪ್ತಿಯಲ್ಲಿ ಲೋಕ ನೌಕರರಾಗಿರತಕ್ಕದ್ದು.

**17. ನಿಯಮ ರಚನಾಧಿಕಾರ.-** (1) ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಪೂರ್ವ ಪ್ರಕಟಣೆಯ ತರುವಾಯ ಈ ಅಧಿನಿಯಮದ ಉಪಬಂಧಗಳನ್ನು ನೆರವೇರಿಸುವ ಉದ್ದೇಶಗಳಿಗಾಗಿ ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಪೂರ್ವೋಕ್ತ ಉಪಬಂಧಗಳ ಸಾಮಾನ್ಯತೆಗೆ ಪ್ರತಿಕೂಲವಾಗದಂತೆ ಅಂಥ ನಿಯಮಗಳು ಈ ಮುಂದಿನವುಗಳ ಬಗ್ಗೆ ಉಪಬಂಧ ಕಲ್ಪಿಸಬಹುದು:-

(ಎ) ಆಯೋಗದ ಅಧ್ಯಕ್ಷನ ಸ್ಥಾನಮಾನವನ್ನು ನಿರ್ಧರಿಸುವುದು;

[1][(ಬಿ)ಆಯೋಗದ ಅಧ್ಯಕ್ಷರಿಗೆ ಸಂದಾಯವಾಗಬೇಕಾದ ವೇತನ, ಭತ್ಯೆ ಮತ್ತು ಇತರ ಉಪಲಬ್ಧಿಗಳು, ಇತರ ಸದಸ್ಯರಿಗೆ ಸಂದಾಯವಾಗಬೇಕಾದ ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳು][1]

(ಸಿ) ಅಧಿನಿಯಮದ ಉಪಬಂಧಗಳಿಗನುಸಾರವಾಗಿ ಗೊತ್ತುಪಡಿಸಬೇಕಾದ ಅಥವಾ ಗೊತ್ತುಪಡಿಸಬಹುದಾದ ಯಾವುದೇ ಇತರ ವಿಷಯ ಮತ್ತು ಈ ಅಧಿನಿಯಮದ ಸೂಕ್ತ ಅನುಷ್ಠಾನಕ್ಕೆ ಅಗತ್ಯವೆಂದು ಸರ್ಕಾರವು ಅಭಿಪ್ರಾಯಪಡುವ ಉಪಬಂಧ.

(3) ಈ ಅಧಿನಿಯಮದ ಅಡಿಯಲ್ಲಿ ಮಾಡಲಾದ ಪ್ರತಿಯೊಂದು ನಿಯಮವನ್ನು ಅದನ್ನು ರಚಿಸಲಾದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಒಂದು ಅಥವಾ ಹೆಚ್ಚಿನ

ಅಧಿವೇಶನ ಅಥವಾ ಎರಡು ಅನುಕ್ರಮ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಹೀಗೆ ಅದನ್ನು ಮಂಡಿಸಲಾದ ಅಧಿವೇಶನ ಅಥವಾ ನಿಕಟೋತ್ತರ ಅಧಿವೇಶನ ಅಥವಾ ಅನುಕ್ರಮ ಅಧಿವೇಶನಗಳು ಮುಕ್ತಾಯವಾಗುವ ಮೊದಲು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಉಭಯ ಸದನಗಳು ಒಪ್ಪಿದರೆ ಅಥವಾ ನಿಯಮವನ್ನು ಮಾಡಬಾರದೆಂದು ತೀರ್ಮಾನಿಸಿದರೆ ತದನಂತರ ಆ ನಿಯಮವು, ಆ ನಿಯಮದ ಅಡಿಯಲ್ಲಿ ಈ ಮುಂಚೆ ಮಾಡಲಾದ ಯಾವುದರ ಊರ್ಜಿತತೆಗೂ ಪ್ರತಿಕೂಲವಾಗದಂತೆ ಸಂದರ್ಭಾನುಸಾರ ಅಂಥ ಮಾರ್ಪಾಟಾದ ರೀತಿಯಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ.

1. 2011ರ ಅಧಿನಿಯಮ ಸಂಖ್ಯೆ: 35ರ ಮೂಲಕ ದಿನಾಂಕ: 16.07.2011ರಿಂದ ಪ್ರತಿಯೋಜಿಸಲಾಗಿದೆ.

**18. ತೊಂದರೆಗಳ ನಿವಾರಣೆಗೆ ಅಧಿಕಾರ.-** ಈ ಅಧಿನಿಯಮದ ಉಪಬಂಧಗಳಿಗೆ ಪರಿಣಾಮ ನೀಡುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಿಸಲಾದ ಆದೇಶದ ಮೂಲಕ ಅಗತ್ಯವೆಂದು ಅಥವಾ ಯುಕ್ತವೆಂದು ತನಗೆ ಕಂಡು ಬರುವ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂಥ ಉಪಬಂಧಗಳನ್ನು ಮಾಡಬಹುದು:

ಪರಂತು ಅಂಥ ಯಾವುದೇ ಆದೇಶವನ್ನು ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿ ಮುಕ್ತಾಯವಾದ ತರುವಾಯ ಮಂಡಿಸತಕ್ಕದ್ದಲ್ಲ;

(2) ಈ ಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ಆದೇಶವನ್ನು ಅದನ್ನು ಹೊರಡಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

* * * *

सत्यमेव जयते

## THE KARNATAKA STATE MINORITIES COMMISSION ACT, 1994

## ARRANGEMENT OF SECTIONS

Statement of Objects and Reasons

Sections:

CHAPTER I

PRELIMINARY

1. Short title, extent and commencement.
2. Definitions.

CHAPTER II

STATE COMMISSION FOR MINORITIES

3. Constitution of the Commission.
4. Term of office and conditions of service of the Chairman and members.
5. Disqualification for office of membership.
6. Secretary.
7. Staff of the Commission.
8. Meetings of the Commission.
9. Vancancies etc., not to invalidate proceedings of the commission.

CHAPTER III

FUNCTIONS OF THE COMMISSION

10. Functions of the Commission.
11. Protection of action taken in good faith.

CHAPTER IV

FINANCE, ACCOUNTS AND AUDIT

12. Budget of the Commission and grants by the Government.
13. Accounts and Audit.
14. Annual Report.
15. Annual report and audit report to be laid before the State Legislature.

CHAPTER V

MISCELLANEOUS

16. Chairman etc., to be public servants.

17. Power to make rules.
18. Power to remove difficulties.

* * * *

## STATEMENT OF OBJECTS AND REASONS

### I

**Act 31 of 1994.-** Government have recently taken far-reaching steps to safeguard the Social, Educational and Economic interest of the Minorities, besides attaching continuous attention towards the implementation of fifteen point programme for the Welfare of Minorities. The State Minorities Commission is presently conducting a Socio-Economic and Educational Survey of Minorities first of its kind in the Country. In order to see the allround progress it is considered necessary to confer Statutory Status on the State Minorities Commission.

Hence the Bill.

( Obtained from L.A. Bill No. 18 of 1994)

### II

**Amending Act 35 of 2011.-** It is considered necessary to amend the Karnataka State Minorities Commission Act, 1994 (Karnataka Act No. 31 of 1994) to provide for,-

(1) nomination of the members of the Commission who posses a minimum degree from a recognised University;

(2) membership of atleast one each from Christian, Jain, Buddhist and Sikh community out of the eight other members;

(3) payment of allowances to the members instead of salary and allowances;

(4) additional function to the Commission to make recommendation for implementing the Prime Ministers new 15 Point Programme.

Hence the Bill.

[L.A. Bill No. 28 of 2011, File No. Samvyashae 44 Shasana 2010]

[Entry 5 of List II of the Seventh Schedule to the Constitution of India.]

* * * *

## KARNATAKA ACT No. 31 OF 1994

*(First published in the Karnataka Gazette Extraordinary dated Third October, 1994)*

## THE KARNATAKA STATE MINORITIES COMMISSION ACT, 1994

*(Received the assent of the Governor on Thirtieth day of September, 1994)*

(As Amended by Act 35 of 2011)

**An Act to constitute a State Commission for minorities and to provide for matters connected therewith or incidental thereto.**

WHEREAS it is expedient to constitute a State Commission for minorities and to provide for matters connected therewith or incidental thereto ;

BE it enacted by the Karnataka State Legislature in the forty-fifth year of the Republic of India, as follows :-

### CHAPTER I
### PRELIMINARY

**1. Short title, extent and Commencement .-** (1) This Act may be called the Karnataka State Minorities Commission Act, 1994.

(2) It shall extend to the whole of the State of Karnataka.

(3) It shall come into force at once.

**2. Definitions .-** In this Act, unless the context otherwise requires,-

(a) "Commission" means the Karnataka State Minorities Commission constituted under section 3 of the Act;

(b) "Government" means the Government of Karnataka;

(c) "member" means a member of the Commission;

(d) "minorities" means the persons belonging to minority communities residing in the State of Karnataka whom the Government has recognised as minorities.

### CHAPTER II
### STATE COMMISSION FOR MINORITIES

**3. Constitution of the Commission .-** (1) As soon as may be after the commencement of this Act, the Government shall constitute a body to be called as the Karnataka State Minorities Commission to exercise the powers conferred on and to perform the function assigned to it under this Act with its headquarters at Bangalore.

[1][(2) The Commission shall consist of,-

(a) the Chairman who shall be a person of a minority community and eight other members from the minority community holding a degree from a recognized university out of which not less than one each member shall be from Christian, Jain, Buddhist and Sikh community.

(b) the Secretary of the Commission, appointed by the Government being an officer not below the rank of Deputy Secretary to Government.][1]

1. Substituted by Act 35 of 2011 w.e.f. 16.7.2011.

**4. Term of office and conditions of service of the Chairman and members .-** (1) Subject to the pleasure of the Government, the Chairman and members of the Commission shall hold office for a term of three years from the date they assume their offices.

(2) The Chairman or a member of the Commission may resign from his office in writing under his signature addressed to the Government, but shall continue in office until his resignation is accepted.

[1][(3) The Chairman shall receive such salary and allowances and the other members shall receive such allowances as may be prescribed.][1]

(4) The salary and allowances payable to the Chairman and [1][allowances payable to other members][1] shall be defrayed out of the grants referred to in sub-section (2) of section 12.

(5) A casual vacancy in the office of a member shall be filled up as soon as may be, by the authority concerned and a member so nominated shall hold office for the unexpired portion of the term of the office of his predecessor.

1. Substituted by Act 35 of 2011 w.e.f. 16.7.2011.

**5. Disqualification for office of membership .-** (1) A person shall be disqualified for being appointed as and for being continued as the Chairman or a member as the case may be, if he ,-

(a) has been convicted and sentenced for imprisonment for an offence which in the opinion of the Government involves moral turpitude; or

(b) is of unsound mind and stands so declared by a competent court; or

(c) is an undischarged insolvent; or

(d) has been removed or dismissed from service of the Central Government or a State Government or a body or corporation owned or controlled by the Central Government or a State Government; or

(e) refuses to act or becomes incapable of acting; or

(f) without obtaining leave of absence from the Commission, absents from three consecutive meetings of the Commission; or

(g) has in the opinion of the Government, so abused the position of chairperson or member as to render that person's continuance in office is detrimental to the interests of the minorities or the public interest:

Provided that no person shall be removed under this clause until that person has been given a reasonable opportunity of being heard in the matter.

(2) Any person who is disqualified under sub-section (1) shall be removed by the Government.

**6. Secretary .-** (1) The Secretary shall receive such salary and other allowance as the Government may determine from time to time.

(2) The Government may grant from time to time leave of absence to the Secretary.

(3) The Secretary shall be the Chief Executive of the Commission and shall ,-

(a) operate the grants of the Commission;

(b) cause to be maintained accounts of the Commission; and

(c) discharge such other functions, which are conferred on him by or under this Act or any other law for the time being in force.

**7. Staff of the Commission .-** (1) The Government shall provide such staff to the Commission, as may be required for the proper functioning of the Commission.

(2) The administrative expenses of the Commission including the salaries, allowances and pensions payable to the Secretary and other officers and staff of the Commission shall be paid out of the grants referred to in sub-section (2) of section 12.

**8. Meetings of the Commission .-** (1) The Commission shall meet as and when necessary at Bangalore or at other places as the Chairman may think fit:

Provided that the Commission shall meet atleast once in three months.

(2) The Commission shall regulate its own procedure.

(3) All the orders and decisions of the Commission shall be authenticated by the Secretary or any other officer of the Commission duly authorised by the Secretary in this behalf.

**9. Vacancies etc., not to invalidate proceedings of the Commission.-** No act or proceeding of the Commission shall be questioned or shall be invalid merely on the ground of the existence of any vacancy or deficit in the constitution of the Commission.

## CHAPTER III

## FUNCTIONS OF THE COMMISSION

**10. Functions of the Commission .-** (1) The functions of the Commission shall be as follows :-

(a) to examine the working of various safeguards provided in the Constitution and in the laws passed by the State Legislature for the protection of minorities;

(b) to make recommendations with a view to ensuring effective implementation and enforcement of all the safeguards;

[1][(bb) to make recommendations for implementing the Prime Ministers new 15 Point Programme.][1]

(c) to monitor the working of the safeguards provided in the constitution, laws enacted by the State Legislature and policies and schemes of the Government for minorities;

(d) to conduct studies, research and analysis on the questions of avoidance of discriminations against minorities;

(e) to make a factual assessment of the representation on minorities in the services of the Government undertakings, Government and quasi-Government bodies and in case representation is inadequate, to suggest ways and means to achieve the desired level;

(f) to make recommendations for ensuring, maintaining and promoting communal harmony in the State;

(g) to make periodical reports at prescribed intervals to the Government;

(h) to study any other matter which in the opinion of the Commission is important from the point of view of the welfare and development of minorities and to make appropriate recommendation;

(i) to consider the grievances of the minorities and to suggest appropriate solution from time to time;

(j) to look into specific complaints regarding deprivation of rights and safeguards of minorities and take up such matter with the appropriate authorities:

Provided that if any matter specified in sub-section (1) is undertaken by the National Commission for Minorities constituted under section 3 of the National Commission for Minorities Act, 1992 (Central Act 19 of 1992), the State Commission for Minorities shall cease to have jurisdiction in such matters.

(2) The Government shall cause the recommedations of the Commission to be laid before each House of the State Legislature along with the memorandum explaining the action taken or proposed to be taken on the recommendations and the reasons for non-acceptance, of any such recommendations.

1. Substituted by Act 35 of 2011 w.e.f. 16.7.2011.

**11. Protection of action taken in good faith .-** No suit, prosecution or other legal proceedings shall lie against the Commission or Chairman, any member thereof or any persons acting under the direction of the Commission, in respect of anything which is done in good faith or intended to be done in pursuance of this Act, by or under the authority of Commission or any report, paper or proceedings of the Commission.

## CHAPTER IV
## FINANCE, ACCOUNTS AND AUDIT

**12. Budget of the Commission and grants by the Government .-** (1) The Commission shall prepare every year before such date and in such form, as may be prescribed a budget estimates of its income and expenditure for the financial year to commence on the first day of April next following and shall forward it to the Government.

(2) The Government shall, after due appropriation made by the State Legislature by law in this behalf, pay to the Commission, by way of grants such sums of money as the Government may think fit for being utilised for the purpose of this Act.

(3) The Commission may spend such sums out of the grant as it thinks fit for performing the functions under this Act and such sums, shall be treated as expenditure payable out of the grants referred to in sub-section (2).

**13. Accounts and audit .-** (1) Accounts of the income and expenditure of the Commission shall be kept in accordance with such rules, as may be prescribed.

(2) The Commission shall prepare an annual statement of accounts in such form as may be prescribed.

(3) The accounts of the Commission shall be audited annually by such auditor as the Government may appoint.

(4) The auditor shall for the purpose of the audit have access to all the accounts and other records of the Commission.

(5) The Commission shall pay out of the grant such charges for the audit as may be prescribed.

(6) As soon as may be after the receipt of the report of the auditor, the Commission shall send a copy of the annual statement of accounts, together with a copy of the report of the auditor to the Government and shall cause to be published the annual statement of accounts in such manner as may be prescribed.

(7) The Government may, after perusal of the report of the auditor, give such directions, as it thinks fit, to the Commission and the Commission shall comply with such directions.

**14. Annual Report .-** The Commission, shall prepare in such form and at such time for each financial year, as may be prescribed its annual report, giving a full account of its activities during the previous financial year and forward a copy thereof to the Government.

**15. Annual report and audit report to be laid before the State Legislature .-** The Government shall cause the annual report together with a memorandum of action taken on the recommendations contained therein, in so far as they relate to the State

Government, and the reasons for the non-acceptance, if any, of any of such recommendations to be laid, as soon as may be, after the reports are received, before each House of the State Legislature. The Commission may, at its direction, submit from time to time, special reports on any matter of public importance to the Government.

## CHAPTER V

## MISCELLANEOUS

**16. Chairman, etc., to be public servants .-** The Chairman and every member of the Commission and every officer appointed or authorised by the Commission to exercise functions under this Act, shall be deemed to be public servant within the meaning of section 21 of the Indian Penal Code (Central Act 45 of 1860).

**17. Power to make rules .-** (1) The Government may, after previous publication by notification, in the official Gazette, make rules for the purposes of carrying out the provisions of this Act.

(2) In particular and without prejudice to the generality of the foregoing provisions, such rules may provide for,-

(a) to determine the status of Chairman of the Commission;

[1][(b) the salary, allowances and other emoluments payable to the Chairman, the allowances payable to other members of the Commission and other conditions of service.][1]

(c) any other matter which is to be or may be prescribed in pursuance of the provisions of the Act and that provision is in the opinion of the Government, necessary for the proper implementation of this Act.

(3) Every rule made under this Act shall be laid, as soon as may be after it is made, before each House of the State Legislature while it is in session for a total period of thirty days, which may be comprised in one session or in two or more successive sessions and, if before the expiry of the session in which it is so laid or the session immediately following the sessions aforesaid both Houses agree in making any modifications in the rule or both Houses agree that the rule should not be made, the rule shall thereafter have effect only in such modified form or be of no effect, as the case may be, so however, that any such modification or annulment shall be without prejudice to the validity of anything previously done under that rule.

1. Substituted by Act 35 of 2011 w.e.f. 16.7.2011.

**18. Power to remove difficulties .-** (1) If any difficulty arises in giving effect to the provisions of this Act, the State Government may, by order published in the official Gazette, make such provisions not inconsistent with the provisions of this Act as appear to it to be necessary or expedient for removing the difficulty:

Provided that no order shall be made after the expiry of a period of two years from the date of commencement of this Act.

(2) Every order under this section shall, as soon as may be after it is made, be laid before each House of the State Legislature.

* * * *

(The above translation of the , ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994 was published in the official Gazette (Extrardinary) Part IV-2B dated 15.5.1997 as No. 567 at pages 1to 8 under clause (3) of Article 348 of the Constitution of India.)

* * * *

## ಕೂಡಲ ಸಂಗಮ ಅಭಿವೃದ್ಧಿ ಮಂಡಲಿ ಅಧಿನಿಯಮ, 1994

## ಪ್ರಕರಣಗಳ ಕ್ರಮ ಪಟ್ಟಿ

ಪ್ರಕರಣಗಳು :


### ಅಧ್ಯಾಯ I

### ಪ್ರಾರಂಭಿಕ

1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.
2. ಪರಿಭಾಷೆಗಳು.

### ಅಧ್ಯಾಯ II

### ಮಂಡಲಿ ಮತ್ತು ಅದರ ಉದ್ಯೋಗಿಗಳು

3. ಮಂಡಲಿಯ ರಚನೆ.
4. ಪದಾವಧಿ ಮತ್ತು ಸೇವಾ ಷರತ್ತುಗಳು.
5. ಸದಸ್ಯನ ಪದಕ್ಕೆ ಅನರ್ಹತೆಗಳು.
6. ಸದಸ್ಯನನ್ನು ತೆಗೆದು ಹಾಕುವುದು.
7. ಮರು ನೇಮಕಾತಿಗೆ ಅರ್ಹತೆ.
8. ಮಂಡಲಿಯ ಅಧಿಕಾರಗಳು.
9. ಮಂಡಲಿಯ ಉಪ-ಸಮಿತಿ.
10. ಆಯುಕ್ತನ ನೇಮಕಾತಿ.
11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು.
12. ಮಂಡಲಿಯ ನೌಕರರು.
13. ಮಂಡಲಿಯ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆಗಳು.
14. ಮಂಡಲಿಯ ಸಭೆಗಳು.
15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು.
16. ಸುತ್ತೋಲೆಯ ಮೂಲಕ ಮಂಡಲಿಯ ತೀರ್ಮಾನಗಳನ್ನು ಸೂಚಿಸುವುದು.
17. ನಿರ್ದಿಷ್ಟ ಪ್ರಕರಣಗಳಲ್ಲಿ ಮಂಡಲಿಯ ಪರವಾಗಿ ತೀರ್ಮಾನ ಕೈಗೊಳ್ಳಲು ಅಧ್ಯಕ್ಷನ ಅಧಿಕಾರ

### ಅಧ್ಯಾಯ III

### ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆ

18. ಶ್ರೀ ಸಂಗಮನಾಥ ದೇವಸ್ಥಾನವನ್ನು ಮಂಡಲಿಯಲ್ಲಿ ನಿಹಿತಗೊಳಿಸುವುದು.

19. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು.

20. ತರುವಾಯದ ಅಭಿವೃದ್ಧಿ ಕಾಮಗಾರಿಗಳು.

21. ಕೂಡಲ ಸಂಗಮ ಕ್ಷೇತ್ರದ ನಿರ್ವಹಣೆ.

22. ಅಧಿಕಾರಗಳ ಪ್ರತ್ಯಾಯೋಜನೆ.

## ಅಧ್ಯಾಯ IV

### ಹಣಕಾಸು ಮತ್ತು ಸ್ವತ್ತು

23. ಮಂಡಲಿಯ ನಿಧಿ.

24. ನಿಧಿಯ ಬಳಕೆ.

25. ಸರ್ಕಾರದಿಂದ ಅನುದಾನ.

26. ಮಂಡಲಿಯ ಬಜೆಟ್.

27. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ.

28. ವರದಿಗಳು.

## ಅಧ್ಯಾಯ V

### ಸಂಕೀರ್ಣ

29. ಮಂಡಲಿಯು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯವುದೇ ಜಮೀನನ್ನು ಮಾರಾಟ ಮಾಡಕೂಡದು.

30. ಕೆಲವು ವ್ಯಕ್ತಿಗಳು ಲೋಕನೌಕರರಾಗಿರತಕ್ಕದ್ದು.

31. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.

32. ಕರ್ತವ್ಯ ನಿರ್ವಹಣೆಯಲ್ಲಿ ಲೋಪ.

33. ಮಂಡಲಿಯ ವಿಘಟನೆ.

34. ರಾಜ್ಯ ಸರ್ಕಾರದ ನಿಯಂತ್ರಣ.

35. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ.

36. ತೊಂದರೆಗಳ ನಿವಾರಣೆ.

37. ನಿಯಮಗಳ ರಚನಾಧಿಕಾರ.

38. ವಿನಿಯಮಗಳ ರಚನಾಧಿಕಾರ.

* * * *

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

I

**1994ರ ಅಧಿನಿಯಮ ಸಂಖ್ಯೆ 37.–** ಕೃಷ್ಣಾನದಿಗೆ ಅಣೆಕಟ್ಟೊಂದನ್ನು ನಿರ್ಮಿಸಿದ ಕಾರಣದಿಂದಾಗಿ ಕೂದಲ ಸಂಗಮದಲ್ಲಿರುವ ಶ್ರೀ ಸಂಗಮನಾಥ ದೇವಸ್ಥಾನವನ್ನು ಹೊಸಸ್ಥಳಕ್ಕೆ ಸ್ಥಳಾಂತರಿಸಲು ಉದ್ದೇಶಿಸಲಾಗಿದ್ದು. ದೇವಸ್ಥಾನದ ಸಂರಕ್ಷಣೆಗಾಗಿ ಪರಿಶೀಲನೆ ನಡೆಸುವ ಉದ್ದೇಶದಿಂದ ಭಾರತದ ಮಾಜಿ ಉಪ-ರಾಷ್ಟಪತಿ ಡಾ॥ ಬಿ. ಡಿ. ಜತ್ತಿ ಅವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಾಜ್ಯ ಸರ್ಕಾರವು ನೇಮಕಮಾಡಿತು ನಂತರ, ಸಮಿತಿಯ ಮುಖ್ಯಸ್ಥರಾಗಿರಲು ಡಾ॥ ಬಿ. ಡಿ. ಜತ್ತಿ ಯವರಿಗೆ ಸಾಧ್ಯವಾಗದಿದ್ದರಿಂದ ಶ್ರೀ ವಿಶ್ವನಾಥರೆಡ್ಡಿ ಮುದ್ನಾಳ್ ಅವರನ್ನು ಸಮಿತಿಯ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಯಿತು. ಮುದ್ನಾಳ್ ಸಮಿತಿಯು, ಶ್ರೀಸಂಗಮನಾಥ ದೇವಸ್ಥಾನವನ್ನು ಅದರ ಮೂಲಸ್ಥಳದಲ್ಲಿಯೇ ಉಳಿಸಿ ಕಾಪಾಡಿಕೊಂಡು ಬರುವುದಕ್ಕೆ ಹಾಗೂ ಶ್ರೀಸಂಗಮನಾಥ ಕ್ಷೇತ್ರವನ್ನು ಒಂದು ಅಂತರಾಷ್ಟ್ರೀಯ ಧಾರ್ಮಿಕ ಕ್ಷೇತ್ರ, ಸಾಂಸ್ಕೃತಿಕ ಮತ್ತು ಪ್ರವಾಸೀ ಕೇಂದ್ರವನ್ನಾಗಿ ಸುಮಾರು 400 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸುವುದಕ್ಕೆ ಅನೇಕ ಕ್ರಮಗಳನ್ನು ಕೈಗೊಳ್ಳುವಂತೆ ಶಿಫಾರಸು ಮಾಡಿತು.

ಕೂಡಲ ಸಂಗಮ ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣಾ ಕಾರ್ಯವನ್ನು ವಹಿಸಿಕೊಡುವುದಕ್ಕೆ ಒಂದು ಪ್ರತ್ಯೇಕ ಶಾಸನಬದ್ಧ ಪ್ರಾಧಿಕಾರವನ್ನು ರಚಿಸುವುದು ಮತ್ತು ಆ ಉದ್ದೇಶಕ್ಕಾಗಿ ಒಂದು ಅಧಿನಿಯಮಿತಿಯನ್ನು ತರುವುದು ಅವಶ್ಯಕವೆಂದು ಪರಿಗಣಿಸಲಾಗಿದೆ. ಈ ಕ್ರಮದ ಮುಖ್ಯಾಂಶಗಳು ಹೀಗಿವೆ.-

(ಎ) ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಸಚಿವರು, ಲೋಕಸಭಾ ಸದಸ್ಯರು, ವಿಧಾನಮಂಡಲದ ಸದಸ್ಯರು, ಅಧಿಕಾರೇತರ ವ್ಯಕ್ತಿಗಳು ಮತ್ತು ಅಧಿಕಾರಿಗಳು ಸದಸ್ಯರಾಗಿರುವ ಒಂದು ಅಭಿವೃದ್ಧಿ ಮಂಡಲಿಯನ್ನು ರಚಿಸುವುದು.

(ಬಿ) ಒಬ್ಬ ಆಯುಕ್ತನನ್ನು ನೇಮಿಸುವುದು, ಅವರು ಮಂಡಲಿಯ ಮುಖ್ಯ ಕಾರ್ಯ ನಿರ್ವಾಹಕ ಮತ್ತು ಆಡಳಿತಾತ್ಮಕ ಅಧಿಕಾರಿಯಾಗಿರತಕ್ಕದ್ದು.

(ಸಿ) ಶ್ರೀ ಸಂಗಮನಾಥದೇವಸ್ಥಾನ ಮತ್ತು ಕೂಡಲ ಸಂಗಮದಲ್ಲಿರುವ ಶ್ರೀ ಬಸವೇಶ್ವರ ಐಕ್ಯಮಂಟಪವನ್ನು ರಾಜ್ಯ ಸರ್ಕಾರಕ್ಕೆ ವಹಿಸಿಕೊಡುವುದು ಮತ್ತು ಅದನ್ನು ಮಂಡಲಿಗೆ ವರ್ಗಾಯಿಸುವುದು.

(ಡಿ) ಮಂಡಲಿಯು, ಕೂಡಲಸಂಗಮ ಕ್ಷೇತ್ರದ ಅಭಿವೃದ್ಧಿಗಾಗಿ ಮತ್ತು ಅದರ ನಿರ್ವಹಣೆಗಾಗಿ ಅಭಿವೃದ್ಧಿ ಯೋಜನೆಯೊಂದನ್ನು ತಯಾರಿಸುವುದು.

(ಇ) ಕೂಡಲಸಂಗಮ ಅಭಿವೃದ್ಧಿ ಮಂಡಲಿ ನಿಧಿ ಎಂದು ಕರೆಯಲಾಗುವ ನಿಧಿಯನ್ನು ರಚಿಸುವುದು. ಅದು ಅನುದಾನಗಳು, ಅರ್ಥಿಕ ಸಹಾಯಗಳು, ವಂತಿಗೆಗಳು ಮತ್ತು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಸ್ಥಳೀಯ ಪ್ರಾಧಿಕಾರ ಮುಂತಾದವುಗಳನ್ನು ಒಳಗೊಂಡಿರತಕ್ಕದ್ದು.

(ಎಫ್) ನಿಧಿಯ ವಿನಿಯೋಗ.

(ಜಿ) ಪ್ರತಿವರ್ಷ ರಾಜ್ಯ ಸರ್ಕಾರದಿಂದ ಅನುದಾನ.

(ಹೆಚ್) ಕೆಲವು ಇತರ ಅನುಷಂಗಿಕ ವಿಷಯಗಳು.

ಆದ್ದರಿಂದ ಈ ವಿಧೇಯಕ.

(1994ರ ವಿದಾನ ಸಭಾ ವಿಧೇಯಕ ಸಂಖ್ಯೆ 27ರಲ್ಲಿದ್ದಂತೆ)

## II

**1997ರ ಅಧಿನಿಯಮ ಸಂಖ್ಯೆ 21.-** ಕೂಡಲಸಂಗಮ ಅಭಿವೃದ್ಧಿ ಅಧಿನಿಯಮ, 1994 (1994ರ ಕರ್ನಾಟಕ ಅಧಿನಿಯಮ 37) ರಲ್ಲಿ, ಅಧ್ಯಕ್ಷನ ಬದಲಾಗಿ ಮುಖ್ಯಮಂತ್ರಿಯವರನ್ನು ಪದನಿಮಿತ್ತ ಅಧ್ಯಕ್ಷರನ್ನಾಗಿ ಮಾಡಲು 3ನೇ ಪ್ರಕರಣದ (4)ನೇ ಉಪ-ಪ್ರಕರಣವನ್ನು ತಿದ್ದುಪಡಿಮಾಡಲು ಮತ್ತು (4)ನೇ ಉಪ-ಪ್ರಕರಣದ (ಜಿ) ಖಂಡದ ಪರಂತುಕದಲ್ಲಿ, ಲೋಕೋಪಯೋಗಿ ಇಲಾಖೆಯ (ಸಿ ಮತ್ತು ಬಿ) ಯಲ್ಲಿ ಕೆಲಸಮಾಡಿತ್ತಿರುವ ವ್ಯಕ್ತಿಗಳನ್ನು ಮಾತ್ರವೇ ನಾಮ ನಿರ್ದೇಶನ ಮಾಡಲು ಇರುವ ನಿರ್ಬಂಧವನ್ನು ತೆಗೆದುಹಾಕಲು ಲೋಕೋಪಯೋಗಿ (ಸಿ ಮತ್ತು ಬಿ) ಎಂಬ ಪದಗಳನ್ನು ಬಿಟ್ಟುಬಿಡಲು ಉದ್ದೇಶಿಸಲಾಗಿದೆ. 5ನೇ ಪ್ರಕರಣದ (ಎಫ್) ಖಂಡದ ಪರಂತುಕದಲ್ಲಿ "ಹಿತಾಸಕ್ತಿ" ಎಂಬ ಪದವನ್ನು ಸೇರಿಸಲು ಉದ್ದೇಶಿಸಲಾಗಿದೆ. 6ನೇ ಪ್ರಕರಣದ (ಸಿ) ಖಂಡದ ಪರಂತುಕದಲ್ಲಿ "ಸರ್ಕಾರೇತರ" ಎಂಬುದರ ಬದಲು"ಪದ-ನಿಮಿತ್ತ" ಎಂದಿರಬೇಕಾಗಿತ್ತು ಅದೇ ಪ್ರಕಾರವಾಗಿ ಅದನ್ನು ಮಾರ್ಪಾಡು ಮಾಡಲಾಗುತ್ತಿದೆ. "ಅಥವಾ ಬಳಸಲು" ಎಂಬುದು ಅವಶ್ಯವಾಗಿದ್ದು ಅದೇ ರೀತಿ ತಿದ್ದುಪಡಿ ಮಾಡಲಾಗಿದೆ. 12ನೇ ಪ್ರಕರಣದಲ್ಲಿ ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯನ್ನು ಪ್ರತಿನಿಯೋಜನೆಯ ಮೇಲೆ ನೇಮಕ ಮಾಡಿಕೊಳ್ಳತಕ್ಕದ್ದಾಗಿದೆ. ಆದ್ದರಿಂದ "ಪ್ರತಿಯೋಜನೆ" ಎಂಬ ಪದವನ್ನು ಸೇರಿಸಲಾಗಿದೆ. 14ನೇ ಪ್ರಕರಣದಲ್ಲಿ "ನಿಯಮಿಸಬಹುದು" ಎಂಬುದಕ್ಕೆ ಬದಲಾಗಿ "ಗೊತ್ತುಪಡಿಸಬಹುದು" ಎಂಬ ಪದವನ್ನು ಪ್ರತಿಯೋಜಿಸಲಾಗಿದೆ. 18ನೇ ಪ್ರಕರಣದಲ್ಲಿ ನ್ಯಾಸವು ಅಸ್ತಿತ್ವದಲ್ಲಿರುವುದರಿಂದ, "ಅಥವಾ" ಎಂಬ ಪದಕ್ಕೆ ಬದಲಾಗಿ "ಮತ್ತು" ಎಂಬ ಪದವನ್ನು ಪ್ರತಿಯೋಜಿಸಲಾಗಿದೆ. ಇತರ ತಿದ್ದುಪಡಿಗಳನ್ನು ಆನುಷಂಗಿಕವಾಗಿ ಮಾಡಲಾಗಿದೆ.

ಆದ್ದರಿಂದ ವಿಧೇಯಕ.

(ತಾ: 19-7-1996ರ ಕರ್ನಾಟಕ ರಾಜ್ಯ ಪತ್ರ (ವಿಶೇಷ ಪತ್ರಿಕೆ)ಯ ಭಾಗ-4-2ಎ ರಲ್ಲಿ ನಂ 983 ಆಗಿ ಪ್ರಕಟವಾಗಿದೆ.)

* * * *

सत्यमेव जयते

## 1994ರ ಕರ್ನಾಟಕ ಅಧಿನಿಯಮ ಸಂಖ್ಯೆ 37

(1994ರ ಅಕ್ಟೋಬರ್ ಏಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕೂಡಲ ಸಂಗಮ ಅಭಿವೃದ್ಧಿ ಮಂಡಲಿ ಅಧಿನಿಯಮ, 1994

(1994ರ ಅಕ್ಟೋಬರ್ ಆರನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

(1997ರ ಅಧಿನಿಯಮ ಸಂಖ್ಯೆ 21ರಲ್ಲಿ ತಿದ್ದುಪಡಿಯಾದಂತೆ)

**ಬಿಜಾಪುರ ಜಿಲ್ಲೆಯಲ್ಲಿನ ಕೂಡಲ ಸಂಗಮ ಕ್ಷೇತ್ರವನ್ನು ಅಭಿವೃದ್ಧಿಗೊಳಿಸಲು ಮತ್ತು ನಿರ್ವಹಿಸಲು ಒಂದು ಮಂಡಲಿಯನ್ನು ಸ್ಥಾಪಿಸಲು ಉಪಬಂಧ ಕಲ್ಪಿಸುವ ಅಧಿನಿಯಮ.**

ಬಿಜಾಪುರ ಜಿಲ್ಲೆಯಲ್ಲಿನ ಕೂಡಲ ಸಂಗಮ ಕ್ಷೇತ್ರವನ್ನು ಅಂತರರಾಷ್ಟ್ರೀಯ ಯಾತ್ರಾಸ್ಥಳವನ್ನಾಗಿ, ಸಾಂಸ್ಕೃತಿಕ ಮತ್ತು ಪ್ರವಾಸ ಕೇಂದ್ರವನ್ನಾಗಿ ಅಬಿವೃದ್ಧಿಗೊಳಿಸಲು ಮತ್ತು ಅದನ್ನು ನಿರ್ವಹಿಸಲು ಒಂದು ಮಂಡಲಿಯನ್ನು ಸ್ಥಾಪಿಸಲು ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ನಲವತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕುದು:-

### ಅಧ್ಯಾಯ I

### ಪ್ರಾರಂಭಿಕ

**1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕೂಡಲ ಸಂಗಮ ಅಭಿವೃದ್ಧಿ ಮಂಡಲಿ ಅಧಿನಿಯಮ, 1994 ಎಂದು ಕರೆಯತಕ್ಕದು.

(2) ಇದು 2ನೇ ಪ್ರಕರಣದ (ಎಫ್) ಖಂಡದಲ್ಲಿ ಪರಿಭಾಷಿಸಿದಂತೆ ಕೂಡಲ ಸಂಗಮ ಕ್ಷೇತ್ರದ ಪ್ರದೇಶಕ್ಕೆ ಅನ್ವಯಿಸತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ಅಂಥ [1][ದಿನಾಂಕದಿಂದ][1] ಜಾರಿಗೆ ಬರತಕ್ಕದ್ದು.

1. ಈ ಅಧಿನಿಯಮವು ಅಧಿಸೂಚನೆ ಮೂಲಕ ದಿನಾಂಕ: 01.08.1995 ರಿಂದ ಜಾರಿಗೆ ಬಂದಿದೆ.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಸೌಕರ್ಯ" ಎಂಬುವುದರಲ್ಲಿ ರಸ್ತೆ, ಬೀದಿಗಳು, ಸುರಂಗ ಮಾರ್ಗಗಳು, ದೀಪದ ವ್ಯವಸ್ಥೆ, ಚರಂಡಿ ವ್ಯವಸ್ಥೆ, ನೈರ್ಮಲೀಕರಣ, ವಿದ್ಯುಚ್ಛಕ್ತಿ ಮತ್ತು ನೀರು ಸರಬರಾಜು ಅಥವಾ ಇತರ ಅನುಕೂಲಗಳು; ಲೋಕೋಪಯೋಗಿ ಕಾಮಗಾರಿಗಳು, ಮಾರುಕಟ್ಟೆ ಸ್ಥಳಗಳು, ಅಂಚೆ ಕಚೇರಿ, ಬ್ಯಾಂಕು, ಆಸ್ಪತ್ರೆ, ಚಿಕಿತ್ಸಾಲಯ, ಪೊಲೀಸು ಠಾಣೆ, ನ್ಯಾಯಬೆಲೆ ಅಂಗಡಿ, ಹಾಲಿನ ಕೇಂದ್ರ, ಗ್ರಂಥಾಲಯ, ಮನರಂಜನಾ ಕೇಂದ್ರಗಳು, ಮಂಡಲಿಯು ಪ್ರಾಧಿಕೃತಗೊಳಿಸಿದ ಸಾರ್ವಜನಿಕ ಉಪಯುಕ್ತ ಸೇವೆಯ ಯಾವುವೇ ಸೇವಾ ಕೇಂದ್ರಗಳು, ಅಥವಾ ಇತರ ಸೌಲಭ್ಯ; ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ಸೌಕರ್ಯಗಳನ್ನು ಒಳಗೊಳ್ಳುತ್ತದೆ;

(ಬಿ) "ಮಂಡಲಿ" ಎಂದರೆ 3ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಕೂಡಲ ಸಂಗಮ ಅಭಿವೃದ್ಧಿ ಮಂಡಲಿ;

(ಸಿ) "ಅಧ್ಯಕ್ಷ" ಎಂದರೆ ಮಂಡಲಿಯ ಅಧ್ಯಕ್ಷ;

(ಡಿ) "ಆಯುಕ್ತ" ಎಂದರೆ 10ನೇ ಪ್ರಕರಣದ ಅಡಿಯಲ್ಲಿ ನೇಮಕಮಾಡಲಾದ ಮಂಡಲಿಯ ಆಯುಕ್ತ;

(ಇ) "ನಿಧಿ" ಎಂದರೆ ಮಂಡಲಿಯ ನಿಧಿ;

(ಎಫ್) "ಕೂಡಲ ಸಂಗಮ ಕ್ಷೇತ್ರ" ಎಂದರೆ ಬಿಜಾಪುರ ಜಿಲ್ಲೆಯ ಹುನಗುಂದ ತಾಲೂಕಿನ ಸಂಗಮ ಗ್ರಾಮದ ಶ್ರೀ ಸಂಗಮನಾಥ ದೇವಸ್ಥಾನ ಮತ್ತು ಶ್ರೀ ಬಸವೇಶ್ವರ ಐಕ್ಯ ಮಂಟಪ ಮತ್ತು ಕೂಡಲ ಸಂಗಮ

ಕ್ಷೇತ್ರದ ಅಭಿವೃದ್ಧಿಗಾಗಿ ಕಾಲಕಾಲಕ್ಕೆ ರಾಜ್ಯ ಸರ್ಕಾರವು ಆರ್ಜಿಸಿದ ಭೂಮಿ ಮತ್ತು ಅಧಿಸೂಚನೆಯ ಮೂಲಕ ಘೋಷಿಸಲಾದ ಅಂಥ ಇತರ ಪ್ರದೇಶ ಮತ್ತು ಇವುಗಳನ್ನು ಒಳಗೊಳ್ಳುತ್ತದೆ;

(ಜಿ) "ಸದಸ್ಯ" ಎಂದರೆ ಮಂಡಲಿಯ ಸದಸ್ಯ;

(ಹೆಚ್) "ವಿನಿಯಮ" ಎಂದರೆ 38ನೇ ಪ್ರಕರಣದ ಅಡಿಯಲ್ಲಿ ಮಾಡಿದ ಮಂಡಲಿಯ ವಿನಿಯಮಗಳು.

## ಅಧ್ಯಾಯ II

## ಮಂಡಲಿ ಮತ್ತು ಅದರ ಉದ್ಯೋಗಿಗಳು

**3. ಮಂಡಲಿಯ ರಚನೆ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ಕೂಡಲ ಸಂಗಮ ಕ್ಷೇತ್ರ ಅಭಿವೃದ್ಧಿ ಮಂಡಲಿ ಎಂದು ಕರೆಯಲಾಗುವ ಒಂದು ಮಂಡಲಿಯನ್ನು ಸ್ಥಾಪಿಸತಕ್ಕದ್ದು.

(2) ಮಂಡಲಿಯು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಮಂಡಲಿಯು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಮಂಡಲಿಯು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ)ಮುಖ್ಯ ಮಂತ್ರಿಯು ಮಂಡಲಿಯ [1][ಪದನಿಮಿತ್ತ ಅಧ್ಯಕ್ಷನಾಗಿರತಕ್ಕದ್ದು][1];

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಪ್ರತಿಯೋಜಿಸಲಾಗಿದೆ.

(ಬಿ) ಕೃಷ್ಣ ಮೇಲ್ದಂಡೆ ಯೋಜನೆಯಿಂದ ಸ್ಥಳಾಂತರಿತವಾದ ಕುಟುಂಬಗಳ ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಪ್ರಭಾರದಲ್ಲಿರುವ ಸಚಿವರು;

(ಸಿ) ಭಾರಿ ನೀರಾವರಿಯ ಪ್ರಭಾರದಲ್ಲಿರುವ ಸಚಿವರು;

(ಡಿ) ಕೂಡಲ ಸಂಗಮ ಕ್ಷೇತ್ರವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಹಾಗೂ ಅದರ ಎಲ್ಲೆಗಳೊಳಗೆ ತಮ್ಮ ಚುನಾವಣಾ ಕ್ಷೇತ್ರವನ್ನು ಹೊಂದಿರುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು;

(ಇ) ಅಧ್ಯಕ್ಷ, ಬಸವ ಸಮಿತಿ, ಬಸವ ಭವನ, ಬಸವೇಶ್ವರ ವೃತ್ತ, ಬೆಂಗಳೂರು;

(ಎಫ್) ಅಧ್ಯಕ್ಷ, ಅಖಿಲ ಭಾರತ ವೀರಶೈವ ಮಹಾಸಭಾ, ಸಂಖ್ಯೆ 18, ಶೇಷಾದ್ರಿ ರಸ್ತೆ, ಬೆಂಗಳೂರು;

(ಜಿ) ಶ್ರೀ ಬಸವೇಶ್ವರರು ಅಂಗೀಕರಿಸಿದ ತತ್ವಗಳ ಸಲುವಾಗಿ ಸೇವೆ ಸಲ್ಲಿಸಿರುವ, ರಾಜ್ಯ ಸರ್ಕಾರವು ನಾಮ ನಿರ್ದೇಸಿಸಿದ ಐದು ಜನರಿಗೆ ಹೆಚ್ಚಿಲ್ಲದ ಸದಸ್ಯರು:

ಪರಂತು, ಅವರಲ್ಲಿ ಒಬ್ಬ ವ್ಯಕ್ತಿಯು,-

(i) ಭಾರತದಲ್ಲಿ ಕಾನೂನಿನ ಮೂಲಕ ಸ್ಥಾಪಿಸಲಾದ ಯಾವುದೇ ವಿಶ್ವವಿದ್ಯಾಲಯವು ಪ್ರದಾನ ಮಾಡಿದ ಸಿವಿಲ್ ಇಂಜಿನಿಯರಿಂಗ್ ಪದವಿಯನ್ನು ಹೊಂದಿರುವವನಾಗಿರತಕ್ಕದ್ದು; [1][ಮತ್ತು][1]

(ii) [1][ಸಿವಿಲ್][1]ಮುಖ್ಯ ಇಂಜಿನಿಯರ್ ಪದವನ್ನು ಧಾರಣ ಮಾಡಿರುವ ಅಧಿಕಾರಿಯಾಗಿರತಕ್ಕದ್ದು;

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಪ್ರತಿಯೋಜಿಸಲಾಗಿದೆ.

(ಎಚ್) ಕೃಷ್ಣಾ ಮೇಲ್ದಂಡೆ ಯೋಜನೆಯ ಅಡಿಯಲ್ಲಿಯ ಪುನರ್ವಸತಿ ಮತ್ತು ಪುನರ್ ವ್ಯವಸ್ಥೆಯ ನಿರ್ದೇಶಕರು;

(ಐ) ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿಯ ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆಯ ಕಾಮಗಾರಿಗಳ ಪ್ರಭಾರದಲ್ಲಿರುವ ಸರ್ಕಾರದ ಕಾರ್ಯದರ್ಶಿ;

(ಜೆ) ಸರ್ಕಾರದ ಕಾರ್ಯದರ್ಶಿ, ಹಣಕಾಸು ಇಲಾಖೆ;

(ಕೆ) ಸರ್ಕಾರದ ಕಾರ್ಯದರ್ಶಿ, ನೀರಾವರಿ ಇಲಾಖೆ;

(ಎಲ್) ಬೆಳಗಾಂ ವಿಭಾಗದ ವಿಭಾಗೀಯ ಕಮೀಷನರು;

(ಎಂ) ಸರ್ಕಾರದ ವಿಶೇಷ ಕಾರ್ಯದರ್ಶಿ, ನೀರಾವರಿ ಇಲಾಖೆ ಮತ್ತು ಯೋಜನಾ ಸಮನ್ವಯಾಧಿಕಾರಿ, ಕೃಷ್ಣಾ ಮೇಲ್ದಂಡೆ ಯೋಜನೆ;

(ಎನ್) ಡೆಪ್ಯುಟಿ ಕಮೀಷನರು, ಬಿಜಾಪುರ ಜಿಲ್ಲೆ;

(ಒ) ಬಿಜಾಪುರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ;

(ಪಿ) ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆ, ಕೃಷ್ಣಾ ಮೇಲ್ದಂಡೆ ಯೋಜನೆಯ ಜನರಲ್ ಮ್ಯಾನೇಜರ್;

(ಕ್ಯೂ) ಕರ್ನಾಟಕದ ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯ ಇಲಾಖೆಯ ನಿರ್ದೇಶಕರು;

(ಆರ್) ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಐದು ಜನರ ಸಂಖ್ಯೆಯನ್ನು ಮೀರದಂಥ ಸರ್ಕಾರೇತರ ಸದಸ್ಯರು;

(ಎಸ್) ಮಂಡಲಿಯ ಆಯುಕ್ತನು ಸದಸ್ಯ-ಕಾರ್ಯದರ್ಶಿಯಾಗಿರತಕ್ಕದ್ದು.

**4. ಪದಾವಧಿ ಮತ್ತು ಸೇವಾ ಷರತ್ತುಗಳು.-** (1) ರಾಜ್ಯ ಸರ್ಕಾರದ ಇಚ್ಛೆಗೊಳಪಟ್ಟು, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಸರ್ಕಾರೇತರ ಸದಸ್ಯರು ಮೂರು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು;

(2) ಯಾವೊಬ್ಬ ಸರ್ಕಾರೇತರ ಸದಸ್ಯನು ತನ್ನ ಸಹಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಬರೆಯುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು. ಆದರೆ ಅವನ ರಾಜೀನಾಮೆಯು ಅಂಗೀಕಾರವಾಗುವವರೆಗೂ ಪದದಲ್ಲಿ ಮುಂದುವರೆಯತಕ್ಕದ್ದು.

(3) ಸರ್ಕಾರೇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯಗಳನ್ನು ಪಡೆಯತಕ್ಕದ್ದು.

**5. ಸದಸ್ಯನ ಪದಕ್ಕೆ ಅನರ್ಹತೆಗಳು.–** ಒಬ್ಬ ವ್ಯಕ್ತಿಯು,–

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದು ಕಾರವಾಸದ ಶಿಕ್ಷೆಗೆ ಗುರಿಯಾಗಿದ್ದರೆ; [1][ಅಥವಾ][1]

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; [ಅಥವಾ][1]

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ಒಂದು ನಿಕಾಯ ಅಥವಾ ನಿಗಮದ ಸೇವೆಯಿಂದ ತೆಗೆದು ಹಾಕಿದವನಾಗಿದ್ದರೆ ಅಥವಾ ವಜಾ ಮಾಡಿದವನಾಗಿದ್ದರೆ; [1][ಅಥವಾ][1]

(ಇ) ಮಂಡಲಿಯ ಆದೇಶದಿಂದ ಮಾಡಲಾದ ಯಾವುದೇ ಕಾರ್ಯದಲ್ಲಿ ಅಥವಾ ಮಂಡಲಿಯೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾದ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವತಃ ಅವನು ಅಥವಾ ಪಾಲುದಾರನಾಗಿ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ; [1][ಅಥವಾ][1]

(ಎಫ್)ಮಂಡಲಿಯ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾಗಿದ್ದರೆ ಅಥವಾ ಮಂಡಲಿಯ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಸೇರಿಸಲಾಗಿದೆ.

–ಅವನು ಸದಸ್ಯನಾಗಿ ನೇಮಕ ಹೊಂದಲು ಅಥವಾ ಸದಸ್ಯನಾಗಿರಲು ಅನರ್ಹನಾಗಿರತಕ್ಕದ್ದು:

ಪರಂತು, ಒಬ್ಬ ವ್ಯಕ್ತಿಯು, ಮಂಡಲಿಯ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ಯಾವುದೇ ಜಾಹೀರಾತನ್ನು ಸೇರಿಸಲಾದ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ (1)ನೇ ಉಪ-ಪ್ರಕರಣದ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥ ವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ [1][ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು][1] ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಪ್ರತಿಯೋಜಿಸಲಾಗಿದೆ.

**6. ಸದಸ್ಯನನ್ನು ತೆಗೆದು ಹಾಕುವುದು.–** (1) ರಾಜ್ಯ ಸರ್ಕಾರವು ಸದಸ್ಯನನ್ನು, ಅವನು,–

(ಎ) 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗಳಲ್ಲಿ ಯಾವುದೇ ಅನರ್ಹತೆಗೆ ಒಳಪಟ್ಟರೆ:

ಪರಂತು ಯಾವನೇ ಸದಸ್ಯನನ್ನು, ಅವನು ಆ ಪ್ರಕರಣದ (1)ನೇ ಉಪ ಪ್ರಕರಣದ (ಇ) ಖಂಡದಲ್ಲಿ ಹೇಳಲಾದ

ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ, ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ತೆಗೆದು ಹಾಕತಕ್ಕದ್ದಲ್ಲ; ಅಥವಾ

(ಬಿ) ಅವನು ಕಾರ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಸಿ) ಗೈರು ಹಾಜರಾಗಲು ಮಂಡಲಿಯಿಂದ ಅನುಮತಿ ಪಡೆಯದೆ ಮಂಡಲಿಯ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ:

ಪರಂತು, ಈ ಖಂಡವು [1][ಪದನಿಮಿತ್ತ][1] ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ; ಅಥವಾ

(ಡಿ) ಅವನನ್ನು ಆ ಪದದಲ್ಲಿ ಮುಂದುವರಿಸಿದರೆ, ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವಂತೆ ತನ್ನ ಸ್ಥಾನವನ್ನು ದುರುಪಯೋಗಪಡಿಸಿಕೊಳ್ಳುವನೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ,

-ಅವನನ್ನು ತೆಗೆದುಹಾಕತಕ್ಕದ್ದು;

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಪ್ರತಿಯೋಜಿಸಲಾಗಿದೆ.

ಪರಂತು, ಯಾವೊಬ್ಬ ಸದಸ್ಯನನ್ನು ಅವನಿಗೆ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ಹೊರತು ಈ ಖಂಡದ ಅಡಿಯಲ್ಲಿ ತೆಗೆದು ಹಾಕತಕ್ಕದ್ದಲ್ಲ.

**7. ಮರು ನೇಮಕಾತಿಗೆ ಅರ್ಹತೆ.-** ಯಾವನೇ ಸದಸ್ಯನು, ಸದಸ್ಯನಾಗಿರುವುದು ಸಮಾಪ್ತಿಯಾದಾಗ, 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗೊಳಗಾಗದಿರುವಲ್ಲಿ, ಸದಸ್ಯನಾಗಿ ಮರುನೇಮಕ ಹೊಂದಲು ಅರ್ಹನಾಗಿರತಕ್ಕದ್ದು.

**8. ಮಂಡಲಿಯ ಅಧಿಕಾರಗಳು.-** (1) ಈ ಅಧಿನಿಯಮದ ಉದ್ದೇಶಗಳು ಮತ್ತು ಉಪಬಂಧಗಳನ್ನು ಪರಿಣಾಮಗೊಳಿಸಲು ಮಂಡಲಿಯು ಅವಶ್ಯಕವೆಂದು ಅಭಿಪ್ರಾಯಪಡುವಂಥ ಯಾವುವೇ ಕಾರ್ಯಗಳನ್ನು ಮಾಡುವುದಕ್ಕೆ ಅಂಥ ಕಾರ್ಯಗಳನ್ನು ಇತರ ಪ್ರಾಧಿಕಾರಗಳ ಮೂಲಕ ನೆರವೇರಿಸಬೇಕೆಂದು ಈ ಅಧಿನಿಯಮದಲ್ಲಿ ನಿರ್ದಿಷ್ಟವಾಗಿ ವಿಧಿಸಿದ ಹೊರತು, ಸಾಮಾನ್ಯವಾಗಿ ಮಂಡಲಿಯು ಅಧಿಕಾರ ಹೊಂದಿರತಕ್ಕದ್ದು.

(2) (1)ನೇ ಉಪ-ಪ್ರಕರಣದ ಸಾಮಾನ್ಯತೆಗೆ ಪ್ರತಿಕೂಲವಾಗದಂತೆ ಮಂಡಲಿಯು,-

(ಎ) ನಿಯಮಿಸಬಹುದಾದ ಅಂಥ ನಿಯಮಗಳಿಗೆ ಒಳಪಟ್ಟು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು ಅವಶ್ಯಕ ಅಥವಾ ಯುಕ್ತವೆಂದು ತಾನು ಪರಿಗಣಿಸುವಂಥ ಎಲ್ಲ ಕರಾರುಗಳನ್ನು ಮಾಡಿಕೊಳ್ಳಲು ಮತ್ತು ನಿರ್ವಹಿಸಲು ಅಧಿಕಾರ ಹೊಂದಿರತಕ್ಕದ್ದು ಮತ್ತು ಪ್ರತಿಯೊಂದು ಕರಾರನ್ನು ಮಂಡಲಿಯ ಪರವಾಗಿ ಆಯುಕ್ತನು ಮಾಡಿಕೊಳ್ಳಲು:

ಪರಂತು, ಐದು ಲಕ್ಷ ರೂ.ಗಳ ಅಥವಾ ಅದಕ್ಕೂ ಹೆಚ್ಚು ವೆಚ್ಚವನ್ನೊಳಗೊಳ್ಳುವ ಯಾವುದೇ ಕರಾರನ್ನು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿ ಇಲ್ಲದೆ ಮಾಡಿಕೊಳ್ಳತಕ್ಕದ್ದಲ್ಲ.

(ಬಿ) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ಈ ಸಂಬಂಧವಾಗಿ ನಿಯಮಿಸಬಹುದಾದಂಥ ಷರತ್ತುಗಳಿಗೊಳಪಟ್ಟು,ಈ ಅಧಿನಿಯಮದ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಅಗತ್ಯವಾಗುವ ಯಾವುದೇ ಮೊಬಲಗನ್ನು ಸಾಲವಾಗಿ ಪಡೆಯಲು;

(ಸಿ) 35ನೇ ಪ್ರಕರಣಕ್ಕೆ ಮತ್ತು ನಿಯಮಿಸಬಹುದಾದ ಅಂಥ ನಿರ್ಬಂಧಗಳು, ಷರತ್ತುಗಳು ಮತ್ತು ಪರಿಮಿತಿಗಳಿಗೆ ಒಳಪಟ್ಟು ಅದಕ್ಕೆ ಸೇರಿದ ಚರ ಅಥವಾ ಸ್ಥಿರ ಸ್ವತ್ತನ್ನು ಗುತ್ತಿಗೆ, ಮಾರಾಟ ಅಥವಾ ಇತರ ರೀತಿಯಲ್ಲಿ ವರ್ಗಾವಣೆ ಮಾಡಲು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಅಭಿವೃದ್ಧಿ ಯೋಜನೆಯ ಉದ್ದೇಶಕ್ಕಾಗಿ ಅದರಲ್ಲಿ ನಿಹಿತವಾಗಿರುವ ಅಥವಾ ಅದು ಆರ್ಜಿಸಿದ್ದ ಯಾವುದೇ ಭೂಮಿಯನ್ನು, ಖಾಲಿ ಜಾಗವನ್ನು ರೂಪಿಸುವ ಅಥವಾ ಕಟ್ಟಡ ನಿರ್ಮಾಣದ ಉದ್ದೇಶಗಳಿಗಾಗಿ ಅಥವಾ ಯಾವುದೇ ಇತರ ರೀತಿಯಿಂದ ವಿನಿಯೋಗಿಸಲು [1][ಅಥವಾ ಬಳಸಲು][1],

-ಅಧಿಕಾರ ಹೊಂದಿರತಕ್ಕದ್ದು.

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಸೇರಿಸಲಾಗಿದೆ.

**9. ಮಂಡಲಿಯ ಉಪ-ಸಮಿತಿ.-** (1) ಮಂಡಲಿಯು ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ, ಆಯುಕ್ತನು ಅಧ್ಯಕ್ಷನಾಗಿ ಮತ್ತು ಐದು ಜನರಿಗೆ ಮೀರದಂಥ ಇತರ ಸದಸ್ಯರಿರುವ ಉಪ-ಸಮಿತಿಯನ್ನು ರಚಿಸಬಹುದು.

(2) ಉಪ-ಸಮಿತಿಯು, ಮಂಡಲಿಯು ಪ್ರತ್ಯಾಯೋಜಿಸಿದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಮಂಡಲಿಯ ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ಉಪ-ಸಮಿತಿಯು ತಿಂಗಳಿಗೆ ಕನಿಷ್ಠಪಕ್ಷ ಒಂದು ಸಲವಾದರೂ ಸಭೆ ಸೇರತಕ್ಕದ್ದು ಮತ್ತು ವಿನಿಯಮಗಳಿಂದ ಉಪಬಂಧಿಸಬಹುದಾದಂತೆ ಅದರ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಅಂಥ ಪ್ರಕ್ರಿಯಾ ನಿಯಮಗಳನ್ನು ಪಾಲಿಸತಕ್ಕದ್ದು.

**10. ಆಯುಕ್ತನ ನೇಮಕಾತಿ.-** (1) ಸರ್ಕಾರವು, ಸರ್ಕಾರದ ಉಪ ಕಾರ್ಯದರ್ಶಿ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಮಂಡಲಿಯ ಆಯುಕ್ತನಾಗಿ ನೇಮಿಸತಕ್ಕದ್ದು;

(2) ಆಯುಕ್ತನು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯಗಳನ್ನು ಸ್ವೀಕರಿಸತಕ್ಕದ್ದು.

(3) ರಾಜ್ಯ ಸರ್ಕಾರವು, ತಾನು ಯುಕ್ತವೆಂದು ಭಾವಿಸುವಂಥ ಅವಧಿಗೆ ಆಯುಕ್ತನಿಗೆ ಗೈರು ಹಾಜರಾಗಲು ಅನುಮತಿ ನೀಡಬಹುದು.

**11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಆಯುಕ್ತನು, ಮಂಡಲಿಯ ಮುಖ್ಯ ಕಾರ್ಯನಿರ್ವಾಹಕ ಮತ್ತು ಆಡಳಿತಾಧಿಕಾರಿಯಾಗಿರತಕ್ಕದ್ದು.

(2) ಆಯುಕ್ತನು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಅವನಿಗೆ ಪ್ರದತ್ತವಾಗಿರುವಂಥ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,-

(ಎ) ಮಂಡಲಿಯ ನಿರ್ಣಯಗಳನ್ನು ಕಾರ್ಯಗತಗೊಳಿಸುವುದು;

(ಬಿ) ಮಂಡಲಿಯ ಪತ್ರ ವ್ಯವಹಾರವನ್ನು ಹೊಂದಿರುವುದು ಹಾಗೂ ನಡೆಸುವುದು;

(ಸಿ) ಸರ್ಕಾರವು ನಿರ್ದೇಶಿಸಬಹುದಾದಂಥ ಯೋಜನೆಗಳನ್ನು ಕಾರ್ಯಗತಗೊಳಿಸುವುದು ಮತ್ತು ಕಾಮಗಾರಿಗಳನ್ನು ನಿರ್ವಹಿಸುವುದು ಮತ್ತು ಆ ಬಗ್ಗೆ ಅವಶ್ಯವಾಗುವ ವೆಚ್ಚಗಳನ್ನು ವಹಿಸಿಕೊಳ್ಳುವುದು;

(ಡಿ) ಮಂಡಲಿಯ ಯೋಜನೆಗಳ ಅನುಷ್ಠಾನಕ್ಕೆ ಜವಾಬ್ದಾರನಾಗಿರುವುದು;

(ಇ) ಮಂಡಲಿಯ ಲೆಕ್ಕ ಪತ್ರಗಳನ್ನು ನಿರ್ವಹಿಸುವುದು ಮತ್ತು ಮಂಡಲಿಯ ಲೆಕ್ಕಪತ್ರಗಳನ್ನು ನಿರ್ವಹಿಸಲು ಜವಾಬ್ದಾರನಾಗಿರುವುದು;

(ಎಫ್) ಮಂಡಲಿಯ ಅಧಿಕಾರಿಗಳು ಮತ್ತು ನೌಕರರ ಮೇಲೆ, ಕಾರ್ಯನಿರ್ವಹಣೆ, ಆಡಳಿತ ವಿಷಯಗಳು ಮತ್ತು ಅಂಥ ಅಧಿಕಾರಿಗಳು ಮತ್ತು ನೌಕರರ ಸೇವಾ ವಿಷಯಗಳು ಹಾಗೂ ಅವರ ವೇತನ ಮತ್ತು ಭತ್ಯಗಳನ್ನು ವಿನಿಯಮನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಹಾಗೂ ನಿಯಂತ್ರಣವನ್ನು ಹೊಂದಿರುವುದು.

(ಜಿ) ಮಂಡಲಿಯ ನಡವಳಿಗಳ ಸಂಕ್ಷಿಪ್ತ ಟಿಪ್ಪಣಿಗಳ ಪ್ರತಿಯನ್ನು ಮತ್ತು ಯಾವುದೇ ವಿವರಣೆ ಅಥವಾ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಕೋರಬಹುದಾದ ಇತರ ಮಾಹಿತಿಯನ್ನು ರಾಜ್ಯ ಸರ್ಕಾರಕ್ಕೆ ಒದಗಿಸುವುದು.

(ಹೆಚ್) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರಡಿಯಲ್ಲಿ ಅವನಿಗೆ ಪ್ರದತ್ತವಾಗುವಂಥ ಇತರ ಕರ್ತವ್ಯಗಳನ್ನು ನಿರ್ವಹಿಸುವುದು.

**12. ಮಂಡಲಿಯ ನೌಕರರು.-** (1) ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು, ಮಂಡಲಿಯು, ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅದು ಅವಶ್ಯಕವೆಂದು ಭಾವಿಸುವಂಥ ಸಂಖ್ಯೆಯ ಸದಸ್ಯರನ್ನು ನೇಮಕ ಮಾಡಿಕೊಳ್ಳಬಹುದು:

ಪರಂತು, ರಾಜ್ಯ ಸರ್ಕಾರವು ಭಾರತೀಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಸೇವೆಯಿಂದ ಅಥವಾ ಕರ್ನಾಟಕ ರಾಜ್ಯ ಲೆಕ್ಕಪತ್ರ ಸೇವೆಗಳಿಂದಾಗಲಿ "ಎ" ಗುಂಪಿನ [1][ಕಿರಿಯ ವೇತನ ಶ್ರೇಣಿಯ ದರ್ಜೆಗಿಂತ ಕಡಿಮೆಯಲ್ಲದ ಅಧಿಕಾರಿಯನ್ನು ಪ್ರತಿನಿಯೋಜನೆಯ ಮೇಲೆ][1] ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯಾಗಿ ನೇಮಕ ಮಾಡತಕ್ಕದ್ದು.

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಪ್ರತಿಯೋಜಿಸಲಾಗಿದೆ.

(2) ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯು ಆಯುಕ್ತನ ನಿಯಂತ್ರಣದಡಿಯಲ್ಲಿ ಕೆಲಸ ನಿರ್ವಹಿಸತಕ್ಕದ್ದು. ಅವನು ಮಂಡಲಿಯ ಹಣಕಾಸು ವ್ಯವಹಾರಗಳ ಬಗ್ಗೆ ವಾಸ್ತವಿಕವಾದ ಹಾಗೂ ನ್ಯಾಯವಾದ ಚಿತ್ರಣವನ್ನು ನೀಡುವ ಮೂಲಕ ಹಣಕಾಸು ನಿಯಮಗಳನ್ನು ಪಾಲಿಸಲಾಗುತ್ತಿದೆ ಮತ್ತು ಲೆಕ್ಕಪತ್ರಗಳನ್ನು ಅಂದಂದಿನವರೆಗೆ ನಿರ್ವಹಿಸಲಾಗುತ್ತಿದೆಯೆಂಬುದನ್ನು ಖಚಿತಪಡಿಸತಕ್ಕದ್ದು;

(3) (1)ನೇ ಉಪ-ಪ್ರಕರಣದಲ್ಲಿ ಉಲ್ಲೇಖಿಸಲಾದ ನೌಕರರ ವೇತನಗಳು, ಭತ್ಯಗಳು ಮತ್ತು ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತಿರತಕ್ಕದ್ದು.

(4) ಆಯುಕ್ತನು, ಮಂಡಲಿಯ ನೌಕರರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಕಾರಿಯಾಗಿರತಕ್ಕದ್ದು ಮತ್ತು ಮಂಡಲಿಯ ಸಿಬ್ಬಂದಿಯ ಮೇಲೆ ಸಾಮಾನ್ಯ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಹೊಂದಿರತಕ್ಕದ್ದು.

**13. ಮಂಡಲಿಯ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆಗಳು.-** ಯಾವನೇ ವ್ಯಕ್ತಿಯು ಖುದ್ದಾಗಿ ಅಥವಾ ಅವನ ಪಾಲುದಾರನ ಮೂಲಕ ಅಥವಾ ಅವನ ಏಜೆಂಟ್‌ನ ಮೂಲಕ, ಮಂಡಲಿಯ ಮೂಲಕ ಅಥವಾ ಅದರ ಪರವಾಗಿ ಯಾವುದೇ ಕರಾರಿನಲ್ಲಿ ಅಥವಾ ಮಂಡಲಿಯ ಅಧಿಕಾರಿ ಅಥವಾ ನೌಕರನಾಗಿದ್ದ ಹೊರತು,

ಮಂಡಲಿಯ ಅಡಿಯಲ್ಲಿ, ಅದರ ಮೂಲಕ ಅಥವಾ ಅದರ ಪರವಾಗಿ ಯಾವುದೇ ನಿಯೋಜನೆಯಲ್ಲಿ, ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ, ಮಂಡಲಿಯ ಅಧಿಕಾರಿ ಅಥವಾ ಉದ್ಯೋಗಿಯಾಗತಕ್ಕದ್ದಲ್ಲ ಅಥವಾ ಆಗಿರತಕ್ಕದ್ದಲ್ಲ.

**14. ಮಂಡಲಿಯ ಸಭೆಗಳು.-** (1) ಆಯುಕ್ತನು ಅಧ್ಯಕ್ಷನ ಪೂರ್ವಾನುಮತಿಯೊಂದಿಗೆ ಮತ್ತು ಅಧ್ಯಕ್ಷನು ಯುಕ್ತವೆಂದು ಭಾವಿಸಬಹುದಾದಂಥ ಅವಧಿಗಳ ಅಂತರದಲ್ಲಿ ಮತ್ತು ಅಧ್ಯಕ್ಷನು ನಿರ್ಧರಿಸಬಹುದಾದಂಥ ಸ್ಥಳದಲ್ಲಿ ಮಂಡಲಿಯ ಸಭೆಗಳನ್ನು ನಡೆಸತಕ್ಕದ್ದು:

ಪರಂತು, ಮಂಡಲಿಯು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ಪಕ್ಷ ಎರಡು ಬಾರಿಯಾದರೂ ಸಭೆ ಸೇರತಕ್ಕದ್ದು.

(2) ಪ್ರತಿಯೊಂದು ಸಭೆಯಲ್ಲಿ ಅಧ್ಯಕ್ಷನು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದಾಗಿ ಅಧ್ಯಕ್ಷನಿಗೆ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿರುವ ಸದಸ್ಯರ ಪೈಕಿ ಆಯ್ಕೆ ಮಾಡಲಾಗುವ ಯಾವೊಬ್ಬ ಇತರ ಸದಸ್ಯನು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

(3) ಮಂಡಲಿಯ ತೀರ್ಮಾನಗಳನ್ನು, ಹಾಜರಿರುವ ಸದಸ್ಯರ ಅವಿರೋಧ ಸಕಾರಾತ್ಮಕ ಮತದ ಹಾಗೂ ಮತದಾನದ ಮೂಲಕ ಕೈಗೊಳ್ಳತಕ್ಕದ್ದು. ಮಂಡಲಿಯ ಮುಂದೆ ತೀರ್ಮಾನಕ್ಕಾಗಿ ಬಂದ, ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುವೇ ಭಿನ್ನಾಭಿಪ್ರಾಯಗಳಿದ್ದಲ್ಲಿ, ಆಯುಕ್ತನು ಆ ವಿಷಯವನ್ನು ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯಗಳ ಬಗ್ಗೆ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(4) ಆಯುಕ್ತನು ಮಂಡಲಿಯ ತೀರ್ಮಾನಗಳನ್ನು ಕಾರ್ಯಗತಗೊಳಿಸತಕ್ಕದ್ದು:

ಪರಂತು, ಮಂಡಲಿಯ ಯಾವುದೇ ನಿರ್ಣಯವು ಈ ಅಧಿನಿಯಮದ ಉಪಬಂಧವನ್ನು ಅಥವಾ ಈ ಅಧಿನಿಯಮದ ಅಡಿಯಲ್ಲಿ ಮಾಡಿದ ಅಥವಾ ಹೊರಡಿಸಿದ ಇತರ ಯಾವುದೇ ಕಾನೂನು ಅಥವಾ ಈ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ನಿಯಮ ಅಥವಾ ಹೊರಡಿಸಲಾದ ಅಧಿಸೂಚನೆ ಅಥವಾ ವಿನಿಯಮಗಳನ್ನು ಅಥವಾ ಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಮಂಡಲಿಯ ಹಿತಾಸಕ್ತಿಗೆ ಅಥವಾ ಕೂಡಲ ಸಂಗಮ ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆಗೆ ಪೂರ್ವಗ್ರಹ ಪೀಡಿತ ಅಥವಾ ಹಾನಿಕರವಾಗುವುದೆಂದು ಆಯುಕ್ತನು ಭಾವಿಸಿದರೆ, ಅವನು ನಿರ್ಣಯವನ್ನು ಅನುಮೋದಿಸಲಾದ ಹದಿನೈದು ದಿನಗಳ ಒಳಗಾಗಿ, ವಿಷಯದ ಬಗ್ಗೆ ಆದೇಶಗಳನ್ನು ಕೋರಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು ಮತ್ತು ಮಂಡಲಿಯ ಮುಂದಿನ ಸಭೆಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಮಂಡಲಿಗೆ ತಿಳಿಸತಕ್ಕದ್ದು ಮತ್ತು ಅಂಥ ವಿಷಯದ ಉಲ್ಲೇಖದ ಬಗ್ಗೆ ರಾಜ್ಯ ಸರ್ಕಾರದ ಆದೇಶವನ್ನು ಸ್ವೀಕರಿಸುವವರೆಗೆ, ಆಯುಕ್ತನು ಆ ನಿರ್ಣಯವನ್ನು ಪರಿಣಾಮಕಾರಿಗೊಳಿಸತಕ್ಕದ್ದಲ್ಲ.

(5) ಮಂಡಲಿಯು, ಅದರ ಸಭೆಗಳ ಕಾರ್ಯಕಲಾಪಗಳಿಗೆ ಸಂಬಂಧಪಟ್ಟಂತೆ ಈ ಅಧಿನಿಯಮದ ಉಪಬಂಧಗಳಿಗೆ ಮತ್ತು ನಿಯಮಗಳಿಗೆ ಅಸಂಗತವಾಗದಿರುವಂತೆ, ವಿನಿಯಮಗಳ ಮೂಲಕ [1][ಪ್ರಕ್ರಿಯೆಗಳನ್ನು ಗೊತ್ತುಪಡಿಸಬಹುದು][1].

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಪ್ರತಿಯೋಜಿಸಲಾಗಿದೆ.

**15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು.-** ಅಧ್ಯಕ್ಷನಾಗಿ ಅಥವಾ ಸದಸ್ಯನಾಗಿ ಕಾರ್ಯನಿರ್ವಹಿಸುವ ಯಾವೊಬ್ಬ ವ್ಯಕ್ತಿಯ ನೇಮಕಾತಿಯಲ್ಲಿನ ಅನರ್ಹತೆ ಅಥವಾ ಲೋಪವು ಮಂಡಲಿಯ ಯಾವುದೇ ಕೃತ್ಯ ಅಥವಾ ನಡವಳಿಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿದ್ದರೆ, ಅಂಥ ಕೃತ್ಯ ಅಥವಾ ವ್ಯವಹರಣೆಯನ್ನು ದೂಷಿತಗೊಳಿಸುತ್ತದೆಯೆಂದು ಭಾವಿಸತಕ್ಕದ್ದಲ್ಲ.

**16. ಸುತ್ತೋಲೆಯ ಮೂಲಕ ಮಂಡಲಿಯ ತೀರ್ಮಾನಗಳನ್ನು ಸೂಚಿಸುವುದು.-** ಅಧ್ಯಕ್ಷನು, ಯಾವುದೇ ಪ್ರಕರಣವನ್ನು ಮಂಡಲಿಯ ಒಂದು ಸಭೆಯಲ್ಲಿ ಚರ್ಚೆಗೆ ತರುವುದಕ್ಕೆ ಬದಲಾಗಿ, ಆ ಬಗ್ಗೆ ಅಭಿಪ್ರಾಯಕ್ಕಾಗಿ ಮಂಡಲಿಯ ಸದಸ್ಯರಿಗೆ ಸುತ್ತೋಲೆ ಕಳುಹಿಸಲು ನಿರ್ದೇಶಿಸಬಹುದು. ಹಾಗೆ ಸುತ್ತೋಲೆ ಕಳುಹಿಸಲಾದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಎಲ್ಲ ಸದಸ್ಯರು ಅವಿರೋಧವಾಗಿ ಅನುಮೋದಿಸಿದರೆ ಅದನ್ನು ಮಂಡಲಿಯ ಸಕಾರಾತ್ಮಕ ನಿರ್ಣಯವೆಂಬುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು. ಮಂಡಲಿಯ ತೀರ್ಮಾನಕ್ಕಾಗಿ ಸುತ್ತೋಲೆ ಕಳುಹಿಸಲಾದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯವಿರುವುದಾದರೆ ಆಯುಕ್ತನು ಆ ವಿಷಯವನ್ನು ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಆ ಬಗ್ಗೆ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(2) (1)ನೇ ಉಪ-ಪ್ರಕರಣದ ಅಡಿಯಲ್ಲಿ ಅಭಿಪ್ರಾಯಕ್ಕಾಗಿ ಸುತ್ತೋಲೆ ಕಳುಹಿಸಲಾಗಿದ್ದ ಸಂದರ್ಭಗಳಲ್ಲಿ ಯಾವೊಬ್ಬ ಸದಸ್ಯನು ಟಿಪ್ಪಣಿಯಲ್ಲಿ ನಿರ್ದಿಷ್ಟಪಡಿಸಿರುವ ದಿನಾಂಕದೊಳಗೆ ತನ್ನ ಅಭಿಪ್ರಾಯವನ್ನು ತಿಳಿಸಲು ತಪ್ಪಿದರೆ, ಅಂಥ ಸದಸ್ಯನು ಸುತ್ತೋಲೆ ಕಳುಹಿಸಲಾದ ಟಿಪ್ಪಣಿಯಲ್ಲಿ ಒಳಗೊಂಡ ಪ್ರಸ್ತಾವವನ್ನು ಒಪ್ಪಿಕೊಂಡಿದ್ದಾನೆಂದು ಭಾವಿಸತಕ್ಕದ್ದು.

(3) 14ನೇ ಪ್ರಕರಣದ ಉಪಬಂಧಗಳು ಯಥೋಚಿತ ವ್ಯತ್ಯಾಸಗಳೊಂದಿಗೆ ಈ ಪ್ರಕರಣದ ಅಡಿಯಲ್ಲಿ ಸುತ್ತೋಲೆ ಕಳುಹಿಸಲಾದ, ಮಂಡಲಿಯ ತೀರ್ಮಾನಗಳಿಗೆ ಅನ್ವಯವಾಗತಕ್ಕದ್ದು.

(4) (1)ನೇ ಉಪ-ಪ್ರಕರಣದ ಅಡಿಯಲ್ಲಿ ಸುತ್ತೋಲೆಯಲ್ಲಿ ಕಳುಹಿಸುವ ಟಿಪ್ಪಣಿಯ ಅಂಶಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**17. ನಿರ್ದಿಷ್ಟ ಪ್ರಕರಣಗಳಲ್ಲಿ ಮಂಡಲಿಯ ಪರವಾಗಿ ತೀರ್ಮಾನ ಕೈಗೊಳ್ಳಲು ಅಧ್ಯಕ್ಷನ ಅಧಿಕಾರ.-**(1) ಯಾವೊಂದು ವಿಷಯವು 14ನೇ ಪ್ರಕರಣದ ಅಡಿಯಲ್ಲಿ ಮಂಡಲಿಯ ಸಭೆಗಾಗಿ ಅಥವಾ 16ನೇ ಪ್ರಕರಣದ ಅಡಿಯಲ್ಲಿ ಸುತ್ತೋಲೆಯ ಮೂಲಕ ಮಂಡಲಿಯು ತೀರ್ಮಾನಿಸುವವರೆಗೂ ಕಾಯಲು ಸಾಧ್ಯವಾಗದಷ್ಟು ತುರ್ತು ಸ್ವರೂಪದ್ದಾಗಿದೆಯೆಂದು ಅಧ್ಯಕ್ಷನು ಭಾವಿಸಿದರೆ, ಅವನು ಯುಕ್ತವೆಂದು ಭಾವಿಸುವ ಅಂಥ ಆದೇಶಗಳನ್ನು ನೀಡಬಹುದು ಮತ್ತು ಅದನ್ನು 14 ಮತ್ತು 16ನೇ ಪ್ರಕರಣಗಳ ಅಡಿಯಲ್ಲಿ ಮಂಡಲಿಯ ನಿರ್ಣಯಗಳನ್ನು ಜಾರಿಗೊಳಿಸುವ ರೀತಿಯಲ್ಲೇ ಜಾರಿಗೊಳಿಸತಕ್ಕದ್ದು.

(2) ಅಧ್ಯಕ್ಷನು, 14ನೇ ಪ್ರಕರಣದ ಅಡಿಯಲ್ಲಿ ಮಂಡಲಿಯ ಸಭೆಯನ್ನು ನಡೆಸುವ ಅವಶ್ಯಕತೆಯಿಲ್ಲದ ಅಥವಾ 16ನೇ ಪ್ರಕರಣದ ಅಡಿಯಲ್ಲಿ ಮಂಡಲಿಯ ತೀರ್ಮಾನವನ್ನು ಪಡೆಯಬೇಕಾಗಿಲ್ಲದ ನಿರರ್ಥಕವಾದಂಥ ಪ್ರಕರಣಗಳೆಂಬುದಾಗಿ ಭಾವಿಸಿದಾಗಲೂ ಸಹ ಅವನು (1)ನೇ ಉಪ-ಪ್ರಕರಣದಲ್ಲಿರುವಂತೆ ಅವನ ತುರ್ತು ಪರಿಸ್ಥಿತಿಯ ಅಧಿಕಾರವನ್ನು ಚಲಾಯಿಸಬಹುದು.

(3) ಈ ಪ್ರಕರಣದ ಅಡಿಯಲ್ಲಿ ಅಧ್ಯಕ್ಷನು ಕೈಗೊಂಡ ಪ್ರತಿಯೊಂದು ತೀರ್ಮಾನದ ಬಗ್ಗೆ ಮಂಡಲಿಗೆ ಅದರ ಮುಂದಿನ ಸಭೆಯಲ್ಲಿ ವರದಿ ಮಾಡತಕ್ಕದ್ದು.

## ಅಧ್ಯಾಯ III

## ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆ

**18. ಶ್ರೀ ಸಂಗಮನಾಥ ದೇವಸ್ಥಾನವನ್ನು ಮಂಡಲಿಯಲ್ಲಿ ನಿಹಿತಗೊಳಿಸುವುದು.-** (1) ಯಾವುದೇ ಪದ್ಧತಿ, ಸಂಪ್ರದಾಯ, ರೂಢಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ [1][ಸೃಜಿಸಲಾದ ಮತ್ತು ಅಸ್ತಿತ್ವದಲ್ಲಿರುವ ನ್ಯಾಸ][1]ದ ನಿಬಂಧನೆಗಳಲ್ಲಿ ಏನೇ ಇದ್ದರೂ, ಬಿಜಾಪುರ ಜಿಲ್ಲೆಯ ಹುನಗುಂದ ತಾಲ್ಲೂಕಿನ ಸಂಗಮ ಗ್ರಾಮದ ಕೂಡಲ ಸಂಗಮದಲ್ಲಿರುವ ಶ್ರೀ ಸಂಗಮನಾಥ ದೇವಸ್ಥಾನ ಮತ್ತು ಶ್ರೀ ಬಸವೇಶ್ವರ ಐಕ್ಯ ಮಂಟಪದ ಸಂಪೂರ್ಣ ನಿಯಂತ್ರಣ, ಆಡಳಿತ ವ್ಯವಸ್ಥೆ ಮತ್ತು ಮೇಲ್ವಿಚಾರಣೆಯು ರಾಜ್ಯ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು ಮತ್ತು ತರುವಾಯ 3ನೇ ಪ್ರಕರಣದ ಅಡಿಯಲ್ಲಿ ಮಂಡಲಿಯ ರಚನೆಯಾದ ಕೂಡಲೇ ಅದಕ್ಕೆ ವರ್ಗಾವಣೆಯಾಗತಕ್ಕದ್ದು.

1. 1997ರ ಅಧಿನಿಯಮ ಸಂಖ್ಯೆ: 21ರ ಮೂಲಕ ದಿನಾಂಕ: 29.09.1997 ರಿಂದ ಪ್ರತಿಯೋಜಿಸಲಾಗಿದೆ.

(2) ರಾಜ್ಯ ಸರ್ಕಾರವು ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸುವುದು ಅವಶ್ಯವೆಂದು ಭಾವಿಸಿದರೆ, ಅದು ಆದೇಶದ ಮೂಲಕ ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸಲು ಸಕ್ಷಮವಾಗಿರತಕ್ಕದ್ದು.

**19. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು.-** (1) ಮಂಡಲಿಯು, ಅದರ ರಚನೆಯಾದ ಮೇಲೆ, ಆದಷ್ಟು ಬೇಗನೆ ಕೂಡಲ ಸಂಗಮ ಕ್ಷೇತ್ರವನ್ನು ಅಂತರರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ ಮತ್ತು ಸಾಂಸ್ಕೃತಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಮತ್ತು ಜಗಜ್ಯೋತಿ ಶ್ರೀ ಬಸವೇಶ್ವರರ ಹಾಗೂ ಅವರ ಸಮಕಾಲೀನರ ಮತ್ತು ಅನುಯಾಯಿಗಳ ಸೂಕ್ತಿ-ಸಿದ್ಧಾಂತಗಳ ಚರ್ಚೆ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮಾಡಿ ಅದನ್ನು ಅಭಿವೃದ್ಧಿಗೊಳಿಸಲು ಯೋಜನೆಯನ್ನು ಸಿದ್ಧಪಡಿಸತಕ್ಕದ್ದು. ಅಭಿವೃದ್ಧಿ ಯೋಜನೆಯನ್ನು ಹಾಗೆ ಸಿದ್ಧಪಡಿಸುವಾಗ ಮಂಡಲಿಯು ಕೂಡಲ ಸಂಗಮದ ಅಭಿವೃದ್ಧಿಗಾಗಿ ಮುದ್ನಾಳ ಸಮಿತಿಯ ಶಿಫಾರಸ್ಸುಗಳನ್ನು ಪರಿಗಣನೆಗೆ ತೆಗೆದುಕೊಳ್ಳತಕ್ಕದ್ದು. ಅಭಿವೃದ್ಧಿ ಯೋಜನೆಯು ಈ ಮುಂದಿನವುಗಳನ್ನು ಒಳಗೊಂಡಿರಬಹುದು, ಎಂದರೆ:-

(ಎ) ಕೂಡಲ ಸಂಗಮದಲ್ಲಿನ ಶ್ರೀ ಸಂಗಮೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಮತ್ತು ಅದರ ನಿರ್ವಹಣೆಗೆ ಕಾರ್ಯಕ್ರಮಗಳು;

(ಬಿ) ಮಂಡಲಿಯ ಅಭಿಪ್ರಾಯದಲ್ಲಿ ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯವಾದ ಭೂಮಿಯನ್ನು ಆರ್ಜನೆ ಅಥವಾ ಖರೀದಿಯ ಮೂಲಕ, ವಿನಿಯಮ ಅಥವಾ ಅನ್ಯಥಾ ಆರ್ಜಿಸುವುದಕ್ಕಾಗಿ ಪ್ರಸ್ತಾವಗಳು;

(ಸಿ) ಸಾರ್ವಜನಿಕ ಉದ್ಯಾನವನಗಳು, ತೋಟಗಾರಿಕೆ ಅಥವಾ ಮೃಗಾಲಯಗಳು, ಚಿಲುಮೆಗಳಿರುವ ವನಗಳು, ಕೃತಕ ಜಲಪಾತಗಳು, ಆಟದ ಉದ್ಯಾನವನಗಳು, ದೋಣಿ ವಿಹಾರದ ಅಥವಾ ನೀರಿನ ಇತರ ಕ್ರೀಡೆಯ ಸೌಲಭ್ಯವಿರುವ ಸರೋವರಗಳನ್ನು ಅಥವಾ ಪ್ರವಾಸಿಗಳಿಗೆ ಆಕರ್ಷಣೆಯನ್ನುಂಟುಮಾಡುವಂಥ ಇತರ ಕೇಂದ್ರಗಳನ್ನು ನಿರ್ಮಿಸುವುದು;

(ಡಿ) ಬೇರೆ ಬೇರೆ ವರ್ಗದ ಪ್ರವಾಸಿಗರಿಗಾಗಿ ಛತ್ರಗಳು, ವಸತಿ-ಗೃಹಗಳು, ಕಾಟೇಜುಗಳು, ಹೋಟೆಲುಗಳು, ರೆಸ್ಟೋರೆಂಟು ಮತ್ತು ಊಟದ ಮನೆಗಳನ್ನು ನಿರ್ಮಿಸುವುದು;

(ಇ) ಅವಶ್ಯಕ ಅಂಗಡಿಗಳ ಸಾಲುಗಳನ್ನು ಅಥವಾ ಅಂಗಡಿ-ಸಂಕೀರ್ಣಗಳನ್ನು ನಿರ್ಮಿಸುವುದು;

(ಎಫ್) ಅನುಭವ ಮಂಟಪದ ಮಾದರಿಯಲ್ಲಿ ಸಭಾಂಗಣವನ್ನು ನಿರ್ಮಿಸುವುದು;

(ಜಿ) ಪ್ರಮುಖ ಸ್ಥಳಗಳಲ್ಲಿ ಪ್ರಾರ್ಥನಾ ಮಂದಿರಗಳ ಮತ್ತು ಧ್ಯಾನ ಮಂದಿರಗಳ ನಿರ್ಮಾಣ;

(ಹೆಚ್) 2ನೇ ಪ್ರಕರಣದಲ್ಲಿ ಪರಿಭಾಷಿಸಲಾದಂತೆ ಸೌಕರ್ಯಗಳನ್ನು ಕಲ್ಪಿಸುವುದು;

(ಐ) ಕಟ್ಟಡಗಳ ನಿರ್ಮಾಣ ಹಾಗೂ ಪುನರ್-ನಿರ್ಮಾಣವೂ ಸೇರಿದಂತೆ ಎಲ್ಲಾ ಅಥವಾ ಯಾವುದೇ ಭೂಮಿಯ ವಿನ್ಯಾಸ ಮತ್ತು ಮರು ವಿನ್ಯಾಸ;

(ಜೆ) ಚರಂಡಿ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಪೂರೈಕೆ ಮತ್ತು ನೈರ್ಮಲ್ಯ ವ್ಯವಸ್ಥೆಯ ಏರ್ಪಾಡು;

(ಕೆ) ಮಂಡಲಿಯು, ಸಾಧಾರಣವಾಗಿ ತನ್ನ ಯೋಜನಾ ಕಾರ್ಯಕ್ಕೆ ಅನುವಾಗುವಂತೆ ಮತ್ತು ಮುಖ್ಯವಾಗಿ ಉತ್ತಮ ಚರಂಡಿ ವ್ಯವಸ್ಥೆಯನ್ನು ಒದಗಿಸಲು, ಯಾವುದೇ ಭೂಮಿಯನ್ನು ಎತ್ತರಿಸುವುದು ಸೂಕ್ತವೆಂದು ಭಾವಿಸಿದರೆ ಅಂಥ ಭೂಮಿಯನ್ನು ಎತ್ತರಿಸುವುದು;

(ಎಲ್) ಕೂಡಲ ಸಂಗಮ ಕ್ಷೇತ್ರದಲ್ಲಿರುವ ಪ್ರದೇಶದಲ್ಲಿ ಅಥವಾ ಅದಕ್ಕೆ ಲಗತ್ತಾಗಿರುವ ಪ್ರದೇಶದಲ್ಲಿ ಉತ್ತಮ ಗಾಳಿ-ಬೆಳಕಿನ ವ್ಯವಸ್ಥೆಗಾಗಿ ಖಾಲಿ ಜಾಗಗಳನ್ನು ಬಿಡುವುದು;

(ಎಮ್) ಜನರ ವಾಸಕ್ಕೆ ಯೋಗ್ಯವಲ್ಲದ ಹಾಗೂ ಅಭಿವೃದ್ಧಿ ಯೋಜನೆಗೆ ತಕ್ಕುದಲ್ಲದ ಎಲ್ಲ ಕಟ್ಟಡಗಳನ್ನು ಕೆಡಹುವುದು;

(ಎನ್) ಅಡಚಣೆಯನ್ನುಂಟುಮಾಡುವ ಕಟ್ಟಡಗಳನ್ನು ಅಥವಾ ಆ ಕಟ್ಟಡಗಳ ಭಾಗಗಳನ್ನು ಕೆಡಹುವುದು;

